
ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ


ಗುವಾಹಟಿಯಲ್ಲಿ ಶನಿವಾರದಿಂದ ದಕ್ಷಿಣ ಆಫ್ರಿಕಾ ವಿರುದ್ಧ ಆರಂಭವಾಗಲಿರುವ 2ನೇ ಟೆಸ್ಟ್ ಪಂದ್ಯಕ್ಕೆ ರಿಷಭ್ ಪಂತ್ ನಾಯಕರಾಗಿ ಮುನ್ನಡೆಸಲಿದ್ದಾರೆ. ಈ ಮೂಲಕ ಭಾರತ ತಂಡದ 38ನೇ ಟೆಸ್ಟ್ ತಂಡದ ನಾಯಕರಾಗುವರು.


21 ನವೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ :250 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629





ಸುದೀಪ್ ಮಾರ್ಕ್ ವಿರುದ್ಧ ಅಪಪ್ರಚಾರ » 2


ಮಸೂದೆಗಳ ಅಂಕಿತಕ್ಕೆ ಕಾಲಮಿತಿ ನಿಗದಿ ಸೂಕ್ತವಲ್ಲ » 3





10ನೇ ಬಾರಿ ಬಿಹಾರ ಮುಖ್ಯಮಂತ್ರಿಯಾಗಿ ನಿತೀಶ್ ಕುಮಾರ್ » 4


# ಡಿ.ಕೆ.ಶಿ. ಬೆಂಬಲಿಗರು ದೆಹಲಿಗೆ ದೌಡು

## ನಾಯಕತ್ವ ಬದಲಾವಣೆ ಹೊತ್ತಿನಲ್ಲಿ ಒಕ್ಕಲಿಗ ಟ್ರಂಪ್ ಕಾರ್ಡ್ | ಹೈಕಮಾಂಡ್ ಮುಂದೆ ಶಕ್ತಿ ಪ್ರದರ್ಶನಕ್ಕೆ ಸಜ್ಜು

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯ ರಾಜಕಾರಣದಲ್ಲಿ ಅಧಿಕಾರ ಹಂಚಿಕೆ, ನಾಯಕತ್ವ ಬದಲಾವಣೆ ಚರ್ಚೆ ನಡೆಯುತ್ತಿರುವ ಹೊತ್ತಿನಲ್ಲಿ ದಿಢೀರ್ ಬೆಳವಣಿಗೆಯಂತೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬೆಂಬಲಿಗರು ಗುರುವಾರ ದೆಹಲಿ ಯಾತ್ರೆ ಕೈಗೊಂಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಪೂರ್ಣಗೊಳಿಸಿರುವ ಹಿನ್ನಲೆ ಅಧಿಕಾರ ಹಂಚಿಕೆ ವಿಚಾರ ಕಾಂಗ್ರೆಸ್‌ನಲ್ಲಿ ಭುಗಿಲೆದ್ದಿರುವುದರಿಂದ ಡಿ.ಕೆ.ಶಿವಕುಮಾರ್ ಪರವಾಗಿರುವ ಶಾಸಕರು ದೆಹಲಿಗೆ ತೆರಳಿದ್ದು, ಹೈಕಮಾಂಡ್ ಮುಂದೆ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದ್ದಾರೆ. ಇನ್ನೂ ಎರಡೂವರೆ ವರ್ಷಗಳ ಕಾಲ ನಾನೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತೇನೆಂದು ಸಿದ್ದರಾಮಯ್ಯ ಹೇಳಿಕೆ ಬೆನ್ನಲ್ಲೇ ಈ ಬೆಳವಣಿಗೆ ತೀವ್ರಗೊಂಡಿದೆ.

ಸಚಿವ ಚೆಲುವರಾಯಸ್ವಾಮಿ, ಶಾಸಕರಾದ ಮಾಗಡಿ ಬಾಲಕೃಷ್ಣ, ಇಕ್ಬಾಲ್ ಹುಸೇನ್, ಶಿವಗಂಗಾ ಬಸವರಾಜ್, ಗುಬ್ಬಿ ಶ್ರೀನಿವಾಸ್, ರವಿ ಗಣಿಗ, ದಿನೇಶ್ ಗೂಳಿಗೌಡ, ಆನೇಕಲ್ ಶಿವಣ್ಣ, ಕುಣಿಗಲ್ ರಂಗನಾಥ್, ನೆಲಮಂಗಲ ಶ್ರೀನಿವಾಸ್ ಅವರು ಹೈಕಮಾಂಡ್ ಭೇಟಿಗೆ ತೆರಳಿದ್ದಾರೆ. ಶುಕ್ರವಾರ ಮತ್ತೊಂದು ತಂಡ ಪ್ರಯಾಣ ಬೆಳೆಸಲು ಪ್ಲ್ಯಾನ್ ಮಾಡಿಕೊಂಡಿದೆ. ರಾಜ್ಯದ ಪ್ರಸಕ್ತ ರಾಜಕೀಯ ಬೆಳವಣಿಗೆ ಕುರಿತು ಚರ್ಚಿಸಲು, ಡಿ.ಕೆ. ಶಿವಕುಮಾರ್ ಅವರ ಬೆಂಬಲಿತ ಸಚಿವ, ಶಾಸಕರು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಭೇಟಿಗೆ ಸಮಯ ಕೇಳಿದ್ದಾರೆ.



**ಇಂದು ಮತ್ತಷ್ಟು ಶಾಸಕರು ದೆಹಲಿಗೆ**

ಡಿ.ಕೆ.ಶಿವಕುಮಾರ್ ಪರ ಬೆಂಬಲಿಗರು ತಮ್ಮ ನಾಯಕನಿಗೆ ಮುಖ್ಯಮಂತ್ರಿ ಹುದ್ದೆ ನೀಡಬೇಕೆಂದು ಒತ್ತಡ ಹಾಕುತ್ತಿದ್ದಾರೆ. ಸಚಿವ ಎನ್.ಚಲುವರಾಯಸ್ವಾಮಿ ಜೊತೆ ಹಲವು ಶಾಸಕರು ಗುರುವಾರ ದೆಹಲಿಗೆ ತೆರಳಿದ್ದಾರೆ. ಶುಕ್ರವಾರ ಇನ್ನೂ ಹನ್ನೆರಡು ಶಾಸಕರು ದೆಹಲಿ ತಲುಪುವ ಸಾಧ್ಯತೆ ಇದೆ. ಕೆಲವು ದಿನಗಳ ಹಿಂದೆಯಷ್ಟೇ ವಿಧಾನ ಪರಿಷತ್ ಸದಸ್ಯರು ರಾಷ್ಟ್ರ ರಾಜಧಾನಿಯಲ್ಲಿ ಬೀಡು ಬಿಟ್ಟು, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳೊಂದಿಗೆ ಮಾತನಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಒಕ್ಕಲಿಗ ಟ್ರಂಪ್ ಕಾರ್ಡ್**

ವಿಧಾನಸಭಾ ಚುನಾವಣಾ ಫಲಿತಾಂಶ ಘೋಷಣೆಯಾದ ನಂತರ ಮುಖ್ಯಮಂತ್ರಿ ಹುದ್ದೆಗೆ


» ನಾಲ್ಕನೇ ಪುಟದಲ್ಲಿ


### ಸಿದ್ದರಾಮಯ್ಯ ಕೊಟ್ಟ ಮಾತು ತಪ್ಪಲ್ಲ: ಡಿ.ಕೆ.ಸುರೇಶ್



ನಾಯಕತ್ವ ಬದಲಾವಣೆಯ ಚರ್ಚೆ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಮಾತನ್ನು ಉಳಿಸಿಕೊಳ್ಳುತ್ತಾರೆಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಹೋದರ, ಮಾಜಿ ಸಂಸದ ಡಿ.ಕೆ ಸುರೇಶ್ ಅವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಕೊಟ್ಟ ಮಾತು ತಪ್ಪಲ್ಲ. ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ. ಸಿದ್ದರಾಮಯ್ಯ ಅವರಿಗೂ ಜವಾಬ್ದಾರಿ ಇದೆ. ಯಾರಿಗೂ ಕೊಟ್ಟ ಮಾತಿಗೆ ತಪ್ಪಿಲ್ಲ. ಹಿಂದಿನ ಸರ್ಕಾರದಲ್ಲಿ ಕೂಡ ಮಾತಿನ ಪ್ರಕಾರವೇ ನಡೆದಿದ್ದಾರೆ. ಈಗಿನ ಸರ್ಕಾರದಲ್ಲೂ ಕೂಡ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದ್ದಾರೆ ಹಾಗು ಮುಂದೆಯೂ ಕೊಟ್ಟ ಮಾತಿನ ಪ್ರಕಾರವೇ ನಡೆದುಕೊಳ್ಳುತ್ತಾರೆಂದು ಮಾರ್ಮಿಕ ಹೇಳಿಕೆ ನೀಡಿದ್ದಾರೆ.

# ಡಿ.6 ರಂದು ಜಿಲ್ಲೆಗೆ ಸಿಎಂ: ಶಾಸಕರೊಂದಿಗೆ ಸಚಿವರ ಚರ್ಚೆ

• ಪ್ರಜೋದಯ ವರದಿ

**ಹಾಸನ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.6ರಂದು ಜಿಲ್ಲೆಗೆ ಆಗಮಿಸಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ, ಉದ್ಘಾಟನೆ ನೆರವೇರಿಸುವ ಹಿನ್ನಲೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಬೆಂಗಳೂರಿನ ವಿಕಾಸಸೌಧದ ಕಚೇರಿಯಲ್ಲಿ ಜಿಲ್ಲೆಯ ಸಂಸದ, ಶಾಸಕರ ಜೊತೆಗೆ ಸಭೆ ನಡೆಸಿದರು.

ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್, ಗೃಹಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ಶಾಸಕ ಸಿ.ಎನ್.ಬಾಲಕೃಷ್ಣ, ಸಿಮೆಂಟ್ ಮಂಜು ಅವರು ಭಾಗವಹಿಸಿ, ಡಿ.6 ರಂದು ಉದ್ಘಾಟನೆಗೊಳ್ಳಲಿರುವ ಹಾಗು ಶಂಕುಸ್ಥಾಪನೆಗೊಳ್ಳಲಿರುವ ಯೋಜನೆಗಳ ಬಗ್ಗೆ, ಕಾರ್ಯಕ್ರಮದ ಪೂರ್ವ ಸಿದ್ಧತೆ ಬಗ್ಗೆ ಚರ್ಚಿಸ ಲಾಯಿತು.

ಮುಖ್ಯಮಂತ್ರಿ ಕಾರ್ಯಕ್ರಮದಲ್ಲಿ ಜಿಲ್ಲೆಯ ನೂತನ ಕಂದಾಯ ಗ್ರಾಮಗಳ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ. ಜಿಲ್ಲೆಯ ನೀರಾವರಿ ಯೋಜನೆಗಳಿಗೆ ಅನುದಾನ ಬಿಡುಗಡೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನ ಸೆಳೆಯುವ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಿದರು.

ಇದರ ಜೊತೆಗೆ ಜಿಲ್ಲೆಯ ವಿವಿಧ ಅಭಿವೃದ್ಧಿ ವಿಚಾರಗಳಿಗೆ ಸಂಬಂಧಿಸಿದಂತೆ ಮಹತ್ವದ ಮಾತುಕತೆ ನಡೆಸಿದ ಜಿಲ್ಲೆಯ ಶಾಸಕರು ತಮ್ಮ ಕ್ಷೇತ್ರದಲ್ಲಿ ಆಗಬೇಕಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಗಮನ ಸೆಳೆದರು.

ಮುಂದಿನ ವರ್ಷ ಹಾಸನಾಂಬ ದೇವಾಲಯಕ್ಕೆ ಮತ್ತಷ್ಟು ಹೆಚ್ಚಿನ ಜನರಿಗೆ ದೇವರ ದರ್ಶನಕ್ಕೆ ಅವಕಾಶ ಮಾಡಿಕೊಡುವ ಬಗ್ಗೆಯೂ ಚರ್ಚೆ ನಡೆಸಲಾಯಿತು. ಆಗಮಿಸುವ ಭಕ್ತರಿಗೆ ದೇವಿ ದರ್ಶನಕ್ಕೆ ಸಹಾಯವಾಗುವಂತೆ ದೇವಾಲಯದ ವಾಸ್ತುಶಿಲ್ಪ ಶೈಲಿಯನ್ನು ಗಮನದಲ್ಲಿಟ್ಟು ದೇವಾಲಯದ ಗರ್ಭಗುಡಿ ಮುಂದಿನ ನೂತನ ಕಟ್ಟಡದ ವಿನ್ಯಾಸದಲ್ಲಿ ಅಲ್ಪ ಬದಲಾವಣೆ. ಕಲ್ಲು ಮಂಟಪ ನಿರ್ಮಾಣದ ಬಗ್ಗೆ ಮಹತ್ವದ ಚರ್ಚೆ ನಡೆಸಿದ ವೇಳೆ, ದೇವಾಲಯದ ಈ ಬದಲಾವಣೆಯಿಂದ ಭಕ್ತರಿಗೆ ಮತ್ತಷ್ಟು ಉತ್ತಮವಾಗಿ ದೇವರ ದರ್ಶನವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.



# ಆರ್‌ಟಿಐ ದಾಖಲೆಗಳಿಗಾಗಿ ಹಸು ಮಾರಾಟ ಮಾಡಿದ ರೈತ



• ಪ್ರಜೋದಯ ವರದಿ

**ಅರಕಲಗೂಡು:** ಸರ್ಕಾರಿ ಕಚೇರಿಗಳಿಗೆ ವಿನಾಕಾರಣ ಅಲೆದಾಡಿಸುವ ಅಧಿಕಾರಿಗಳ ಪ್ರವೃತ್ತಿಯಿಂದ ಬೇಸತ್ತ ರೈತನೊಬ್ಬ ಮಾಹಿತಿ ಹಕ್ಕು ಕಾಯ್ದೆಯಡಿ ಗ್ರಾಮ ಪಂಚಾಯಿಯೊಂದರ ಕಾಮಗಾರಿಗಳಿಗೆ ಸಂಬಂಧಿಸಿದ ಸಾವಿರಾರು ಪುಟಗಳ ದಾಖಲಾತಿಯನ್ನು ಮಾಹಿತಿ ಹಕ್ಕು ಕಾಯ್ದೆಯಡಿ ಪಡೆದು ಕೊಂಡಿದ್ದಾರೆ.

ಕಡತಗಳನ್ನು ಪಡೆ ಯಲು ಶುಲ್ಕಕ್ಕೆ ಹಣ ಹೊಂದಿಸಲು ಒಂದು ಹಸುವನ್ನೇ ಅವರು ಮಾರಾಟ ಮಾಡಿದ್ದಾರೆ. ಕಡೆಗೆ 32 ಸಾವಿರ ಪುಟಗಳ ದಾಖಲಾತಿಗಳನ್ನು ಎತ್ತಿನಗಾಡಿ ಯಲ್ಲಿ ತುಂಬಿ ಮನೆಗೆ ತಂದಿದ್ದಾರೆ.

ರಾಮನಾಥಪುರ ಹೋಬಳಿ ಬಸವನಹಳ್ಳಿ ಗ್ರಾಮದ ಬಿ.ಎಸ್.ರವಿ ಎಂಬುವವರು ಕಾಳೇನಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ನಡೆದಿರುವ ನೂರಾರು ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಕೋರಿ ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿದ್ದರು.

ಅದಕ್ಕೆ ಪ್ರತಿಯಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೋಟೀಸ್ ನೀಡಿ ಬೇಕಾದ ದಾಖಲೆಗಳನ್ನು ಪಡೆದುಕೊಳ್ಳಲು ಕಡತಗಳನ್ನು ಪರಿಶೀಲಿಸಲು ತಿಳಿಸಿದ್ದರು. ಅರ್ಜಿದಾರ ಬಯಸಿದ ದಾಖಲೆಗಳು 16,370 ಪ್ರಟಗಳು ಇದ್ದಿದ್ದರಿಂದ ಪ್ರತಿ ಕಾಪಿಗೆ 2 ರೂ. ನಂತೆ 32,340 ರೂ. ಶುಲ್ಕವನ್ನು ಡಿಡಿ ಮೂಲಕ ಪಾವತಿಸಲು ಸೂಚಿಸಿದ್ದರು. ಅದರನ್ವಯ 16,370 ಪ್ರತಿಗಳನ್ನು ಅಂಚೆ ಮೂಲಕ ಪಿಡಿಓ ಒದಗಿಸಿದ್ದರು. ಆ ಬೃಹತ್ ದಾಖಲೆಗಳನ್ನು ಅರ್ಜಿದಾರ ಬಿ.ಎಸ್.ರವಿ ತಮ್ಮ ಎತ್ತಿನಗಾಡಿಯಲ್ಲಿ ತುಂಬಿಕೊಂಡು ಮನೆಗೆ ತಂದಿದ್ದಾರೆ.

ಮಾಹಿತಿ ಹಕ್ಕು ಅರ್ಜಿಯಡಿ ದಾಖಲೆಯ ಶುಲ್ಕ ಪಡೆಯಲು ತಮ್ಮ ಮನೆಯಲ್ಲಿದ್ದ ಒಂದು ಹಸುವನ್ನು ಮಾರಾಟ ಮಾಡಿ 25 ಸಾವಿರ ರೂ. ಹಾಗು ಉಳಿಕೆ ಹಣವನ್ನು ಸ್ನೇಹಿತರಿಂದ ಸಾಲವಾಗಿ ಪಡೆದಿದ್ದಾರೆ.

ಆ ದಾಖಲೆಗಳನ್ನು ತಾವು ಕೂಲಂಕುಷವಾಗಿ ಪರಿಶೀಲಿಸಲಿದ್ದು, ಅಕ್ರಮ ಕಂಡು ಬಂದರೆ ಲೋಕಾಯುಕ್ತಕ್ಕೆ ದೂರು ಸಲ್ಲಿಸುತ್ತೇನೆ. ನಾನು ದಾಖಲೆ ಕೋರಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಹಿಂಪಡೆಯುವ ಹಲವು ಆಮಿಷಗಳನ್ನು ಒಡ್ಡಲಾಯಿತು. ಅದಕ್ಕೆ ಬಗ್ಗದಿದ್ದಾಗ ನಾನು ದೌರ್ಜನ್ಯ ಎಸಗಿದ್ದೇನೆಂದು ಆರೋಪಿಸಿ ಕೆಲವು ಗ್ರಾಮ ಪಂಚಾಯಿತಿ ಸದಸ್ಯರು ಪೊಲೀಸ್ ಠಾಣೆಗೆ ಸುಳ್ಳು ದೂರು ನೀಡಿದ್ದಾರೆ. ಈ ಮೂಲಕ ನನ್ನ ಧ್ವನಿ ತಗ್ಗಿಸಲು ಸಾಧ್ಯವಿಲ್ಲ. ನಾವು ಏನಾದರೂ ದಾಖಲೆ ಕೇಳಿಕೊಂಡು ಕಚೇರಿಗಳಿಗೆ ಹೋದರೆ ಇಲ್ಲದ ನಿಯಮ ಪ್ರಸ್ತಾಪಿಸಿ ಜನಸಾಮಾನ್ಯರನ್ನು ಅಲೆದಾಡಿಸುತ್ತಾರೆ. ಜನರಿಗೆ ತೊಂದರೆ ನೀಡುವವರು ಎಲ್ಲ ನಿಯಮ ಪಾಲಿಸಿದ್ದಾರೆಯೇ ಎನ್ನುವುದನ್ನು ಅರಿಯಲು ಈ ದಾಖಲೆಗಳನ್ನು ಪಡೆದುಕೊಂಡಿದ್ದೇನೆಂದು ರವಿ ಹೇಳಿದ್ದಾರೆ.

# ಗ್ರಾಮೀಣ ಭಾಗದಲ್ಲೂ ತಲೆದೋರಿದ ತ್ಯಾಜ್ಯ ಸಮಸ್ಯೆ

## ಪ್ರವಾಸಿ ತಾಣ ಸಂಪರ್ಕ ರಸ್ತೆಗಳಲ್ಲಿ ದುರ್ವಾಸನೆ | ಕಣ್ಮುಚ್ಚಿ ಕುಳಿತ ಗ್ರಾಮ ಪಂಚಾಯಿತಿ | ಲೋಕೋಪಯೋಗಿ-ಅರಣ್ಯ ಇಲಾಖೆ ನಿರ್ಲಕ್ಷ್ಯ

• ಪ್ರಜೋದಯ ವರದಿ

**ಹಾಸನ:** ನಗರ ಹಾಗು ಪಟ್ಟಣ ವ್ಯಾಪ್ತಿಯಲ್ಲಷ್ಟೇ ಕಗ್ಗಂಟಾಗಿದ್ದ ತ್ಯಾಜ್ಯ ಸಮಸ್ಯೆ ಗ್ರಾಮೀಣ ಪ್ರದೇಶಕ್ಕೂ ವಿಸ್ತರಿಸಿದ್ದು, ಸ್ವಚ್ಛ ಭಾರತ್ ಅಭಿಯಾನವನ್ನೇ ಅಣಕಿಸುವಂತಿದೆ.

ಜನದಟ್ಟಣೆ ಹೆಚ್ಚಿರುವ ಸ್ಥಳಗಳಲ್ಲಿ ರಸ್ತೆಯ ಎಲ್ಲೆಂದರಲ್ಲಿ ಕಸ ಸುರಿಯುವ ಪದ್ಧತಿ ಗಮನ ಸೆಳೆಯುತ್ತಿತ್ತು. ಆದರೀಗ ಸಣ್ಣಪುಟ್ಟ ಗ್ರಾಮಗಳಲ್ಲೂ ಇದೇ ವ್ಯಥೆ ಕಂಡು ಬರುತ್ತಿದೆ. ಗಮನ ಹರಿಸಬೇಕಿದ್ದ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಹಾಗು ಅಧಿಕಾರಿಗಳು ಜಾಣ ಮೌನ ವಹಿಸಿದ್ದು ಸಮಸ್ಯೆ ಮತ್ತಷ್ಟು ಜಟಿಲವಾಗುತ್ತಿದೆ.

**ಪ್ರವಾಸಿ ತಾಣಗಳಿಗೆ ಕಂಟಕ**

ಹೊಯ್ಸಳರ ಶಿಲ್ಪಕಲೆಗೆ ಹೆಸರಾದ ಜಿಲ್ಲೆಯಲ್ಲಿ ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ದೇವಾಲಯಗಳಿವೆ. ಪ್ರವಾಸಕ್ಕಾಗಿ ಹೊರ ಜಿಲ್ಲೆ ಮಾತ್ರವಲ್ಲದೆ ವಿದೇಶಗಳಿಂದಲೂ ನಿತ್ಯ ಪ್ರವಾಸಿಗರು ಬರುತ್ತಾರೆ. ಆದರೆ, ರಸ್ತೆ ಬದಿಯ ಕಸದ ರಾಶಿಯೇ ಜನರನ್ನು ಸ್ವಾಗತಿಸುತ್ತಿವೆ. ಬೇಲೂರು, ಹಳೇಬೀಡು, ಶ್ರವಣಬೆಳಗೊಳ, ದೊಡ್ಡಗದ್ದವಳ್ಳಿ, ಸಕಲೇಶಪುರದ ಮಂಜ್ರಾಬಾದ್ ಕೋಟೆ, ಶಾಂತಿಗ್ರಾಮದ ಲಕ್ಷ್ಮಿ ನರಸಿಂಹಸ್ವಾಮಿ ದೇವಾಲಯ ಹೀಗೆ ನಾನಾ ಪ್ರವಾಸಿ ತಾಣಗಳಿಗೆ ನಿತ್ಯ ಜನರು ಬರುತ್ತಾರೆ. ಅನೈರ್ಮಲ್ಯ ಪ್ರವಾಸಿಗರ ಅಸಮಾಧಾನಕ್ಕೆ ಕಾರಣವಾಗಿದೆ.



ಬೇಲೂರು ತಾಲ್ಲೂಕಿನ ಹಗರೆ-ಹಳೇಬೀಡು ರಸ್ತೆಯ ಇಕ್ಕೆಲಗಳಲ್ಲಿ ಕಸದ ರಾಶಿ ಗಬ್ಬು ನಾರುತ್ತಿದ್ದು, ಮಾಂಸದ ತ್ಯಾಜ್ಯ ಸ್ಥಳೀಯರ ನಿದ್ದೆಗೆಡಿಸಿದೆ. ಮಾದೀಹಳ್ಳಿ ಹೋಬಳಿ ಹಗರೆಯಲ್ಲಿ ಕಸದ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ. ಎರಡು ವರ್ಷದ ಹಿಂದೆ ಹಳೇಬೀಡು ರಸ್ತೆಯಲ್ಲಿ ತ್ಯಾಜ್ಯವನ್ನು ಹಾಕಲಾಗುತ್ತಿತ್ತು. ಬೀದಿ ನಾಯಿ ಹಾಗು ಬಿಡಾಡಿ ದನಗಳು ಆಹಾರ ಅರಸಿ ತ್ಯಾಜ್ಯವನ್ನೆಲ್ಲಾ ರಸ್ತೆಗೆ ಬಿಸಾಡುತ್ತಿದ್ದವು. ಅದನ್ನು ಗಂಭೀರವಾಗಿ ಪರಿಗಣಿಸಿದ್ದ ಗ್ರಾಮ ಪಂಚಾಯಿತಿ ಅಧಿಕಾರಿಗಳು ರಸ್ತೆ ಬದಿ ಕಸ ಸುರಿಯದಂತೆ ಎಲ್ಲಾ ಹೋಟೆಲ್ ಮಾಲೀಕರು ಹಾಗು ನಿವಾಸಿಗಳಿಗೆ ಎಚ್ಚರಿಕೆ ನೀಡಿದ್ದರು.

ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿತು ಎನ್ನುತ್ತಿರುವಾಗ ಕಳೆದ ನಾಲ್ಕು ತಿಂಗಳಿಂದ ರಸ್ತೆ ಬದಿ ಕಸ ಸುರಿಯುತ್ತಿರುವವರ ಸಂಖ್ಯೆ ಹೆಚ್ಚಿದೆ. ಹಗರೆಯಿಂದ ಮಲ್ಲಾಪುರದವರೆಗೆ ರಸ್ತೆಯ ಎಡಬದಿಯಲ್ಲಿ ಕಸದ ರಾಶಿ ಕಣ್ಣಿಗೆ ರಾಚುತ್ತಿದೆ. ಪ್ಲಾಸ್ಟಿಕ್ ಊಟದ ಪೇಪರ್, ಕೋಳಿ, ಇತರೆ ಮಾಂಸದ ತ್ಯಾಜ್ಯ, ಬಾರ್‌ನಲ್ಲಿ ಉಪಯೋಗಿಸುವ ಪ್ಲಾಸ್ಟಿಕ್ ಲೋಟ, ಮದ್ಯದ ಬಾಟಲಿ, ಹಾಸಿಗೆ ದಿಂಬು, ಬ್ಯಾಗ್ ಇನ್ನಿತರ ತ್ಯಾಜ್ಯಗಳನ್ನು ಮೂಟೆಯಲ್ಲಿ ತಂದು ಸುರಿಯಲಾಗುತ್ತಿದೆ. ಮಾಂಸದ ಮೂಟೆಯಲ್ಲಿ ರಕ್ತ ಸೋರಿಕೆಯಾಗಿ ದುರ್ವಾಸನೆ ಬೀರುತ್ತಿದ್ದು, ನಾಯಿಗಳೆಲ್ಲಾ ಎಳೆದು ರಸ್ತೆಗೆ ಚೆಲ್ಲುತ್ತಿವೆ. ಅದರಿಂದ ವಾಹನ ಚಾಲಕರು, ಸಾರ್ವಜನಿಕರು ವಾಸನೆಗೆ ಬೇಸತ್ತು ಮೂಗು ಮುಚ್ಚಿಕೊಂಡು ಪ್ರಯಾಣಿಸುವಂತಾಗಿದೆ. ಊಟದ ಪ್ಲಾಸ್ಟಿಕ್ ಪೇಪರ್‌ಗಳನ್ನು ಹಸುಗಳು ತಿಂದು ಅನಾರೋಗ್ಯಕ್ಕೀಡಾಗುತ್ತಿವೆ. ಕ್ರಿಮಿ ಕೀಟಗಳು ಉತ್ಪತ್ತಿಯಾಗಿ ಸಾಂಕ್ರಾಮಿಕ ರೋಗಗಳ ಆವಾಸಸ್ಥಾನವಾಗಿ ಮಾರ್ಪಟ್ಟಿದೆ. ಸಮೀಪದಲ್ಲೇ ಸರ್ಕಾರಿ ಪ್ರೌಢಶಾಲೆ ಹಾಗು ಕಾಲೇಜು ಇದ್ದು ವಿದ್ಯಾರ್ಥಿಗಳು ಶಾಲೆಯ ಒಳಗೆ ಕುಳಿತು ಪಾಠ ಕೇಳದ ಪರಿಸ್ಥಿತಿ ನಿರ್ಮಾಣವಾಗಿದೆ.

**ನೊಣ-ಸೊಳ್ಳೆಗಳ ಸಂತತಿ ತಾಣ**

ಮೂಟೆಗಳಲ್ಲಿ ಮಾಂಸದ ತ್ಯಾಜ್ಯಗಳನ್ನು ತಂದು ಹಾಕುತ್ತಿರುವುದರಿಂದ ಮೂಟೆಗಳಿಂದ ರಕ್ತ ಸೋರಿಕೆಯಾಗಿ ಕೊಳೆತು ಸೊಳ್ಳೆಗಳು ಹಾಗು ನೊಣಗಳ ಸಂತತಿ ಹೆಚ್ಚಾಗಿದೆ. ರಸ್ತೆಯಲ್ಲಿ ಸಂಚರಿಸಿದರೆ ಸೊಳ್ಳೆಗಳ ಆರ್ತನಾದ ಕಿವಿಗೆ ಅಪ್ಪಳಿಸುತ್ತದೆ. ಅದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಭೀತಿಯೂ ಕಾಡುತ್ತಿದೆ.

**ಗಮನಕ್ಕೆ ಇಲ್ಲ ಎಂದ ಗ್ರಾ.ಪಂ.**

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಮಸ್ಯೆಗೆ ಸ್ಪಂದಿಸಬೇಕಿದ್ದ ಪಂಚಾಯಿತಿ ಅಧಿಕಾರಿ ಹಾಗು ಜನಪ್ರತಿನಿಧಿಗಳು ಸಮಸ್ಯೆ ತಮ್ಮ ಗಮನಕ್ಕೆ ಬಂದಿಲ್ಲವೆಂಬ ಉಡಾಫೆ ಉತ್ತರ ನೀಡುತ್ತಾರೆ. ತ್ಯಾಜ್ಯ ವಿಲೇವಾರಿ ಸಂಬಂಧ ಯಾರಿಂದಲೂ ದೂರು ಬಂದಿಲ್ಲ. ಹೀಗಾಗಿ ನಾನು ಏನು ಮಾಡಲು ಸಾಧ್ಯವಿಲ್ಲವೆಂಬ ಹಾರಿಕೆಯ ಉತ್ತರ ನೀಡುತ್ತಾರೆ.

ಸ್ವಚ್ಛ ಭಾರತ್ ಅಭಿಯಾನ ಯೋಜನೆಯಡಿ ಗ್ರಾಮ ಪಂಚಾಯಿತಿಯು ಸ್ಥಳೀಯ ಕಾಫಿ, ಟೀ, ಹೋಟೆಲ್, ಮಾಂಸದ ಅಂಗಡಿ, ಬಾರ್‌ಗಳಿಗೆ ನೋಟೀಸ್ ಜಾರಿ ಮಾಡಿ ಸ್ವಚ್ಛತೆಯ ಅರಿವು ಮೂಡಿಸಬೇಕಿತ್ತು. ಅದ್ಯಾವುದನ್ನು ಮಾಡದ ಹಿನ್ನಲೆಯಲ್ಲಿ ಬೇಕಾಬಿಟ್ಟಿ ರಸ್ತೆಗೆ ಕಸ ಎಸೆಯುತ್ತಿದ್ದಾರೆ.

> **ಬೇಲೂರು ರಸ್ತೆ ಬದಿ ಕೋಳಿ, ಹಂದಿ ಮಾಂಸದ ಅಂಗಡಿಗಳಿಗೆ ನೋಟೀಸ್ ನೀಡಿ ಎಲ್ಲೆಂದರಲ್ಲಿ ಕಸ ಸುರಿಯದಂತೆ ಎಚ್ಚರಿಸಿ ನೋಟೀಸ್ ನೀಡಲಾಗುವುದು. ಹಳೇಬೀಡು ರಸ್ತೆಯಲ್ಲಿ ಕಸ ಸುರಿಯುತ್ತಿರುವ ಬಗ್ಗೆ ಈ ವರೆಗೆ ದೂರು ಬಂದಿಲ್ಲ. ಸಾರ್ವಜನಿಕರು ನಿಖರ ಮಾಹಿತಿ ನೀಡಿದರೆ ತಪ್ಪಿತಸ್ಥರಿಗೆ ದಂಡ ವಿಧಿಸಲಾಗುವುದು.**
> **-ಹೊಳೆಯಯ್ಯ, ಹಗರೆ ಗ್ರಾ.ಪಂ. ಕಾರ್ಯದರ್ಶಿ**

**ಕಣ್ಮುಚ್ಚಿ ಕುಳಿತ ಲೋಕೋಪಯೋಗಿ-ಅರಣ್ಯ ಇಲಾಖೆ**

ಹಗರೆಯಿಂದ ಹಳೇಬೀಡು ರಸ್ತೆಯುದ್ದಕ್ಕೂ ಎರಡು ಬದಿ ಅರಣ್ಯ ಪ್ರದೇಶವಿದೆ. ಎರಡು ವರ್ಷದ ಹಿಂದೆ ರಸ್ತೆ ಬದಿ ಗಿಡಗಳನ್ನು ನೆಡಲಾಗಿತ್ತು. ಇದೀಗ ರಸ್ತೆ ಬದಿ ಗಿಡಗಂಟಿ ಬೆಳೆದು ರಸ್ತೆಗೆ ಚಾಚಿಕೊಂಡಿದೆ. ಅದು ಕಸ ಹಾಕುವವರಿಗೆ ವರದಾನಾಗಿದ್ದು, ರಸ್ತೆಯನ್ನು ಅದ್ವಾನಗೊಳಿಸಲಾಗುತ್ತಿದೆ. ಈ ಬಗ್ಗೆ ಗಮನ ಹರಿಸಬೇಕಿದ್ದ ಲೋಕೋಪಯೋಗಿ ಹಾಗು ಅರಣ್ಯ ಇಲಾಖೆ ಸುಮ್ಮನೆ ಇರುವುದು ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ.

# ನಾಳೆ ಕೋಡಿಮಠದಲ್ಲಿ ಲಕ್ಷ ದೀಪೋತ್ಸವ

• ಪ್ರಜೋದಯ ವರದಿ

**ಅರಸೀಕೆರೆ:** ತಾಲ್ಲೂಕಿನ ಹಾರನಹಳ್ಳಿ ಕೋಡಿಹಳ್ಳಿ ಮಠದಲ್ಲಿ ಲೋಕ ಕಲ್ಯಾಣಾರ್ಥವಾಗಿ ನ.22 ರಂದು ಲಕ್ಷ ಜ್ಯೋತಿ ಬೆಳಗಿಸುವ ಕಾರ್ತಿಕ ಮಹೋತ್ಸವ ನಡೆಯಲಿದೆ ಎಂದು ಪೀಠಾಧ್ಯಕ್ಷ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರು ತಿಳಿಸಿದರು.

ಮಠದಲ್ಲಿ ದೀಪೋತ್ಸವ ಕಾರ್ಯಕ್ರಮ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ನ.22 ರಂದು ಸಂಜೆ 6 ಗಂಟೆ ಗೋಧೂಳಿ ಸಮಯದಲ್ಲಿ ನಡೆಯುವ ದೀಪ ಬೆಳಗುವ ಮತ್ತು ಧಾರ್ಮಿಕ ಸಭೆಯಲ್ಲಿ ಗೃಹಮಂಡಳಿ ಅಧ್ಯಕ್ಷ ಕೆ.ಎಂ ಶಿವಲಿಂಗೇಗೌಡ, ವಿವಿಧ ಮಠಾಧೀಶರು, ಜನಪ್ರತಿನಿಧಿಗಳು, ಮಾಜಿ ಶಾಸಕರು, ರಾಜಕೀಯ ಮುಖಂಡರು, ಉದ್ಯಮಿ ಗಳು, ಕಲಾವಿದರು, ಸಾಹಿತಿಗಳು, ವಿದ್ವಾಂಸರು ಸೇರಿ ಅನೇಕರು ಭಾಗವಹಿಸಲಿದ್ದಾರೆ. ಕ್ಷೇತ್ರದ ಶ್ರೀ ನೀಲಮಜ್ಜಯ್ಯ ಮತ್ತು ಶ್ರೀ ಶಿವಲಿಂಗಜ್ಜಯ್ಯ ಅವರ ಗದ್ದುಗಳಿಗೆ ಪೂಜಾ ಕೈಂಕರ್ಯ ನೆರವೇರಲಿವೆ. ಕೋಡಿ ಮಠದಲ್ಲಿ ನಡೆಯುವ ಕಾರ್ತಿಕ ಮಾಸದ ಅಲೌಕಿಕವಾಗಿ ಮನದ ಕತ್ತಲೆಯಾದ ಅಜ್ಞಾನವನ್ನು ನಿವಾರಿಸುವ ಶಕ್ತಿ ಜ್ಞಾನ ರೂಪವಾದ ಹಣತೆಗಿದೆ. ದೀಪೋತ್ಸವ ಪ್ರಯುಕ್ತ ನ.14 ರಿಂದ 21ರವರೆಗೆ ಪ್ರತಿ ದಿನ ಸಂಜೆ ವಿವಿಧ ಭಜನಾ ಮಂಡಳಿ ಮತ್ತು ಕಲಾ ಸಂಘಗಳಿಂದ ಭಕ್ತಿಯ, ಹರಿಕಥೆ, ಸೇವಾಮೃತ ದಾಸೋಹಗಳು ನಡೆಯುತ್ತಿವೆ ಎಂದು ಹೇಳಿದರು.

# ಅರೆನಗ್ನ ಸ್ಥಿತಿಯಲ್ಲಿ ಮಹಿಳೆ ಉಸಿರುಗಟ್ಟಿಸಿ ಕೊಲೆ

## ಬೇಲೂರಿನ ಗಾಣಿಗರ ಬೀದಿಯಲ್ಲಿ ಘಟನೆ | ಪೊಲೀಸರಿಂದ ಅಂತ್ಯಕ್ರಿಯೆ

• ಪ್ರಜೋದಯ ವರದಿ

**ಬೇಲೂರು:** ಪಟ್ಟಣದ ಗಾಣಿಗರ ಬೀದಿಯ ಮನೆಯೊಂದರಲ್ಲಿ ಅರೆನಗ್ನ ಸ್ಥಿತಿಯಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿದ್ದು, ಪರಿಚಯದ ವ್ಯಕ್ತಿಯೇ ತಲೆದಿಂಬಿನಿಂದ ಉಸಿರುಗಟ್ಟಿಸಿ ಹತ್ಯೆ ಮಾಡಿದ್ದಾನೆ ಎನ್ನಲಾಗಿದೆ.

ಚಿಕ್ಕಮಗಳೂರು ಜಿಲ್ಲೆ ಮಲ್ಲೇನಹಳ್ಳಿ ಗ್ರಾಮದ ಸ್ಪಂದನಾ (34) ಮೃತರು. ಬಿ.ಕೆ. ಮಲ್ಲಿಕಾರ್ಜುನ ಎಂಬುವವರ ಹೆಂಚಿನ ಮನೆಗೆ ಎಂಟು ದಿನಗಳ ಹಿಂದಷ್ಟೇ ಸ್ಪಂದನಾ ಬಾಡಿಗೆಗೆ ಬಂದಿದ್ದರು. ಈ ಹಿಂದೆ ಪಟ್ಟಣದ ಹೊಸ ನಗರದಲ್ಲಿ ಬಾಡಿಗೆ ಮನೆಯಲ್ಲಿದ್ದೆ ಎಂದು ಪರಿಚಯ



ಮಾಡಿಕೊಂಡು ತಿಂಗಳಿಗೆ 3 ಸಾವಿರ ರೂ. ಬಾಡಿಗೆ 10 ಸಾವಿರ ರೂ. ಮುಂಗಡ ಕೊಡಲು ಒಪ್ಪಿ 3 ಸಾವಿರ ರೂ. ನೀಡಿದ್ದರು. ಉಳಿದ ಹಣವನ್ನು ನಂತರ ಕೊಡುವುದಾಗಿ ಹೇಳಿ ಲಗ್ಗೇಜ್ ಸಮೇತ ಮನೆ ಪ್ರವೇಶಿಸಿದ್ದರು.

ನ.15ರ ಸಂಜೆ 5.30ರ ಸಮಯದಲ್ಲಿ ಟಿವಿಯ ಡಿಶ್ ಹಾಕಿಸಿಕೊಡಲು ಯಾರನ್ನಾದರು ಕಳುಹಿಸಿ ಎಂದು ಮನೆ ಮಾಲೀಕ ಮಲ್ಲಿಕಾರ್ಜುನಗೆ ಕರೆ ಮಾಡಿ ಹೇಳಿದ್ದರು. ವೃತ್ತಿಯಲ್ಲಿ ಆಟೋ ಚಾಲಕರಾಗಿರುವ ಮಲ್ಲಿಕಾರ್ಜುನ ಆಟೋ ಓಡಿಸುತ್ತಿದ್ದೇನೆ. ಆ ಮೇಲೆ ಫೋನ್ ಮಾಡುತ್ತೇನೆಂದು ಹೇಳಿ ಸುಮ್ಮನಾಗಿದ್ದರು. ಸ್ಪಂದನಾ ಹಗಲು ವೇಳೆ ಮನೆಯಿಂದ ಹೊರ ಬರುತ್ತಿರಲಿಲ್ಲ. ಯಾವಾಗಲೂ ಫೋನ್‌ನಲ್ಲಿ ಮಾತನಾಡುತ್ತಿದ್ದರು. ಹಾಗಾಗಿ ಅವರ ಬಗ್ಗೆ ಯಾರಿಗೂ ಪೂರ್ವಾಪರ ತಿಳಿದಿರಲಿಲ್ಲ ಎನ್ನಲಾಗಿದೆ.

ನ.19 ರ ಮಧ್ಯಾಹ್ನ 1.30ರ ಸಮಯದಲ್ಲಿ ಸಮೀಪದ ಮನೆಯ ಮನೋಹರಮ್ಮ ಎಂಬುವವರು ಮಲ್ಲಿಕಾರ್ಜುನ ಅವರಿಗೆ ಕರೆ ಮಾಡಿ


» ನಾಲ್ಕನೇ ಪುಟದಲ್ಲಿ


# ಅಂಗವಿಕಲರಿಗೆ ತ್ರಿಚಕ್ರ ಬೈಕ್ ವಿತರಣೆಗೆ ನಿರ್ಲಕ್ಷ್ಯ

## ಕಚೇರಿಗೆ ಫಲಾನುಭವಿಗಳ ಅಲೆದಾಟ | ತಾ.ಪಂ. ಆವರಣದಲ್ಲಿ ನಿಂತಿವೆ ಬೈಕ್‌ಗಳು

• ಪ್ರಜೋದಯ ವರದಿ

**ಆಲೂರು :** ಅಂಗವಿಕಲರಿಗೆ ವಿತರಣೆಗೆ ತಂದಿರುವ ತ್ರಿಚಕ್ರ ಬೈಕ್‌ಗಳನ್ನು ವಿತರಣೆ ಮಾಡಲು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ನಿರ್ಲಕ್ಷ್ಯ ತೋರಿರುವುದರಿಂದ ಬಿಸಿಲಿನಲ್ಲಿ ಒಣಗಿ, ಮಳೆಯಲ್ಲಿ ನೆನೆಯುತ್ತಿವೆ.

ವಿಶೇಷ ವಿಕಲಚೇತನರಿಗೆ ತಾಲ್ಲೂಕು ಪಂಚಾಯಿತಿಗೆ ಬಿಡುಗಡೆಯಾಗುವ ವಿವಿಧ ಲೆಕ್ಕ ಶೀರ್ಷಿಕೆಯ ಅನುದಾನದಲ್ಲಿ ವಿಕಲಚೇತನರಿಗೆ ಮೀಸಲಿರಿಸಿರುವ ಅನುದಾನದ ಅಡಿಯಲ್ಲಿ ನೀಡಲಾಗುವ ತ್ರಿಚಕ್ರ ವಾಹನಗಳು ಕಳೆದ ಒಂದು ತಿಂಗಳಿನಿಂದ ತಾಲ್ಲೂಕು ಪಂಚಾಯಿತಿ ಆವರಣದಲ್ಲೇ ನಿಲ್ಲಿಸಿರುವುದು ಸಾರ್ವಜನಿಕ ವಲಯದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ನಟರಾಜು ನಾಕಲಗೂಡು ಅವರು ಮಾತನಾಡಿ, 17ಲಕ್ಷ ರೂ. ಮೌಲ್ಯದ 16 ತ್ರಿಚಕ್ರ ಬೈಕ್‌ಗಳನ್ನು ವಿಶೇಷಚೇತನ ಫಲಾನುಭವಿಗಳಿಗೆ ವಿತರಣೆ ಮಾಡದೆ, ಪಂಚಾಯಿತಿ ಆವರಣದಲ್ಲೇ ಸಾರ್ವಜನಿಕರ ದರ್ಶನಕ್ಕಾಗಿ ನಿಲ್ಲಿಸಲಾಗಿರುವುದು ಅಧಿಕಾರಿಗಳ ನಿರ್ಲಕ್ಷ್ಯವೋ ಅಥವಾ ಜನಪ್ರತಿನಿದಿನಗಳ ನಿರ್ಲಕ್ಷ್ಯವೋ ಗೊತ್ತಿಲ್ಲ ಎಂದರು ಹೇಳಿದರು.



> **ತ್ರಿಚಕ್ರ ವಾಹನಗಳ ವಿತರಣೆಗೆ ಮಾಡುವ ಬಗ್ಗೆ ಶಾಸಕರ ಗಮನಕ್ಕೆ ತರಲಾಗಿದೆ. ಅವರು ದಿನಾಂಕ ನಿಗದಿಪಡಿಸಿದ ತಕ್ಷಣ ವಿತರಣೆ ಮಾಡಲಾಗುವುದು.**
> **-ಸುಬ್ರಮಣ್ಯಶರ್ಮ, ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ. ಆಲೂರು**

ಪ್ರತಿದಿನವೂ ಅಂಗವಿಕಲ ಫಲಾನುಭವಿಗಳು ವಿತರಣೆಗಾಗಿ ಕಚೇರಿಗೆ ಅಲೆದಾಡುತ್ತಿದ್ದಾರೆ. ಇಂದು-ನಾಳೆ ಎಂಬ ಸಬೂಬುಗಳ ಭರವಸೆ ಯಿಂದಲೇ ತಿಂಗಳು ಕಳೆದಿವೆ. ಇದರ ನಡುವೆ, ಮಳೆ-ಬಿಸಿಲಿಗೆ ತಿಂಗಳಿನಿಂದಲೂ ಒಣಗಿ ಈ ವಾಹನಗಳು ಗುಣಮಟ್ಟ ಕಳೆದುಕೊಳ್ಳಬಹುದೇ ಎಂಬ ಆತಂಕ ಫಲಾನುಭವಿಗಳಲ್ಲಿದೆ. ಪಂಚಾಯಿತಿ ಆವರಣದಲ್ಲಿ ನಿಲ್ಲಿಸಿರುವ ಬೈಕ್‌ಗಳಿಗೆ ಯಾವುದೇ ಭದ್ರತಾ ವ್ಯವಸ್ಥೆ ಇಲ್ಲದಿರುವುದೂ ಗಂಭೀರ ವಿಚಾರ. ಕಚೇರಿಯಲ್ಲಿ ಸಿಸಿ ಕ್ಯಾಮೆರಾ ವ್ಯವಸ್ಥೆಯೂ ಇಲ್ಲ. ಯಾವುದೇ ದುರ್ಘಟನೆ ನಡೆದರೆ ಅಥವಾ ತ್ರಿಚಕ್ರ ವಾಹನಗಳ ಕಳ್ಳತನವಾದರೆ ಇದರ ಜವಾಬ್ದಾರಿ ಯಾರೆಂದು ಪ್ರಶ್ನಿಸಿದ ಅವರು, ಪ್ರತಿ ದಿನ ಕಚೇರಿಗೆ ಬರುವ ವಿಕಲ ಚೇತನರಿಗೆ ನಾಳೆ ಬನ್ನಿ ಎಂದು ಹೇಳುವುದನ್ನು ನಿಲ್ಲಿಸಿ, ತಕ್ಷಣವೇ ಶಾಸಕರೊಂದಿಗೆ ಚರ್ಚಿಸಿ ವಿತರಣೆ ಕಾರ್ಯಕ್ರಮ ನಡೆಸಬೇಕೆಂದು ಆಗ್ರಹಿಸಿದರು.

# ದೃಢ ನಿರ್ಧಾರದಿಂದ ಮಹತ್ತರ ಸಾಧನೆ ಸಾಧ್ಯ: ಎಂ.ಸಿ.ರಂಗಸ್ವಾಮಿ




• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿಗಳು ಜೀವನದಲ್ಲಿ ದೃಢ ನಿರ್ಧಾರ ಕೈಗೊಳ್ಳುವ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಪ್ರಗತಿಪರ ಕೃಷಿಕರೂ ಆದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಎಂ.ಸಿ.ರಂಗಸ್ವಾಮಿ ಅವರು ಕರೆ ನೀಡಿದರು.

ನಗರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಎಂ.ಜಿ. ರಸ್ತೆ) ವತಿಯಿಂದ ಗುರುವಾರ ನಡೆದ ಕನ್ನಡ ರಾಜ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ಏರುಪೇರು ಇದ್ದೇ ಇರುತ್ತದೆ. ತಾಳ್ಮೆ ರೂಢಿಸಿಕೊಂಡು ಏನೇ ಸಮಸ್ಯೆ ಬಂದರೂ ಕುಗ್ಗದೆ ಮುಂದೆ ಸಾಗಬೇಕೆಂದರು.

ಹೆಣ್ಣು ಮಕ್ಕಳು ಕೃಷಿಯಲ್ಲಿ ಹೆಚ್ಚು ತೊಡಗಿಸಿಕೊಳ್ಳುವ ಮೂಲಕ ಸ್ವಾವಲಂಬಿ ಜೀವನ ರೂಪಿಸಿಕೊಳ್ಳ ಬೇಕು. ರೈತರು ಕೇವಲ ಸಾಂಪ್ರದಾಯಿಕ ಬೆಳೆಗಳಿಗೆ ಸೀಮಿತವಾಗದೆ ತಂತ್ರಜ್ಞಾನವನ್ನು ಬಳಸಿ ವಾಣಿಜ್ಯ ಬೆಳೆಗಳನ್ನು ಬೆಳೆಯುವ ಮೂಲಕ ಆರ್ಥಿಕ ಲಾಭವನ್ನು ಪಡೆಯಲು ಸಾಧ್ಯವಿದೆ.


» ನಾಲ್ಕನೇ ಪುಟದಲ್ಲಿ


# ಪಾದಚಾರಿ ರಸ್ತೆ ಆಕ್ರಮಿಸಿಕೊಂಡಿದ್ದ ಹಣ್ಣಿನ ಅಂಗಡಿಗಳ ತೆರವು

## ಮಹಾನಗರ ಪಾಲಿಕೆ ಅಧಿಕಾರಿಗಳಿಂದ ಕಾರ್ಯಾಚರಣೆ | ಫುಟ್‌ಪಾತ್ ಸಂಚಾರಕ್ಕೆ ಮುಕ್ತ

• ಪ್ರಜೋದಯ ವರದಿ

**ಹಾಸನ:** ನಗರದ ಕಸ್ತೂರ ಬಾ ರಸ್ತೆಯಲ್ಲಿ ಪಾದಚಾರಿ ರಸ್ತೆಯನ್ನು ಆಕ್ರಮಿಸಿಕೊಂಡಿದ್ದ ಅನಧಿಕೃತ ಹಣ್ಣಿನ ಅಂಗಡಿಗಳನ್ನು ಗುರುವಾರ ಬೆಳಿಗ್ಗೆ ಮಹಾನಗರ ಪಾಲಿಕೆ ಅಧಿಕಾರಿಗಳು ತೆರವುಗೊಳಿಸಿದರು.

ಹಲವು ದಿನಗಳಿಂದ ರಸ್ತೆ ಬದಿಯ ಅನಧಿಕೃತ ವ್ಯಾಪಾರಗಳಿಂದ ಸಾರ್ವಜನಿಕರಿಗೆ ಹಾಗು ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂಬ ದೂರುಗಳು ಕೇಳಿ ಬಂದ ಹಿನ್ನಲೆಯಲ್ಲಿ ಪಾಲಿಕೆ ಅಧಿಕಾರಿಗಳು ಹಾಗು ಸಿಬ್ಬಂದಿ ಬೆಳಿಗ್ಗೆ ದಿಢೀರ್ ತೆರವುಗೊಳಿಸಿ ಪಾದಚಾರಿ ರಸ್ತೆಯನ್ನು ಮುಕ್ತಗೊಳಿಸಿದರು. ಇದರಿಂದ ಕಸ್ತೂರಿ ಬಾ ರಸ್ತೆಯಲ್ಲಿ ಉಂಟಾಗುತ್ತಿದ್ದ ಟ್ರಾಫಿಕ್ ಸಮಸ್ಯೆಗೆ ಕೊಂಚ ಮುಕ್ತಿ ದೊರೆದಂತಾಗಿದೆ. ಈ ಭಾಗದಲ್ಲಿ ವಾಹನ ನಿಲುಗಡೆಗೆ ಅವಕಾಶ ನೀಡಬಾರದೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಅನಧಿಕೃತ ವ್ಯಾಪಾರಿಗಳು ವಿರೋಧ ವ್ಯಕ್ತಪಡಿಸಿ ಪಾಲಿಕೆ ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸಿದರು. ಕೆಲ ವ್ಯಾಪಾರಿಗಳು ತಮ್ಮ ಜೀವನೋಪಾಯ ಕಳೆದುಕೊಳ್ಳುತ್ತಿದ್ದೇವೆಂದು ಅಸಮಾಧಾನ ವ್ಯಕ್ತಪಡಿಸಿದರೆ, ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಆಗುತ್ತಿತ್ತು ಎಂದು ಪಾಲಿಕೆಯ ಕ್ರಮವನ್ನು ಕೆಲವರು ಸ್ವಾಗತಿಸಿದರು.


» ನಾಲ್ಕನೇ ಪುಟದಲ್ಲಿ






> **ರಸ್ತೆ ಬದಿ ಹಾಗು ಫುಟ್‌ಪಾತ್ ಮೇಲೆ ಮಳಿಗೆ ಹಾಕಿ ವ್ಯಾಪಾರ ಮಾಡುವುದನ್ನು ಮುಂದುವರೆಸಿದರೆ ಪ್ರಕರಣ ದಾಖಲಿಸಿ, ಕ್ರಮ ಕೈಗೊಳ್ಳಲಾಗುವುದು. ಫುಟ್‌ಪಾತ್ ಜಾಗ ಸಾರ್ವಜನಿಕರ ಮುಕ್ತ ಸಂಚಾರಕ್ಕಾಗಿ. ಅದನ್ನು ಹಣ್ಣಿನ ಅಂಗಡಿಗಳಾಗಿ ಬಳಸುವಂತಿಲ್ಲ. ವ್ಯಾಪಾರಿಗಳ ಬಳಕೆಗೆ ಸರಿಯಾದ ಸ್ಥಳಾವಕಾಶ ಒದಗಿಸಲು ಪಾಲಿಕೆ ಕ್ರಮ ಕೈಗೊಳ್ಳಲಿದೆ.**
> **-ಕೃಷ್ಣಮೂರ್ತಿ, ಮಹಾನಗರ ಪಾಲಿಕೆ ಆಯುಕ್ತ**

C M Y K

E-mail : prajodayahsn@gmail.com
ಪ್ರಜೋದಯ
ಸಿನಿ ಪ್ರಿಯ
21 ನವೆಂಬರ್ 2025 ಶುಕ್ರವಾರ



# ಈ ವಾರ ಒಂದಕ್ಕಿಂತ ಒಂದು ಇಂಟ್ರೆಸ್ಟಿಂಗ್
# ಕನ್ನಡ ಚಿತ್ರಗಳು ಬಿಡುಗಡೆಗೆ ಸಜ್ಜು




ಕಳೆದ ಶುಕ್ರವಾರ ತೆರೆಕಂಡ ಯಾವುದೇ ಕನ್ನಡ ಸಿನಿಮಾ ಪ್ರೇಕ್ಷಕರನ್ನು ಸೆಳೆಯುವಲ್ಲಿ ಯಶಸ್ವಿಯಾಗಿಲ್ಲ. ಸಿಂಪಲ್ ಸುನಿ ನಿರ್ದೇಶನದ ಗತವೈಭವ ಸಿನಿಮಾ ಕೊಂಚಮಟ್ಟಿಗೆ ನಿರೀಕ್ಷೆ ಮೂಡಿಸಿತ್ತು. ಆದರೆ ಅದು ಕೂಡ ಕೈ ಹಿಡಿಯಲಿಲ್ಲ. ಇದೆಲ್ಲದರ ನಡುವೆ ಮತ್ತೊಂದು ವೀಕೆಂಡ್ ಬರ್ತಿದೆ. ಈ ವಾರ ಒಂದಷ್ಟು ಕನ್ನಡ ಚಿತ್ರಗಳು ತೆರೆಗೆ ಬರ್ತಿವೆ.

ಕಾಂತಾರ- 1 ಬ್ಲಾಕ್‌ಬಸ್ಟರ್ ಹಿಟ್ ಬಳಿಕ ಕನ್ನಡದ ಯಾವುದೇ ಸಿನಿಮಾ ದೊಡ್ಡದಾಗಿ ಸದ್ದು ಮಾಡಲಿಲ್ಲ. ಮುಂದಿನ ತಿಂಗಳು ಡೆವಿಲ್, 45 ಹಾಗೂ ಮಾರ್ಕ್ ಚಿತ್ರಗಳು ಬಿಡುಗಡೆಗೆ ಅಣಿಯಾಗಿವೆ. ಅದಕ್ಕೂ ಮುನ್ನ ಇನ್ನೆರಡು ವಾರ ಕನ್ನಡದ ಒಂದಷ್ಟು ಸಿನಿಮಾಗಳು ಪ್ರೇಕ್ಷಕರ ಮುಂದೆ ಬರ್ತಿವೆ. ಈ ಶುಕ್ರವಾರ (ನವೆಂಬರ್ 21) ಐದಾರು ಕನ್ನಡ ಸಿನಿಮಾಗಳು ತೆರೆಗೆ ಬರ್ತಿವೆ. ಎಲ್ಲವೂ ಒಂದಕ್ಕಿಂತ ಒಂದು ಇಂಟ್ರೆಸ್ಟಿಂಗ್ ಆಗಿದೆ.

## ಇಲ್ಲಿದೆ ಲಿಸ್ಟ್

**1. ಮಾರುತ:** ಎಸ್. ನಾರಾಯಣ್ ನಿರ್ದೇಶನದಲ್ಲಿ ಶ್ರೇಯಸ್ ಮಂಜು ಹಾಗೂ ಬೃಂದಾ ಆಚಾರ್ಯ ನಟನೆಯ ಮಾರುತ ಸಿನಿಮಾ ಈ ವಾರ ತೆರೆಗಪ್ಪಳಿಸುತ್ತಿದೆ. ದುನಿಯಾ ವಿಜಯ್ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿರು ವುದು ವಿಶೇಷ. ಕೆ. ಮಂಜು ಹಾಗೂ ರಮೇಶ್ ಯಾದವ್ ಚಿತ್ರಕ್ಕೆ ಹಣ ಹೂಡಿದ್ದಾರೆ. ಈಗಾಗಲೇ ಚಿತ್ರದ ಹಾಡುಗಳು, ಟ್ರೈಲರ್ ರಿಲೀಸ್ ಆಗಿ ಸದ್ದು ಮಾಡ್ತಿದೆ. ಕ್ರೇಜಿಸ್ಟಾರ್ ರವಿಚಂದ್ರನ್, ನಿಶ್ವಿಕಾ ನಾಯ್ಡು ಕೂಡ ತಾರಾಗಣದಲ್ಲಿದ್ದಾರೆ.

**2. ಫುಲ್ ಮೀಲ್ಸ್:** ಲಿಖಿತ್ ಶೆಟ್ಟಿ ಹಾಗೂ ಖುಷಿ ರವಿ ನಟನೆಯ ಫುಲ್ ಮೀಲ್ಸ್ ಸಿನಿಮಾ ಪ್ರೇಕ್ಷಕರಿಗೆ ಭರ್ಜರಿ ಮನರಂಜನೆ ಉಣಬಡಿಸಲು ಸಜ್ಜಾಗಿದೆ. ಎನ್. ವಿನಾಯಕ ಎಂಬುವವರು ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ತೇಜಸ್ವಿನಿ ಶರ್ಮಾ, ರಂಗಾಯಣ ರಘು, ಸೂರಜ್ ಲೋಕ್ರೆ, ವಿಜಯ್ ಚೆಂಡೂರ್, ರಾಜೇಶ್ ನಟರಂಗ, ಚಂದ್ರಕಲಾ ಮೋಹನ್, ರವಿಶಂಕರ್ ಗೌಡ, ಸುಜಾತಾ ಶಾಸ್ತ್ರಿ, ಹೊನ್ನವಳ್ಳಿ ಕೃಷ್ಣ, ಮೂಗು ಸುರೇಶ್ ಸೇರಿ ದೊಡ್ಡ ಕಲಾವಿದರ ದಂಡೇ ಚಿತ್ರದಲ್ಲಿದೆ.

**3. ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ:** ಇತ್ತೀಚೆಗೆ ದೀಕ್ಷಿತ್ ಶೆಟ್ಟಿ ನಟನೆಯ ದಿ ಗರ್ಲ್‌ಫ್ರೆಂಡ್ ಸಿನಿಮಾ ತೆರೆಗೆ ಬಂದಿತ್ತು. ಈ ವಾರ ದೀಕ್ಷಿತ್ ಅಭಿನಯದ ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ ಚಿತ್ರ ಪ್ರೇಕ್ಷಕರ ಮುಂದೆ ಬರ್ತಿದೆ. ಬೃಂದಾ ಆಚಾರ್ಯ ಚಿತ್ರದಲ್ಲಿ ನಾಯಕಿಯಾಗಿ ಮಿಂಚಿದ್ದಾರೆ. ಅಭಿಷೇಕ್ ಎಂ. ಕಥೆ ಚಿತ್ರಕತೆ ಬರೆದು ಚಿತ್ರವನ್ನು ನಿರ್ದೇಶನ ಮಾಡಿದ್ದಾರೆ. ಜುಡಾ ಸ್ಯಾಂಡಿ ಸಂಗೀತ ಚಿತ್ರಕ್ಕಿದ್ದ ಗೋಪಾಲಕೃಷ್ಣ ದೇಶಪಾಂಡೆ, ಸಾಧು ಕೋಕಿಲ, ಶ್ರುತಿ ಹರಿಹರನ್ ಕೂಡ ನಟಿಸಿದ್ದಾರೆ.

**4. ಕಂಗ್ರಾಜುಲೇಷನ್ ಬ್ರದರ್:** ಕಲ್ಲೂರ್ ಸಿನಿಮಾಸ್ ಹಾಗೂ ಪೇನ್ ಅಂಡ್ ಪೇಪರ್ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ಪ್ರಶಾಂತ್ ಕಲ್ಲೂರ್ ನಿರ್ಮಾಣದ ಕಾಮಿಡಿ ಎಂಟರ್‌ಟೈನರ್ ಕಂಗ್ರಾಜುಲೇಷನ್ ಬ್ರದರ್ ಚಿತ್ರಕ್ಕೂ ಈ ವಾರ ಬಿಡುಗಡೆ ಭಾಗ್ಯ. ಹರಿ ಸಂತೋಷ್ ಕಥೆ ಬರೆದಿದ್ದು ಪ್ರತಾಪ್ ಗಂಧರ್ವ ಆಕ್ಷನ್ ಕಟ್ ಹೇಳಿದ್ದಾರೆ. ರಕ್ಷಿತ್ ನಾಗ್, ಸಂಜನಾ ದಾಸ್ ಹಾಗೂ ಅನುಷಾ ಚಿತ್ರದಲ್ಲಿ ಬಣ್ಣ ಹಚ್ಚಿದ್ದಾರೆ.

**5. ರಾಧೇಯ:** ಯುದ್ಧಕಾಂಡ ಸಿನಿಮಾ ನಿರ್ಮಿಸಿ ನಟಿಸಿ ಗೆದ್ದಿದ್ದ ಅಜಯ್ ರಾವ್ ಈ ವಾರ ರಾಧೇಯನಾಗಿ ಬರ್ತಿದ್ದಾರೆ. ಸೋನಲ್ ಮಂಥೆರೋ, ಧನ್ಯಾ ರಾಮ್‌ಕುಮಾರ್ ಚಿತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ಲವ್, ಆಕ್ಷನ್, ಸಸ್ಪೆನ್ಸ್ ಅಂಶಗಳನ್ನು ಸೇರಿಸಿ ವೇದಗುರು ಎಂಬುವವರು ರಾಧೇಯ ಚಿತ್ರ ಕಟ್ಟಿಕೊಟ್ಟಿದ್ದಾರೆ. ಈಗಾಗಲೇ ಚಿತ್ರದ ಟ್ರೈಲರ್, ಸಾಂಗ್ಸ್ ಹಿಟ್ ಆಗಿದೆ.

**6. ದಿ ಟಾಸ್ಕ್:** ರಾಘು ಶಿವಮೊಗ್ಗ ನಿರ್ದೇಶನದಲ್ಲಿ ಜಯ ಸೂರ್ಯ ಆರ್ ಆಜಾದ್, ಸಾಗರ್ ರಾಮ್ ನಟನೆಯ ದಿ ಟಾಸ್ಕ್ ಸಿನಿಮಾ ಕೂಡ ಈ ವಾರ ತೆರೆಗಪ್ಪಳಿಸುತ್ತಿದೆ. ವಿಜಯ್ ಕುಮಾರ್, ರಾಮಣ್ಣ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ಅಚ್ಯುತ್ ಕುಮಾರ್, ಬಾಲಾಜಿ ಮನೋಹರ್, ಗೋಪಾಲ ಕೃಷ್ಣ ದೇಶಪಾಂಡೆ, ಸಂಗೀತ ಭಟ್, ಸಂಪತ್ ಮೈತ್ರೇಯ, ತನಿಶಾ ಕುಪ್ಪಂಡ, ರಘು ಶಿವಮೊಗ್ಗ ಚಿತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ಶ್ರೀಮುರಳಿ ಚಿತ್ರದ ಟ್ರೈಲರ್ ಲಾಂಚ್ ಮಾಡಿ ಹೊಸಬರ ತಂಡಕ್ಕೆ ಶುಭ ಕೋರಿದ್ದರು.




## 21-11-2025 ದಿನ ಭವಿಷ್ಯ

**ಮೇಷ:** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ - ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಸಂಬಂಧಿಗಳು ಬೆಂಬಲ ನೀಡುತ್ತಾರೆ ಮತ್ತು ನಿಮ್ಮ ಮನಸ್ಸಿಗೆ ಆ ಹೊರೆಯಾದ ಆ ತೊಂದರೆಯನ್ನು ಕಡಿಮೆ ಮಾಡುತ್ತಾರೆ.

**ವೃಷಭ:** ನೀವು ದೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ನೀವು ಪ್ರೀತಿಸುವ ಮತ್ತು ಕಾಳಜಿ ತೋರಿಸುವ ಜನರೊಂದಿಗೆ ಸಕಾರಣವಾಗಿರಲು ಪ್ರಯತ್ನಿಸಿ.

**ಮಿಥುನ:** ಜಗಳಗಂಟ ವ್ಯಕ್ತಿಯೊಂದಿಗಿನ ನಿಮ್ಮ ವಾದ ನಿಮ್ಮ ಮೂಡ್ ಅನ್ನು ಹಾಳು ಮಾಡಬಹುದು. ಬುದ್ಧಿವಂತಿಕೆ ತೋರಿಸಿ ಮತ್ತು ಸಾಧ್ಯವಾದರೆ ವೈಷಮ್ಯಗಳನ್ನು ತಪ್ಪಿಸಿ, ಏಕೆಂದರೆ ಜಗಳಗಳು ಹಾಗೂ ವೈಷಮ್ಯಗಳು ಯಾವತ್ತೂ ನಿಮಗೆ ಸಹಾಯ ಮಾಡುವುದಿಲ್ಲ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ.

**ಕರ್ಕಾಟಕ:** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

**ಸಿಂಹ:** ಅನಿರೀಕ್ಷಿತ ಪ್ರಯಾಣದಿಂದ ಸುಸ್ತಾಗಬಹುದು ಹಾಗೂ ಇದು ನಿಮ್ಮನ್ನು ಕಿರಿಕಿರಿಗೊಳ್ಳುವಂತೆ ಮಾಡಬಹುದು. ಸ್ನಾಯುಗಳಿಗೆ ಆರಾಮ ನೀಡಲು ನಿಮ್ಮ ದೇಹವನ್ನು ತೈಲದಿಂದ ಮಸಾಜ್ ಮಾಡಿ ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ.

**ಕನ್ಯಾ:** ತೊಂದರೆಗಳ ಬಗ್ಗೆ ಚಿಂತಿಸುವ ಮತ್ತು ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ನಿಮ್ಮ ಸ್ನೇಹಿತರ ಸಹಾಯದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ. ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ.

**ತುಲಾ:** ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ.

**ವೃಶ್ಚಿಕ:** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು. ನಿಮ್ಮ ವಿಚಿತ್ರ ವರ್ತನೆಯ ಹೊರತಾಗಿಯೂ ಸಂಗಾತಿ ಸಹಕಾರಿಯಾಗಿರುತ್ತಾರೆ. ನಿಮ್ಮ ಕಿಟಕಿಯಲ್ಲಿ ಹೂವಿಡುವ ಮೂಲಕ ನಿಮ್ಮ ಪ್ರೀತಿಯನ್ನು ತೋರಿಸಿ.

**ಧನು:** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ಇವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ನೀವು ಹೊಸ ಯೋಜನೆಯನ್ನು ತೆಗೆದುಕೊಳ್ಳುವ ಮೊದಲು ಎರಡು ಬಾರಿ ಆಲೋಚಿಸಿ.

**ಮಕರ:** ನಿಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿಯನ್ನು ಕುಂಠಿತಗೊಳಿಸಿದೆಯಂದು ಕಂಡುಕೊಳ್ಳಲು ಇದು ಸಕಾಲ. ಸಕಾರಾತ್ಮಕವಾಗಿ ಆಲೋಚಿಸಿ ಮತ್ತು ನಿಮ್ಮ ವಿವೇಚನೆಯಲ್ಲಿ ಗಮನಾರ್ಹ ಬದಲಾವಣೆ ಕಾಣುತ್ತದೆ. ನಿಮ್ಮ ಪ್ರೇಮಿಯ ಭಾವನಾತ್ಮಕ ಬೆದರಿಕೆಯ ಬೇಡಿಕೆಗಳಿಗೆ ಸಮ್ಮತಿಸಬೇಡಿ.

**ಕುಂಭ:** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ನೀವು ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ.

**ಮೀನ:** ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರು ಚೈತನ್ಯ ಹೊಂದುತ್ತೀರಿ. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ.

# ಸುದೀಪ್ ಮಾರ್ಕ್ ವಿರುದ್ಧ ಅಪಪ್ರಚಾರ; ಕಿಚ್ಚ-ದಚ್ಚು ನಡುವೆ ಮತ್ತೆ ಬೆಂಕಿ ಹಚ್ಚುವ ಯತ್ನ



ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುವ ಸುದ್ದಿಗಳಲ್ಲಿ ಯಾವುದನ್ನು ನಂಬಬೇಕೋ, ಯಾವುದನ್ನು ಬಿಡಬೇಕೋ ಗೊತ್ತಾಗಲ್ಲ. ಮುಂದಿನ ತಿಂಗಳು ಕನ್ನಡ 3 ದೊಡ್ಡ ಸಿನಿಮಾಗಳು ಬಿಡುಗಡೆ ಆಗ್ತಿವೆ. ಆದರೆ ಸುದೀಪ್ ನಟನೆಯ ಮಾರ್ಕ್ ಸಿನಿಮಾ ರಿಲೀಸ್ ತಡವಾಗುತ್ತದೆ ಎಂದು ಕಿಡಿಗೇಡಿಗಳು ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ.

ಡಿಸೆಂಬರ್ 12ಕ್ಕೆ ದರ್ಶನ್ ನಟನೆಯ ಡೆವಿಲ್ ಸಿನಿಮಾ ಬಿಡುಗಡೆ ಆಗಲಿದೆ. 25ರಂದು ಸುದೀಪ್ ನಟನೆಯ ಮಾರ್ಕ್ ಹಾಗೂ ಅರ್ಜುನ್ ಜನ್ಯಾ ನಿರ್ದೇಶನದ 45 ಸಿನಿಮಾ ತೆರೆಗೆ ಬರಬೇಕಿದೆ. ಈ ಚಿತ್ರದಲ್ಲಿ ಶಿವರಾಜ್‌ಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಒಟ್ಟಿಗೆ ನಟಿಸಿದ್ದಾರೆ. ಕಳೆದ ವರ್ಷ ಕ್ರಿಸ್‌ಮಸ್ ಸಂಭ್ರಮದಲ್ಲಿ ಬಂದಿದ್ದ ಮ್ಯಾಕ್ಸ್ ಸಿನಿಮಾ ಬ್ಲಾಕ್‌ಬಸ್ಟರ್ ಹಿಟ್ ಆಗಿತ್ತು.

ಮ್ಯಾಕ್ಸ್ ಸಿನಿಮಾ ಕಾಂಬಿನೇಷನ್‌ನಲ್ಲೇ ಮಾರ್ಕ್ ಸಿನಿಮಾ ನಿರ್ಮಾಣವಾಗ್ತಿದೆ. ಈಗಾಗಲೇ ಚಿತ್ರೀಕರಣ ಮುಗಿದಿದ್ದು ಬಹುತೇಕ ಪೋಸ್ಟ್ ಪ್ರೊಡಕ್ಷನ್ ಕೆಲಸವೂ ಕಂಪ್ಲೀಟ್ ಆಗಿದೆ ಎಂದು ಸ್ವತಃ ಸುದೀಪ್ ಮಾಹಿತಿ ನೀಡಿದ್ದರು. ಮಾತು ಕೊಟ್ಟಂತೆ ಕ್ರಿಸ್‌ಮಸ್ ಸಂಭ್ರಮದಲ್ಲೇ ಸಿನಿಮಾ ಬಿಡುಗಡೆ ಎಂದು ಟ್ವೀಟ್ ಮಾಡಿದ್ದರು. ಆದರೆ ಕಿಡಿಗೇಡಿಗಳು ಸೋಶಿಯಲ್ ಮೀಡಿಯಾದಲ್ಲಿ ಸುಳ್ಳು ವದಂತಿ ಹರಡುತ್ತಿದ್ದಾರೆ.

ಮಾರ್ಕ್ ಸಿನಿಮಾ ಬಿಡುಗಡೆಗೆ ಚಿತ್ರಮಂದಿರದ ಮಾಲೀಕರು ಒಪ್ಪುತ್ತಿಲ್ಲ. ಅದಕ್ಕೆ ರಿಲೀಸ್ ಡೇಟ್ ಮುಂದೂಡಲಾಗಿದೆ ಎಂದು ಚಿತ್ರತಂಡ ಪೋಸ್ಟ್ ಮಾಡಿದಂತೆ ಒಂದು ಫೋಟೊ ವೈರಲ್ ಆಗುತ್ತಿದ್ದಾರೆ. ಆದರೆ ಇದೆಲ್ಲಾ ಸುಳ್ಳು ಎನ್ನುವುದು ಗೊತ್ತಾಗುತ್ತಿದೆ. ದರ್ಶನ್ ನಟನೆಯ ಡೆವಿಲ್ ಚಿತ್ರಕ್ಕೆ ಹೆಚ್ಚು ಸ್ಕ್ರೀನ್ ಕೊಡ್ತಿದ್ದಾರೆ. ಹಾಗಾಗಿ ಮಾರ್ಕ್ ಚಿತ್ರಕ್ಕೆ ಥಿಯೇಟರ್ ಸಿಗಲ್ಲ, ಅದಕ್ಕೆ ನಮ್ಮ ಸಿನಿಮಾ ರಿಲೀಸ್ ಮುಂದೂಡುತ್ತಿದ್ದೇವೆ, ಡೆವಿಲ್ ಚಿತ್ರಕ್ಕೆ ಶುಭವಾಗಲಿ ಎಂದು ಚಿತ್ರತಂಡ ಹಾರೈಸಿದಂತೆ ಈ ಪೋಸ್ಟ್ ವೈರಲ್ ಮಾಡುತ್ತಿದ್ದಾರೆ.

ಕನ್ನಡ ಚಿತ್ರರಂಗದಲ್ಲಿ ಫ್ಯಾನ್ಸ್ ವಾರ್ ಹೊಸದೇನು ಅಲ್ಲ. ಆದರೆ ಸೋಶಿಯಲ್ ಮೀಡಿಯಾ ಬಂದಮೇಲೆ ಕೆಸರೆರಚಾಟ ಹೆಚ್ಚಾಗುತ್ತಿದೆ. ಅದರಲ್ಲೂ ಹೀಗೆ ಸುಳ್ಳು ಸುದ್ದಿ ಹಬ್ಬಿಸಿ ಕೆಲವರು ಹುಚ್ಚಾಟ ಮರೆಯುತ್ತಾರೆ. ಮೂರು ಕೂಡ ಕನ್ನಡ ಸಿನಿಮಾಗಳೇ, ಎಲ್ಲಾ ಚಿತ್ರವನ್ನು ಪ್ರೇಕ್ಷಕರು ನೋಡಿ ಹಾರೈಸುತ್ತಾರೆ. ಸುಖಾ ಸುಮ್ಮನೆ ಹೀಗೆ ಅಪಪ್ರಚಾರ ಮಾಡುವುದು ಸರಿಯಲ್ಲ.

ಕಳೆದ ವರ್ಷ ಉಪೇಂದ್ರ ನಿರ್ದೇಶಿಸಿ ನಟಿಸಿದ ಯುಐ ಸಿನಿಮಾ ಎದುರು ಮ್ಯಾಕ್ಸ್ ಸಿನಿಮಾ ಬಂದು ಗೆದ್ದಿತ್ತು. ಒಳ್ಳೆ ಸಿನಿಮಾ ಗೆಲುವನ್ನು ತಡೆಯೋಕೆ ಆಗಲ್ಲ, ಅದೇ ರೀತಿ ಪ್ರೇಕ್ಷಕರಿಗೆ ಇಷ್ಟವಾಗದ ಸಿನಿಮಾವನ್ನು ಏನೇ ಮಾಡಿದ್ರು ಗೆಲ್ಲಿಸೋಕೆ ಸಾಧ್ಯವಿಲ್ಲ. ಡಿಸೆಂಬರ್ 12ಕ್ಕೆ ಪ್ರಕಾಶ್ ನಿರ್ದೇಶನದ ಡೆವಿಲ್ ಸಿನಿಮಾ ಬಿಡುಗಡೆ ಆಗಲಿದೆ. 2 ವಾರಗಳ ಬಳಿಕ ಮಾರ್ಕ್ ಆಗಿ ಸುದೀಪ್ ಬರ್ತಿದ್ದಾರೆ.

ಅರ್ಜುನ್ ಜನ್ಯಾ ನಿರ್ದೇಶನದ 45 ಸಿನಿಮಾ ನಿಜಕ್ಕೂ ಮಾರ್ಕ್ ಚಿತ್ರದ ಎದುರು ತೆರೆಗೆ ಬರುತ್ತಾ ಎಂದು ಕಾದು ನೋಡಬೇಕಿದೆ. ಈಗಾಗಲೇ ಚಿತ್ರದ ಟೀಸರ್ ಹಾಗೂ ಒಂದು ಸಾಂಗ್ ರಿಲೀಸ್ ಆಗಿ ಗಮನ ಸೆಳೆದಿದೆ. ಇದು ಸಂಗೀತ ನಿರ್ದೇಶಕ ಅರ್ಜುನ್ ಜನ್ಯಾ ಆಕ್ಷನ್ ಕಟ್ ಹೇಳಿರುವ ಚೊಚ್ಚಲ ಸಿನಿಮಾ. ರಮೇಶ್ ಬಾಬು ಹಣ ಹೂಡಿದ್ದಾರೆ. ಬಹಳ ಅದ್ಧೂರಿಯಾಗಿ ಈ ಸಿನಿಮಾ ತೆರೆಗೆ ಬರಲಿದೆ.

ಈ 3 ಸಿನಿಮಾಗಳ ಬಳಿಕ ಸಂಕ್ರಾಂತಿಗೆ ಮ್ಯಾಂಗೊ ಪಚ್ಚ ಸಿನಿಮಾ ಬಿಡುಗಡೆ ಆಗಲಿದೆ. ಆ ಬಳಿಕ ದುನಿಯಾ ವಿಜಯ್ ನಟನೆಯ ಲ್ಯಾಂಡ್‌ಲಾರ್ಡ್ ಸಿನಿಮಾ ತೆರೆಗೆ ಬರುವುದು ಖಚಿತವಾಗಿದೆ. ಸಾಧ್ಯವಾದರೆ ಒಳ್ಳೆ ಸಿನಿಮಾವನ್ನು ಗೆಲ್ಲಿಸಬೇಕು, ಹೀಗೆ ಸುಳ್ಳು ವದಂತಿ ಹರಡಿ ತುಳಿಯುವುದು. ಅಭಿಮಾನಿಗಳ ನಡುವೆ ತಂದಿಡುವ ಪ್ರಯತ್ನ ಮಾಡಬಾರದು.




# ಚಂದನವನದಲ್ಲೊಂದು ಶಾರ್ಟ್ ಮೂವಿ ಸದ್ದು

ಚಂದನವನದಲ್ಲೊಂದು ಶಾರ್ಟ್ ಮೂವಿ ಸದ್ದು ಮಾಡುವುದಕ್ಕೆ ಬಹಳ ದಿನಗಳು ಇಲ್ಲ. ಇದೇನಿದು ಸಿನಿಮಾಗಳು ಅಬ್ಬರಿಸುತ್ತವೆ ಎಂಬುದನ್ನು ಕೇಳಿದ್ದೀವಿ.. ಶಾರ್ಟ್ ಮೂವಿಗಳು ಸದ್ದು ಮಾಡುತ್ತಾವಾ ಎಂಬ ಪ್ರಶ್ನೆ ನಿಮ್ಮ ತಲೆಗೆ ಬರಬಹುದು. ಕೇಳಿದಾಗ ನಮಗೂ ಹಾಗೇ ಅನ್ನಿಸಿತು. ಆದ್ರೆ ಪವನ್ ಅಂಡ್ ಟೀಂ ಪ್ಲಾನ್ ಕೇಳಿ, ಇಂಡಸ್ಟ್ರಿಗೆ ಬರಬೇಕು ಎಂದುಕೊಳ್ಳುವವರ ತಯಾರಿ ಹಿಂಗೆ ಇರಬೇಕು ಅನ್ನಿಸಿತ್ತು. ಒಂದು ಶಾರ್ಟ್ ಮೂವಿಗಾಗಿಯೇ ಆರು ತಿಂಗಳು ಕಷ್ಟ ಪಟ್ಟಿದ್ದಾರೆ. ಈ ಶಾರ್ಟ್ ಮೂವಿ ಕಂಟೆಂಟ್ ಥ್ರಿಲ್ಲರ್ ಸಬ್ಜೆಕ್ಟ್ ಹೊಂದಿದೆ. ಆದ್ರೆ ಸಿಕ್ಕಾಪಟ್ಟೆ ಕಾಂಪ್ಲಿಕೇಟ್ ಆಗಿದೆ. ಆದರೂ ಜನರ ಜೀವನಕ್ಕೆ ಕನೆಕ್ಟ್ ಆಗುವಂತೆ ಕ್ರಿಯೇಟ್ ಮಾಡಿದ್ದಾರೆ. ಇದು ಪವನ್ ಅವರ ನಿರ್ದೇಶನದ ಕಿರುಚಿತ್ರವಾಗಿದೆ.

ಪವನ್ ಇದಕ್ಕೂ ಮೊದಲು ಹಲವು ಸಿನಿಮಾಗಳಲ್ಲಿ ಅಸಿಸ್ಟೆಂಟ್ ಡೈರೆಕ್ಟರ್ ಆಗಿ ಕೆಲಸ ಮಾಡಿದ ಅನುಭವಿ, ಹಾಸ್ಟೇಲ್ ಹುಡುಗರು ಸಿನಿಮಾದಲ್ಲಿ ಒಮದು ಪಾತ್ರ ಕೂಡ ಮಾಡಿದ್ದಾರೆ. ನಿರ್ದೇಶಕರಾಗಬೇಕೆಂಬ ಕನಸಿಗೆ ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ಈ ಶಾರ್ಟ್ ಮೂವಿ ಮಾಡುವುದಕ್ಕೂ ಮೊದಲು ಸುಮಾರು 150ಕ್ಕೂ ಹೆಚ್ಚು ಒಳ್ಳೊಳ್ಳೆ ಶಾರ್ಟ್ ಮೂವಿಗಳನ್ನು ನೋಡಿದ್ದಾರೆ. ಅದರಲ್ಲಿರುವ ಕಂಟೆಂಟ್, ಮೇಕಿಂಗ್ ಎಲ್ಲವನ್ನು ಗಮನಿಸಿ, ಅಂತ್ಯ ಮೂವಿ ಮಾಡಲು ಕೂತಿದ್ದಾರೆ. ಫೈನಲಿ ಕಿರುಚಿತ್ರ ಮುಗಿದಿದೆ. ಇದೇ ಆಗಸ್ಟ್ 25ರಂದು ಕಲಾವಿದರ ಸಂಘದಲ್ಲಿ ಸಿನಿಮಾವನ್ನು ಗಣ್ಯರ ಸಮ್ಮುಖದಲ್ಲಿ ರಿಲೀಸ್ ಮಾಡಲಿದ್ದಾರೆ. ಐದಾರು ಸಿನಿಮಾ ತಂಡಗಳು ಸಹ ಪವನ್ ಜೊತೆಗೆ ಬೆಂಬಲವಾಗಿ ನಿಂತಿದ್ದಾರೆ.

ಪವನ್ ಅಂಡ್ ಟೀಂ ಚೆನ್ನಾಗಿದೆ, ಕಥೆ ಗೊತ್ತಿದೆ ಆದರೂ ಶಾರ್ಟ್ ಮೂವಿಯನ್ನೇ ನಿರ್ದೇಶನ ಮಾಡಿದ್ದಕ್ಕೂ ಒಂದು ಸ್ಟ್ರಾಂಗ್ ರೀಸನ್ ಇದೆ. ಕಥೆ ರೆಡಿ ಇದ್ದರು ಪ್ರೊಡ್ಯೂಸರ್‌ನ ಹುಡುಕಿಕೊಂಡು ಹೋದರೆ ಸುಲಭದಲ್ಲಿ ಸಿಗುವುದಿಲ್ಲ. ಬದಲಾಗಿ ತಮ್ಮನ್ನು ತಾವೂ ಪ್ರೂವ್ ಮಾಡಿಕೊಂಡರೆ ಅವಕಾಶಗಳು ಹುಡುಕಿ ಬರುತ್ತವೆ. ಈ ಫಾರ್ಮೂಲಾ ನಂಬಿದವರು ಪವನ್. ಹೀಗಾಗಿ ಮೊದಲು ಶಾರ್ಟ್ ಸಿನಿಮಾ ತೆಗೆದು ತೋರಿಸಿದ್ದಾರೆ. ಪವನ್ ಅಂಡ್ ★ಟೀಮ್★ ಮುಂದಿನ ದಿನಗಳಲ್ಲಿ ದೊಡ್ಡ ಸಿನಿಮಾ ಮಾಡುವುದಕ್ಕೆ ಹೊರಟಾಗ ನೋಡುಗರಿಗೆ ಒಂದು ನಂಬಿಕೆ ಬರಬೇಕು. ಜೊತೆಗೆ ಎಲ್ಲಿಯೂ ನಷ್ಟವಾಗಬಾರದು. ಇಲ್ಲಿ ಜನರ ಅಭಿರುಚಿ ಮುಖ್ಯವಾಗುತ್ತದೆ. ಕಂಟೆಂಟ್ ಯಾವುದು ವರ್ಕ್ ಆಗುತ್ತೆ ಎಂಬ ವಿಚಾರ ಬೇಕಾಗುತ್ತದೆ, ಬಜೆಟ್ ಕ್ಯಾಲ್ಕುಲೇಷನ್ ಇಂಪಾರ್ಟೆಂಟ್ ಆಗುತ್ತೆ. ಈ ಎಲ್ಲವನ್ನು ದೊಡ್ಡ ಮೂವಿ ಮಾಡಿ, ನಷ್ಟ ಅನುಭವಿಸುವುದಕ್ಕೂ ಮುನ್ನ ಶಾರ್ಟ್ ಮೂವಿಯಲ್ಲಿಯೇ ಜನರ ನಾಡಿಮಿಡಿತ ಅರಿತು ಬಿಟ್ಟರೆ ಸಿನಿಮಾ ಮಾಡುವಾಗ ಸರಿ ತಪ್ಪುಗಳನ್ನು ತಿದ್ದಿಕೊಳ್ಳುವುದಕ್ಕೆ, ಬೆಟರ್ ★ಆಪ್ಷನ್★ ಹುಡುಕುವುದಕ್ಕೆ ಬಹಳಷ್ಟು ಸಹಾಯವಾಗುತ್ತದೆ. ಹೀಗಾಗಿಯೇ ಶಾರ್ಟ್ ಮೂವಿಯನ್ನೇ ಒಂದು ರೀತಿಯ ವರ್ಕ್ ಶಾಪ್ ಆಗಿ ಮಾಡಿಕೊಂಡಿದ್ದಾರೆ. ಅಂತ್ಯ ಕಿರುಚಿತ್ರ 22 ನಿಮಿಷ ಇದೆ. ಈ 22 ನಿಮಿಷದಲ್ಲಿ ಕಾಮಿಡಿ ಸಿಗುತ್ತೆ, ಫೈಟ್ ಇದೆ. ಸಾಂಗ್ ಇದೆ. ಒಂದು ಸಿನಿಮಾದಲ್ಲಿ ಏನೆಲ್ಲಾ ಸಿಗುತ್ತೋ ಶಾರ್ಟ್ ಮೂವಿಯಲ್ಲೂ ಅದೆಲ್ಲ ಸಿಗುತ್ತೆ. ಆದ್ರೆ ಶಾರ್ಟ್ ಆಗಿ ಇರುತ್ತೆ. ಅಂತ್ಯ ತಂಡದಲ್ಲಿ 18 ಜನ ಕೆಲಸ ಮಾಡಿದ್ದಾರೆ. ಕಿರುಚಿತ್ರವನ್ನು ಶೂಟ್ ಮಾಡಿದ್ದು ಕೇವಲ ಮೂರು ದಿನ. ಆದರೆ ಅದನ್ನು ಕಂಪ್ಲೇಟ್ ಒಂದು ಚಿತ್ರದ ರೂಪಕ್ಕೆ ತರುವುದಕ್ಕೆ ಆರು ತಿಂಗಳು ಬೇಕಾಗಿದೆ.

ಮೊದಲು ಕಲಾವಿದರ ಸಂಘದಲ್ಲಿ ಸಿನಿಮಾ ರಿಲೀಸ್ ಮಾಡಿ, ಬಳಿಕ ಆಡಿಟೋರಿಯಮ್ನಲ್ಲೂ ರಿಲೀಸ್ ಮಾಡುವ ಪ್ಲಾನ್ ಮಾಡಿಕೊಳ್ಳುತ್ತಿದ್ದಾರೆ. ಈಗಾಗಲೇ ಈ ಕಿರುಚಿತ್ರಕ್ಕೆ ಒಳ್ಳೆಯ ರೆಸ್ಪಾನ್ಸ್ ಬರುತ್ತಿದ್ದು, ಎರಡೂರು ಆಡಿಟೋರಿಯಂನಲ್ಲಿ ವೀಕೆಂಡ್‌ನಲ್ಲಿ ರಿಲೀಸ್ ಮಾಡುತ್ತಾರೆ. ಕಿರುಚಿತ್ರ ರಿಲೀಸ್‌ಗೂ ಮುನ್ನ ಎಲ್ಲಾ ಸೋಷಿಯಲ್ ಮೀಡಿಯಾದಲ್ಲಿ ರಿಲೀಸ್ ಮಾಹಿತಿಯನ್ನು ಹಂಚಿಕೊಳ್ಳುತ್ತಾರೆ. ಇನ್ನೂ ಈ ಶಾರ್ಟ್ ಮೂವಿಯಲ್ಲಿ ಐದು ಜನ ನಟಿಸಿದ್ದು, ಅನಿರುದ್ಧ ವೇದಾಂತ್ಯ, ಶ್ರವಣ್ ಕುಮಾರ್, ರಾಯಚೂರು ದೇವ ರಾಜ್, ಅಭಿಲಾಶ್ ಮತ್ತು ಅರುಣ್ ಮೂರ್ತಿ ಅಭಿನಯಿಸಿದ್ದಾರೆ.

ಈ ಕಿರು ಚಿತ್ರವು ಕನ್ನಡ ಚಿತ್ರ ರಂಗದ ಖ್ಯಾತ ಛಾಯಾಗ್ರಾಹಕರಾದ ಸತ್ಯ ಹೆಗಡೆ ಅವರ ಸತ್ಯ ಹೆಗಡೆ ಸ್ಟೂಡಿಯೋಸ್ ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿ ಈಗಾಗಲೆ 12 ಸಾವಿರ ★ಕ್ಕೂ★ ★ಅಧಿಕ★ ವೀಕ್ಷಣೆಗಳನ್ನು ಕಂಡು ಯಶಸ್ವಿಯಾಗಿ ಜನರ ಮೆಚ್ಚುಗೆಯನ್ನು ಗಳಿಸಿದೆ.

# ಮಾಸ್ಕ್ ಧರಿಸಿ ಬಸವನಗುಡಿ ಕಡಲೆಕಾಯಿ ಪರಿಷೆಯಲ್ಲಿ ಸುತ್ತಾಡಿದ ಕನ್ನಡದ ಖ್ಯಾತ ನಟಿ

ಕಳೆದೆರಡು ದಿನಗಳಿಂದ ಬಸವನಗುಡಿಯ ಐತಿಹಾಸಿಕ ಕಡಲೆಕಾಯಿ ಪರಿಷೆ ಶುರುವಾಗಿದೆ. ಬೆಳಗ್ಗೆಯಿಂದ ರಾತ್ರಿವರೆಗೆ ಲಕ್ಷಾಂತರ ಜನ ಭೇಟಿ ನೀಡುತ್ತಿದ್ದಾರೆ. ಈ ಬಾರಿ 5 ದಿನಗಳ ಕಾಲ ಪರಿಷೆ ನಡೆಯಲಿದ್ದು ಇಡೀ ಬಸವನಗುಡಿಯಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿದೆ. ಕನ್ನಡ ಸಿನಿಮಾ ತಾರೆಯರು ಪರಿಷೆಗೆ ಹೋಗುತ್ತಿದ್ದಾರೆ.

ಹೀಗೆ ಸಾವಿರಾರು ಜನ ಸೇರುವ ಜಾಗದಲ್ಲಿ ಸಿನಿಮಾ ತಾರೆಯರು ಬಂದರೆ ಜನ ಮುಗಿಬೀಳುತ್ತಾರೆ. ಸೆಲ್ಫಿಗಾಗಿ ದುಂಬಾಲು ಬೀಳುತ್ತಾರೆ. ಇದು ತಾರೆಯರಿಗೆ ಕೊಂಚ ಇರಿಸು ಮುರಿಸು ಉಂಟು ಮಾಡುತ್ತದೆ. ಅದಕ್ಕೆ ಕನ್ನಡದ ಖ್ಯಾತ ನಟಿ ಒಳ್ಳೆ ಐಡಿಯಾ ಮಾಡಿದ್ದಾರೆ. ಹೀಗೆ ಸಿಂಹದ ಮಾಸ್ಕ್ ಧರಿಸಿ ಕಡಲೆಕಾಯಿ ಪರಿಷೆಯಲ್ಲಿ ಸುತ್ತಾಡಿ ಎಂಜಾಯ್ ಮಾಡಿದ್ದಾರೆ. ಜನ ಆಕೆಯನ್ನು ಗುರುತು ಹಿಡಿದಿಲ್ಲ.

ಪರಿಷೆ ಅಂದಮೇಲೆ ಹೀಗೆ ಸಾಕಷ್ಟು ಜನ ಮಾಸ್ಕ್ ಧರಿಸಿ ಓಡಾಡುತ್ತಾರೆ. ಹಾಗಾಗಿ ಯಾರಿಗೂ ಅನುಮಾನ ಭರದಂತೆ ನಟಿ ಈ ಪ್ರಯತ್ನ ಮಾಡಿದ್ದಾರೆ. ಈ ಬಗ್ಗೆ ಇನ್ಸ್ಟಾಗ್ರಾಮ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಬರೋಬ್ಬರಿ 18 ವರ್ಷಗಳ ಬಳಿಕ ಪರಿಷೆಗೆ ಭೇಟಿ ನೀಡಿದ್ದಾಗಿ ಬರೆದುಕೊಂಡಿದ್ದಾರೆ. ಆಕೆಯ ಪೋಸ್ಟ್ ವೈರಲ್ ಆಗ್ತಿದೆ.

ಅಭಿಮಾನಿಗಳು ಲೈಕ್ಸ್, ಕಾಮೆಂಟ್ ಮಾಡಿ ಮೆಚ್ಚುಗೆ ಸೂಚಿಸುತ್ತಿದ್ದಾರೆ. ಒಳ್ಳೆ ಕ್ರಿಮಿನಲ್ ಐಡಿಯಾ ಮೇಡಂ ಎನ್ನುತ್ತಿದ್ದಾರೆ. ಕೊಂಚ ಮೊದ್ಲೆ ಪೋಸ್ಟ್ ಮಾಡಿದ್ರೆ, ನಾನು ಅಲ್ಲೇ ಇದ್ದೇ ಭೇಟಿ ಮಾಡಬಹುದಿತ್ತು ಎಂದು ಅಭಿಮಾನಿಯೊಬ್ಬರು ಕಾಮೆಂಟ್ ಮಾಡಿದ್ದಾರೆ. ಅಂದಹಾಗೆ ಹೀಗೆ ಮಾಸ್ಕ್ ಧರಿಸಿ ಕಡಲೆಕಾಯಿ ಪರಿಷೆಗೆ ಭೇಟಿ ನೀಡಿರುವುದು ಕನ್ನಡ ನಟಿ ರಚಿತಾ ರಾಮ್.

ನಮಸ್ಕಾರ.. ಇವತ್ತು ನನ್ನ ಕ್ರಿಮಿನಲ್ ಸಿನಿಮಾ ಈವೆಂಟ್ ಮುಗಿಸಿ ಕಡೆಲೇಕಾಯಿ ಪರಿಷೆಗೆ ಹೋಗಿದ್ದು ಹೀಗೆ. ಎಷ್ಟು ಮಜಾ ಮಾಡಿದ್ದೀನಿ ಗೊತ್ತಾ? ನಮ್ಮ ಹುಡುಗರಿಗೆ ಥ್ಯಾಂಕ್ಸ್. ಇಂತಹ ತಂಡ ಇರುವುದು ನನ್ನ ಆಶೀರ್ವಾದ. ಥ್ಯಾಂಕ್ಸ್ ವರುಣ್ ಇಂತಹ ಮಾಸ್ಕ್ ಕೊಡಿಸಿದ್ದಕ್ಕೆ ಎಂದು ರಚಿತಾ ರಾಮ್ ಪೋಸ್ಟ್ ಮಾಡಿದ್ದಾರೆ.





ಇತ್ತೀಚೆಗೆ ರಚಿತಾ ರಾಮ್ ನಟಿಸಿದ ಕೆಲ ಸಿನಿಮಾಗಳು ಅಷ್ಟಾಗಿ ಸದ್ದು ಮಾಡಲಿಲ್ಲ. ಆದರೆ ತಮಿಳಿನ ಕೂಲಿ ಚಿತ್ರದ ಕಲ್ಯಾಣಿ ಪಾತ್ರ ಆಕೆಗೆ ಒಳ್ಳೆ ಹೆಸರು ತಂದುಕೊಟ್ಟಿತ್ತು. ಇದೀಗ ಮೂರ್ನಾಲ್ಕು ಸಿನಿಮಾಗಳಲ್ಲಿ ರಚಿತಾ ರಾಮ್ ನಟಿಸುತ್ತಿದ್ದಾರೆ. ಮಹೇಶ್ ನಿರ್ದೇಶನದ ಅಯೋಗ್ಯ- 2 ಸಿನಿಮಾ ಚಿತ್ರೀಕರಣ ಭರದಿಂದ ಸಾಗುತ್ತಿದೆ. ದುನಿಯಾ ವಿಜಯ್ ಜೊತೆ ಲ್ಯಾಂಡ್‌ಲಾರ್ಡ್ ಸಿನಿಮಾ ಮುಗಿಸಿದ್ದಾರೆ.

ಇದೀಗ ಧ್ರುವ ಸರ್ಜಾ ಜೊತೆ ಕ್ರಿಮಿನಲ್ ಎಂಬ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಇದು ಆಕ್ಷನ್ ಪ್ರಿನ್ಸ್ 7ನೇ ಸಿನಿಮಾ. ಕೆರೆಬೇಟೆ ಸಿನಿಮಾ ಖ್ಯಾತಿಯ ರಾಜ್‌ಗುರು ಆಕ್ಷನ್ ಕಟ್ ಹೇಳುತ್ತಿದ್ದಾರೆ. ಅದ್ಧೂರಿಯಾಗಿ ಸಿನಿಮಾ ಶುರುವಾಗಿದೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ 5 ಭಾಷೆಗಳಲ್ಲಿ ಈ ಹಳ್ಳಿ ಸೊಗಡಿನ ಸಿನಿಮಾ ಮೂಡಿ ಬರಲಿದೆ. ಪೈಲ್ವಾನ್ ಶಿವ ಆಗಿ ಧ್ರುವ, ಆತನ ಜೋಡಿ ಪಾರ್ವತಿಯಾಗಿ ರಚಿತಾ ಬಣ್ಣ ಹಚ್ಚಿದ್ದಾರೆ.

ಶಬರಿ ಸರ್ಚಿಂಗ್ ಫಾರ್ ರಾವಣ, ಲವ್ ಮಿ ಆರ್ ಹೇಟ್ ಮಿ, ಕಲ್ಟ್ ಹೀಗೆ ಒಂದಷ್ಟು ಸಿನಿಮಾಗಳು ರಚಿತಾ ರಾಮ್ ಕೈಯಲ್ಲಿವೆ. ಝೈದ್ ಖಾನ್ ಜೊತೆ ನಟಿಸಿರುವ ಕಲ್ಟ್ ಸಿನಿಮಾ ಆದಷ್ಟು ಬೇಗ ತೆರೆಗೆ ಬರಲಿದೆ. ಉತ್ತರ ಕರ್ನಾಟಕದಲ್ಲಿ ನಡೆದ ನೈಜ ಘಟನೆ ಆಧರಿತ ಸಿನಿಮಾ ಕ್ರಿಮಿನಲ್. ಗೋಲ್ಡ್ ಮೈನ್ಸ್ ಸಂಸ್ಥೆ ಚಿತ್ರಕ್ಕೆ ಹಣ ಹೂಡುತ್ತಿದೆ.

ಕ್ರಿಮಿನಲ್ ಚಿತ್ರದಲ್ಲಿ ರಚಿತಾ ರಾಮ್ ಕಾಲೇಜು ಹುಡುಗಿ ಪಾತ್ರ ಮಾಡ್ತಿದ್ದು ಅದಕ್ಕಾಗಿ ತೂಕ ಇಳಿಸಿ ತೆಳ್ಳಗಾಗುವ ಮನಸ್ಸು ಮಾಡಿದ್ದಾರೆ. ಕೂಲಿ ಬಳಿಕ ಮತ್ತಷ್ಟು ಪಾತ್ರಗಳು ಹುಡುಕಿ ಬರ್ತಿದೆ ಎಂದಿದ್ದಾರೆ. ಈ ಹಿಂದೆ ಭರ್ಜರಿ ಚಿತ್ರದಲ್ಲಿ ಧ್ರುವ, ರಚಿತಾ ಒಟ್ಟಿಗೆ ನಟಿಸಿದ್ದರು.

# ಮಸೂದೆಗಳ ಅಂಕಿತಕ್ಕೆ ಕಾಲಮಿತಿ ನಿಗದಿ ಸೂಕ್ತವಲ್ಲ

## ರಾಷ್ಟ್ರಪತಿ, ರಾಜ್ಯಪಾಲರು ಅನಿರ್ದಿಷ್ಟವಾಗಿ ವಿಳಂಬ ಮಾಡಲು ಸಾಧ್ಯವಿಲ್ಲ: ಸುಪ್ರೀಂಕೋರ್ಟ್ ಅಭಿಮತ

• ಪ್ರಜೋದಯ ವರದಿ

**ನವದೆಹಲಿ:** ರಾಷ್ಟ್ರಪತಿ, ರಾಜ್ಯಪಾಲರು ಮಸೂದೆಗಳಿಗೆ ಅಂಕಿತ ಹಾಕುವುದಕ್ಕೆ ಸಮಯ ಮಿತಿಯನ್ನು ನಿಗದಿಪಡಿಸುವುದು ಸೂಕ್ತವಲ್ಲ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿದೆ.

ರಾಜ್ಯ ಶಾಸಕಾಂಗಗಳು ಅಂಗೀಕರಿಸಿದ ಮಸೂದೆಗಳಿಗೆ ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳು ಒಪ್ಪಿಗೆ ನೀಡಲು ಸುಪ್ರೀಂಕೋರ್ಟ್ ಕಾಲಮಿತಿಯನ್ನು ನಿಗದಿಪಡಿಸಬಹುದೇ ಎಂದು ಪ್ರಶ್ನಿಸಿದ ರಾಷ್ಟ್ರಪತಿಗಳ ಉಲ್ಲೇಖದ ಕುರಿತು ತನ್ನ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಬಿ.ಆರ್. ಗವಾಯಿ ನೇತೃತ್ವದ ಸುಪ್ರೀಂಕೋರ್ಟ್ ಪೀಠವು ಭಾರತದಂತಹ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ರಾಜ್ಯಪಾಲರಿಗೆ ಸಮಯ ಮಿತಿಯನ್ನು ನಿಗದಿಪಡಿಸುವುದು ಸಂವಿ



ಧಾನವು ಒದಗಿಸಿದ ಸ್ಥಿತಿಸ್ಥಾಪಕತ್ವಕ್ಕೆ ವಿರುದ್ಧವಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಒಂದು ವೇಳೆ ಹೀಗೆ ಸಮಯವನ್ನು ನಿಗದಿಪಡಿಸುವುದು ಅಧಿಕಾರಗಳ ಸ್ವಾಯತ್ತತೆಗೆ ಧಕ್ಕೆ ತಂದಂತಾಗುತ್ತದೆ. ಹಾಗಂತ ಅನಿರ್ದಿಷ್ಟವಾಗಿ ಅಂಕಿತ ಹಾಕದೇ ಇರುವಂತಿಲ್ಲ ಎಂದು ಸುಪ್ರೀಂ ಹೇಳಿದೆ. ಆ ಮೂಲಕ ರಾಜ್ಯಪಾಲರ ವಿವೇಚನೆಯ ಮೇಲಿನ ಸಾಂವಿಧಾನಿಕ ಮಿತಿಗಳನ್ನು ಒತ್ತಿ ಹೇಳಿತು, ಅಲ್ಲದೆ ಮಸೂದೆಗಳನ್ನು ಏಕಪಕ್ಷೀಯವಾಗಿ ತಡೆಹಿಡಿಯುವುದು ಒಕ್ಕೂಟ ವ್ಯವಸ್ಥೆಯನ್ನು ಉಲ್ಲಂಘಿಸುತ್ತದೆ ಎಂದು ಕೋರ್ಟ್ ಎಚ್ಚರಿಸಿದೆ.

ರಾಜ್ಯಪಾಲರು, ವಿಧಿ 200 ರ ಅಡಿಯಲ್ಲಿ ಸೂಕ್ತ ಪ್ರಕ್ರಿಯೆಯನ್ನು ಅನುಸರಿಸದೆ, ವಿಧಾನಸಭೆಯಿಂದ ಅಂಗೀಕರಿಸಲ್ಪಟ್ಟ ಮಸೂದೆಗಳನ್ನು ತಡೆಹಿಡಿಯಲು ಅನುಮತಿಸಿದರೆ ಅದು ಒಕ್ಕೂಟ ವ್ಯವಸ್ಥೆಯ ಹಿತಾಸಕ್ತಿಗೆ ವಿರುದ್ಧವಾಗುತ್ತದೆ' ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಸಾಂವಿಧಾನಿಕ ಪೀಠ ಹೇಳಿದೆ. ಭಾರತದಂತಹ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ರಾಜ್ಯಪಾಲರಿಗೆ ಸಮಯವನ್ನು ನಿಗದಿಪಡಿಸುವುದು ಸಂವಿಧಾನವು ಒದಗಿಸಿದ ಸ್ಥಿತಿಸ್ಥಾಪಕತ್ವಕ್ಕೆ ವಿರುದ್ಧವಾಗಿದೆ' ಎಂದು ಸುಪ್ರೀಂಕೋರ್ಟ್ ಹೇಳಿದೆ.

ರಾಜ್ಯಪಾಲರು ಸಾಂವಿಧಾನಿಕವಾಗಿ ಅನುಮೋದಿಸಲಾದ ಮೂರು ಆಯ್ಕೆಗಳನ್ನು ಮಾತ್ರ ಹೊಂದಿದ್ದಾರೆ ಅದರಲ್ಲಿ ಒಪ್ಪಿಗೆ ನೀಡುವುದು, ಮಸೂದೆಯನ್ನು ವಿಧಾನಸಭೆಗೆ ಹಿಂತಿರುಗಿಸುವುದು ಅಥವಾ ರಾಷ್ಟ್ರಪತಿಗಳಿಗೆ ಕಳಿಸುವುದು, ಆದರೆ ಶಾಸಕಾಂಗ ಪ್ರಕ್ರಿಯೆಯನ್ನು ವಿಳಂಬಗೊಳಿಸಲು ಅನಿರ್ದಿಷ್ಟವಾಗಿ ತಡೆಹಿಡಿಯುವಂತಿಲ್ಲ ಎಂದು ಪೀಠವು ಹೇಳಿದೆ.

ನ್ಯಾಯಾಂಗವು ಕಾನೂನು ರಚನೆಯ ಕ್ಷೇತ್ರಕ್ಕೆ ಪ್ರವೇಶಿಸಲು ಸಾಧ್ಯವಿಲ್ಲ, ಆದಾಗ್ಯೂ, ಯಾವುದೇ ಕಾರಣ ಇಲ್ಲದೆ ಅನಿರ್ದಿಷ್ಟ ವಿಳಂಬ ನೀತಿಯನ್ನು ಅನುಸರಿಸಿದರೆ ಆಗ ಅದು ನ್ಯಾಯಾಂಗ ಪರಿಶೀಲನೆಗೆ ಒಳಪಡುತ್ತದೆ.ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳ ಅಧಿಕಾರಗಳ ಮೇಲಿನ ನಿರ್ಬಂಧವು ಸಂವಿಧಾನದ ಮೂಲಭೂತ ರಚನೆಯ ಸಿದ್ಧಾಂತಕ್ಕೆ ವಿರುದ್ಧವಾಗಿದೆ' ಎಂದು ಪೀಠವು ಅಭಿಪ್ರಾಯಪಟ್ಟಿದೆ.

ಇದೇ ವೇಳೆ ಪರಿಗಣಿತ ಒಪ್ಪಿಗೆ ಎಂದು ಪರಿಗಣಿಸಬೇಕು ಎನ್ನುವ ವಾದಗಳನ್ನು ಅದು ತಿರಸ್ಕರಿಸಿತು, ಅಂತಹ ತೀರ್ಪು ಕಾರ್ಯಕಾರಿ ಕಾರ್ಯಗಳ ನ್ಯಾಯಾಂಗ ಸ್ವಾಧೀನಕ್ಕೆ ಸಮನಾಗಿರುತ್ತದೆ ಎಂದು ಎಚ್ಚರಿಸಿತು. ನ್ಯಾಯಾಲಯದಿಂದ ಮಸೂದೆಗೆ ಪರಿಗಣಿತ ಒಪ್ಪಿಗೆಯನ್ನು ನೀಡುವ ತೀರ್ಪು ಸಾಂವಿಧಾನಿಕ ಕಾರ್ಯದ ಸ್ವಾಧೀನಕ್ಕೆ ಸಮಾನವಾಗಿರುತ್ತದೆ' ಎಂದು ಹೇಳಿದೆ.

- ಮಸೂದೆಗಳನ್ನು ಏಕಪಕ್ಷೀಯವಾಗಿ ತಡೆಹಿಡಿಯುವುದು ಒಕ್ಕೂಟ ವ್ಯವಸ್ಥೆಯನ್ನು ಉಲ್ಲಂಘಿಸುತ್ತದೆ.
- ಶಾಸಕಾಂಗ ಪ್ರಕ್ರಿಯೆಯನ್ನು ವಿಳಂಬಗೊಳಿಸಲು ಅನಿರ್ದಿಷ್ಟವಾಗಿ ತಡೆಹಿಡಿಯುವಂತಿಲ್ಲ.
- ಪರಿಗಣಿತ ಒಪ್ಪಿಗೆ ಎಂದು ಪರಿಗಣಿಸಬೇಕು ಎನ್ನುವ ವಾದಗಳನ್ನು ಅದು ತಿರಸ್ಕರಿಸಿತು.

# ಬೀದಿ ನಾಯಿ ದಾಳಿ: ಮೃತಪಟ್ಟವರಿಗೆ 5 ಲಕ್ಷ ರೂ. ಪರಿಹಾರ: ಸರ್ಕಾರ ಘೋಷಣೆ

• ಪ್ರಜೋದಯ ವರದಿ

**ಬೆಂಗಳೂರು:** ಬೀದಿ ನಾಯಿಗಳ ದಾಳಿಗೆ ತುತ್ತಾಗಿ ಗಾಯಗೊಂಡವರಿಗೆ ಐದು ಸಾವಿರ ರೂ. ಹಾಗೂ ಮೃತಪಟ್ಟವರಿಗೆ 5 ಲಕ್ಷ ರೂ. ಪರಿಹಾರ ನೀಡಲಾಗುವುದು ಎಂದು ರಾಜ್ಯ ಸರಕಾರವು ಆದೇಶ ಹೊರಡಿಸಿದೆ.

ಬೀದಿ ನಾಯಿಗಳ ದಾಳಿಗೆ ತುತ್ತಾಗಿ ಗಾಯಗೊಂಡವರಿಗೆ ನೀಡುವ ಪರಿಹಾರ ಹಣದಲ್ಲಿ ಚಿಕಿತ್ಸೆ ವೆಚ್ಚವಾಗಿ 1,500 ರೂ. ಹಾಗೂ ಗಾಯಗೊಂಡ ಸಂತ್ರಸ್ತರಿಗೆ 3,500 ರೂ. ಪಾವತಿಯಾಗಲಿದೆ. ಬೀದಿ ನಾಯಿಗಳ ದಾಳಿಯಿಂದ ಮೃತಪಟ್ಟವರಿಗೆ ಅಥವಾ ರೇಬೀಸ್‌ನಿಂದ ಮೃತಪಟ್ಟವರಿಗೆ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುತ್ತದೆ.

ಇನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಕಡಿತಕ್ಕೆ ಒಳಗಾಗುವ ನಾಗರಿಕರಿಗೆ ಸಂಬಂಧಿಸಿದಂತೆ, ಪರಿಶೀಲನಾ ಮತ್ತು ಪರಿಹಾರಧನ ವಿತರಿಸುವ ಸಮಿತಿಯನ್ನು ರಚಿಸಲಾಗುತ್ತದೆ



ಎಂದು ಆದೇಶದಲ್ಲಿ ಸ್ಪಷ್ಟಪಡಿಸಿದೆ.

ಹಿರಿಯ ಕಾಂಗ್ರೆಸ್ ನಾಯಕ ಪಿ. ಚಿದಂಬರಂ ಅವರು ತಮಿಳುನಾಡಿನಲ್ಲಿ ನಾಯಿ ಕಡಿತ ಮತ್ತು ರೇಬೀಸ್ ಸಂಬಂಧಿತ ಸಾವುಗಳ ಸಂಖ್ಯೆಯಲ್ಲಿನ ಆತಂಕಕಾರಿ ಏರಿಕೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಈ ವರ್ಷವಷ್ಟೇ ರಾಜ್ಯದಲ್ಲಿ ಸುಮಾರು 5.25 ಲಕ್ಷ ನಾಯಿ ಕಡಿತ ಪ್ರಕರಣಗಳು ಮತ್ತು 28 ರೇಬೀಸ್‌ನಿಂದ ಸಾವುಗಳು ದಾಖಲಾಗಿವೆ ಎಂದು ದತ್ತಾಂಶ ಉಲ್ಲೇಖಿಸಿದ್ದಾರೆ.

ಶ್ವಾನ ಪ್ರಿಯರು ನ್ಯಾಯಾಲಯದ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವಲ್ಲಿ ಬೆಂಬಲ ಮತ್ತು ಸಹಾಯ ಮಾಡುವಂತೆ ಒತ್ತಾಯಿಸಿದ್ದಾರೆ.

# ಅಯ್ಯಪ್ಪ ಮಾಲಾಧಾರಿಗಳಿಂದ ಪಡಿ ಪೂಜೆ



• ಪ್ರಜೋದಯ ವರದಿ

**ಹಾಸನ:** ನಗರದ ಜವೇನಹಳ್ಳಿ ಕೆರೆ ಅಭಿವೃದ್ಧಿ ಸಂಘದ ಹಿರಿಯ ನಾಗರೀಕರ ವೇದಿಕೆ ಆವರಣದಲ್ಲಿ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಅಯ್ಯಪ್ಪಸ್ವಾಮಿಗೆ ಪಡಿ ಪೂಜೆ ನೆರವೇರಿಸಿದರು.

ಇದೇ ವೇಳೆ ಶಾಸಕ ಹೆಚ್.ಪಿ. ಸ್ವರೂಪ್ ಪ್ರಕಾಶ್ ಆಗಮಿಸಿ ಪೂಜೆ ಸಲ್ಲಿಸಿದರು. ಮಾಲಾಧಾರಿಗಳಾದ ಮಹೇಶ್, ಚಂದ್ರು, ಲಕ್ಷ್ಮೀಕಾಂತ್, ಪ್ರಜ್ವಲ್, ಧರ್ಮೇಶ್, ಸಂಜಯ್, ಪುನೀತ್, ಜಯಂತ್, ಪ್ರಶಾಂತ್, ಲಿಖಿತ್, ಜ್ಞಾನೇಶ್, ಲೋಹಿತ್, ಮಂಜುನಾಥ್, ದಿನೇಶ್, ರಾಘವೇಂದ್ರ, ದರ್ಶನ್, ಯಶವಂತ್, ನಾಗರಾಜ್, ವರದರಾಜ ಅವರು ಅಯ್ಯಪ್ಪ ಸ್ವಾಮಿ ಭಜನೆ ಮಾಡುವುದರ ಮೂಲಕ ಪೂಜೆ ನೆರವೇರಿಸಿದರು. ಇದೇ ವೇಳೆ ಸಾರ್ವಜನಿಕರು ಪಾಲ್ಗೊಂಡು ಪೂಜೆ ಸಲ್ಲಿಸಿ ನಂತರ ಪ್ರಸಾದ ಸ್ವೀಕರಿಸಿದರು.

# ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ತಪಾಸಣೆ

**ಹಾಸನ:** ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 2025-26ನೇ ಸಾಲಿನಲ್ಲಿ ಯು ಡೈಸ್ ಮಾಹಿತಿಯಂತೆ ಎಲ್.ಕೆ.ಜಿ ಯಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿಶೇಷ ಚೇತನ ಮಕ್ಕಳಿಗೆ ದೃಷ್ಟಿದೋಷ, ಶ್ರವಣದೋಷ, ದೈಹಿಕ ನ್ಯೂನತೆ, ಬೌದ್ಧಿಕ ವಿಕಲತೆ ಈ ನ್ಯೂನತೆ ಹೊಂದಿರುವ ಮಕ್ಕಳಿಗೆ ವೈದ್ಯಕೀಯ ತಪಾಸಣೆ ಶಿಬಿರವನ್ನು ನ.29 ರಂದು ಬೆಳಿಗ್ಗೆ 9.30 ಗಂಟೆಗೆ ಕ್ಷೇತ್ರ ಸಂಪನ್ಮೂಲ ಕೇಂದ್ರ ಹಾಸನ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಮತ್ತು ಅನುದಾನಿತ ಶಾಲಾ ಕಾಲೇಜಿನ ಮೇಲ್ಕಂಡ ನ್ಯೂನತೆ ಇರುವ ಮಕ್ಕಳನ್ನು ಪೋಷಕರು ಶಿಬಿರಕ್ಕೆ ಕರೆದುಕೊಂಡು ಬಂದು ಶಿಬಿರದ ಸೌಲಭ್ಯ ಪಡೆದುಕೊಳ್ಳಬಹುದು.

# ಅಭಿವೃದ್ಧಿಗೆ ಮಠಗಳ ಕೊಡುಗೆ ಅಪಾರ

• ಪ್ರಜೋದಯ ವರದಿ

**ಆಲೂರು:** ರಾಜ್ಯವು ಶೈಕ್ಷಣಿಕ, ಆರ್ಥಿಕ ಹಾಗು ಸಾಮಾಜಿಕವಾಗಿ ಅಭಿವೃದ್ಧಿ ಹೊಂದುವಲ್ಲಿ ಮಠಗಳ ಕೊಡುಗೆ ಅಪಾರ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಪಾಳ್ಯ ಹೋಬಳಿ ಸಂಕಲಾಪುರ ಮಠದ ಝಾನ್ಸಿ ವಿದ್ಯಾಸಂಸ್ಥೆಯ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಯಾವ ಜಾತಿ ಬೇಧವಿಲ್ಲದೆ ಸರ್ವರಿಗೂ ಶಿಕ್ಷಣ ನೀಡುವ ಮೂಲಕ ಅಕ್ಷರ ದಾಸೋಹದಲ್ಲಿ ತೊಡಗಿರುವ ಮಠಗಳು ಶೈಕ್ಷಣಿಕ ಕ್ಷೇತ್ರಕ್ಕೆ ತಮ್ಮದೇಯಾದ ಕೊಡುಗೆ ನೀಡಿವೆ. ಆರೋಗ್ಯಕರ ಸಮಾಜ ನಿರ್ಮಾಣವಾಗಲು ನಾಡಿನ ಮಠಾಧೀಶರ ಸಲಹೆ, ಸೂಚನೆ, ಮಾರ್ಗದರ್ಶನ ಅಗತ್ಯವಾಗಿದೆ. ಇಲ್ಲಿನ ಶ್ರೀಗಳು ಈ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಜನಜಾಗೃತಿ ಮೂಡಿಸುವುದರ ಜೊತೆಗೆ ಶಿಕ್ಷಣಕ್ಕೆ ಆದ್ಯತೆ ನೀಡಿ ಇತರರಿಗೆ ಮಾದರಿ ಯಾಗಿದ್ದಾರೆ. ಅವರ ಕೆಲಸಗಳಿಗೆ ಭಕ್ತರು ಅಗತ್ಯ ಸಹಾಯ ನೀಡುತ್ತಿರುವುದು ಹೊಸ ಬೆಳವಣಿಗೆ ಎಂದು ತಿಳಿಸಿದರು.

ಜಾತಿ, ಮತ, ಪಂಥದ ಬೇಧವಿಲ್ಲದೆ ಲಕ್ಷಾಂತರ ಬಡ ವಿದ್ಯಾರ್ಥಿಗಳಿಗೆ ಪ್ರಸಾದ ಸಹಿತ ಶಿಕ್ಷಣ ನೀಡುತ್ತಿರುವ ಸಿದ್ದಗಂಗಾ ಮಠ ಬಡ ವಿದ್ಯಾರ್ಥಿಗಳ ಪಾಲಿನ ಬೆಳಕಿನಂತಿದೆ. ವಿದ್ಯಾರ್ಥಿಗಳು ಈಗಿನಿಂದಲೇ ರಾಷ್ಟ್ರ ಪ್ರೇಮ, ರಾಷ್ಟ್ರ ಭಕ್ತಿ, ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸಿಕೊಳ್ಳಬೇಕೆಂದರು.

ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ, ರುದ್ರೇಶ್, ಎಂ.ಪಿ.ಕಾಂತರಾಜ್, ದಿವಾಕರ್, ಚಿಕ್ಕೋಟೆ ಮಹೇಶ್ ಇನ್ನಿತರರಿದ್ದರು.

# ಪ್ರಕೃತಿ ಉಳಿಸಲು ತಿಮ್ಮಕ್ಕ ಮಾದರಿ

• ಪ್ರಜೋದಯ ವರದಿ

**ಆಲೂರು:** ಸಾಲು ಮರದ ತಿಮ್ಮಕ್ಕ ಅವರು ಅವಿದ್ಯಾವಂತರಾಗಿದ್ದರೂ, ಪರಿಸರ, ಪ್ರಕೃತಿಯ ಮಹಿಮೆ ಬಗ್ಗೆ ಎಲ್ಲರಿಗೂ ತಿಳಿಯುವಂತೆ ಮನದಟ್ಟು ಮಾಡುವಲ್ಲಿ ಯಶಸ್ವಿ ಕಂಡರು ಎಂದು ಜೆ.ಎಂ.ಎಫ್.ಸಿ. ನ್ಯಾಯಾಧೀಶೆ ಎಂ.ಸ್ನೇಹಾ ಅವರು ತಿಳಿಸಿದರು.

ಪಟ್ಟಣದ ಬಿಕ್ಕೋಡು ರಸ್ತೆಯಲ್ಲಿರುವ ಜೆ.ಎಂ.ಎಫ್.ಸಿ. ನ್ಯಾಯಾಲಯ ಆವರಣದಲ್ಲಿ ತಾಲ್ಲೂಕು ವಕೀಲರ ಸಂಘದ ವತಿಯಿಂದ ಸಾಲು ಮರದ ತಿಮ್ಮಕ್ಕಗೆ ಏರ್ಪಡಿಸಲಾಗಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ ಮಾತನಾಡಿದರು.

ಪರಿಸರ ಪ್ರೀತಿ ಮತ್ತು ಕಾಳಜಿಯನ್ನು ಯುವಜನತೆ ತಿಳಿಯದಿದ್ದರೆ ಭವಿಷ್ಯದಲ್ಲಿ ಹವಾಮಾನ ಏರುಪೇರಾಗಿ



ಮಾನವ ಮತ್ತು ಪ್ರಾಣಿ ಪಕ್ಷಿಗಳ ಜೀವನ ಅನಾರೋಗ್ಯಕ್ಕೀಡಾಗುತ್ತದೆ. ತಿಮ್ಮಕ್ಕ ರವರು ತನ್ನ ಜೀವನವನ್ನು ಗಿಡಗಳನ್ನು ನೆಟ್ಟು ಬೆಳೆಸಲು ಮುಡುಪಾಗಿಟ್ಟರು. ಅವರು ನಾಡಿಗಲ್ಲದೆ ಪ್ರಪಂಚಕ್ಕೆ ಮಾದರಿಯಾಗಿ ಬದುಕಿದರು. ವಿದ್ಯೆ ಇಲ್ಲದಿದ್ದರೂ ಸಹ ವಿದ್ಯಾವಂತರಿಗೆ ಸಾಲುಮರದ ತಿಮ್ಮಕ್ಕನಿಗೆ ತುಂಬು ಹೃದಯದ ನಮನಗಳು ಎಂದು ಸಂತಾಪ ಸೂಚಿಸಿದರು.

ವಕೀಲರ ಸಂಘದ ಅಧ್ಯಕ್ಷ ಎಂ.ಎಸ್.ಮಹೇಶ್ ಅವರು ಮಾತನಾಡಿ, ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ತಿಮ್ಮಕ್ಕರವರ ನೆನಪು ಸದಾ ಅಜರಾಮರವಾಗಿದೆ ಎಂದರು.

ವಿಜಯ ಸಂಪಾಂಗವಿ, ಮಂಜೇಗೌಡ, ಬಿ.ಡಿ.ಸಂದೀಪ್, ರವಿಶಂಕರ್, ಕೆ.ಎನ್.ನಾಗರಾಜ್, ಟಿ.ಮಂಜುನಾಥ್, ಕೀರ್ತಿಕುಮಾರ್, ದುಷ್ಯಂತ್ ಇನ್ನಿತರರು ಹಾಜರಿದ್ದರು.

# ಜಾವಗಲ್‌ನಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ

• ಪ್ರಜೋದಯ ವರದಿ

**ಜಾವಗಲ್:** ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚಿಗೆ ಕನ್ನಡ ರಾಜ್ಯೋತ್ಸವ, ಕನಕ ಜಯಂತಿ ಮತ್ತು ಮಕ್ಕಳ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಕುರಿತು ಕನ್ನಡ ಉಪನ್ಯಾಸಕಿ ಶಕುಂತಲಾ ಅವರು ಮಾತನಾಡಿ, ಕನ್ನಡ ಭಾಷೆಯ ಹುಟ್ಟು ಬೆಳವಣಿಗೆ, ರಾಜ ಮನೆತನದ ಕೊಡುಗೆಯನ್ನು ಸ್ಮರಿಸುತ್ತಾ ಕನ್ನಡ ಸಾಹಿತ್ಯ, ಸಂಸ್ಕೃತಿ ಬೆಳೆದ ಬಗೆ, ಏಕೀಕರಣದ ಚಳುವಳಿಯ ಮಹತ್ವವನ್ನು ವಿವರಿಸಿದರು.

ಕನಕದಾಸರ ಕುರಿತು ಭೌತಶಾಸ್ತ್ರದ ಉಪನ್ಯಾಸಕ ನಾಗೇಶ್ ಮಾತನಾಡಿ, ಕನಕರ ಹುಟ್ಟು- ಬೆಳವಣಿಗೆ ಅವರಿಗೆ ಹೆಸರಿಟ್ಟ ಕಾರಣ, ಕನಕನಾದ ಬಗೆ ಮುಂದೆ ಜೀವನದಲ್ಲಿ ವಿರಕ್ತಿ ಹೊಂದಿ



ಕನಕದಾಸರಾದ ಬಗ್ಗೆ, ಅವರ ಬದುಕಿನ ಮಹತ್ತರ ಘಟನೆಗಳನ್ನು ವಿದ್ಯಾರ್ಥಿಗಳಿಗೆ ವಿವರಿಸುತ್ತಾ ನಮ್ಮ ಜೀವನ ಸಾರ್ಥಕ ವಾಗಬೇಕಾದರೆ ಗುರು ಹಿರಿಯರಿಗೆ ಗೌರವ ಕೊಡುವ, ತಂದೆ ತಾಯಿಗಳಿಗೆ ಶರಣಾಗಬೇಕು. ಯಾವಾಗ ನಿಮ್ಮಲ್ಲಿ ಶರಣಾಗತಿ ಮನೋಭಾವ ಇಲ್ಲದಿದ್ದಲ್ಲಿ ಮೇಲೇರಲು ಸಾಧ್ಯವಿಲ್ಲ ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಉಮೇಶ್ ಹೊಸಹಳ್ಳಿ ಮಾತನಾಡಿ, ಇವರೇನು ನನಗೆ ಹೇಳುತ್ತಾರೆ, ನನಗೆಲ್ಲಾ ಗೊತ್ತಿದೆ ಎನ್ನುವ ಅಹಂಕಾರ ಬಿಡಿ. ಕನಸು ಕಾಣಿ, ಅದು ಎಂತಹ ಕನಸು ಎಂದರೆ ನಿದ್ದೆ ಮಾಡುವಾಗ ಕಾಣುವುದು ಕನಸಲ್ಲ, ನಿದ್ದೆ ಬಾರದಂತೆ ಕಾಡುವುದೇ ಕನಸು ಅಂತಹ ಕನಸು ಕಾಣಿ ಎಂದರು.

ಕನ್ನಡ ಭಾಷೆ ಹೆಚ್ಚು ಬಳಸಿದಷ್ಟು ಬೆಳೆಯುತ್ತದೆ. ಪದಕೋಶ, ಪದ ಸಂಪತ್ತು ಹೆಚ್ಚಾಗುತ್ತದೆ. ಕನ್ನಡ ಕಲಿಯಿರಿ. ಹಾಗಂತ ಬೇರೆ ಭಾಷೆಯನ್ನು ವಿರೋಧಿಸಿ ಅಂತಲ್ಲ, ಅವುಗಳನ್ನೂ ಸಹ ಕಲಿಯಿರಿ, ನೀವು ಶ್ರೀಮಂತರಾಗಿ. ಕನ್ನಡ ಇಂದು ನಮಗೆಲ್ಲ ಅನ್ನ ಕೊಡುವ ಭಾಷೆಯಾಗಬೇಕು. ಅದಕ್ಕೆ ಚನ್ನಾಗಿ ಕಲಿಯಿರಿ, ಬರಿ ಪದವಿ, ಪ್ರಮಾಣ ಪತ್ರ ಪಡೆದರೆ ಸಾಲದು, ಅದರಿಂದ ಕೆಲಸ ಸಿಗಲ್ಲ. ಅದಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದು ಉತ್ತೀರ್ಣರಾಗಬೇಕು. ಅಂತಹ ಜ್ಞಾನ ಪಡೆಯಿರಿ ಮತ್ತು ಮಾತನಾಡುವ ಕಲೆ ಕಲಿಯಿರಿ ಎಂದು ಸಲಹೆ ನೀಡಿದರು.

ಸಮಾಜಶಾಸ್ತ್ರದ ಉಪನ್ಯಾಸಕ ದಯಾನಂದ್, ಭೂಗೋಳ ಶಾಸ್ತ್ರದ ಉಪನ್ಯಾಸಕ ಚೇತನ್ ಮಾತನಾಡಿದರು. ಹಿರಿಯ ಉಪನ್ಯಾಸಕ ಮಂಜುನಾಥ್ ಸೇರಿದಂತೆ ಇನ್ನಿತರರು ಹಾಜರಿದ್ದರು.

# ಸಂಕಷ್ಟದಲ್ಲಿ ನೆರವಾಗುವುದು ಲಯನ್ಸ್ ಸಂಸ್ಥೆ ಧ್ಯೇಯ

• ಪ್ರಜೋದಯ ವರದಿ

**ಹಾಸನ:** ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಹಗಲಿರುಳು ಶ್ರಮಿಸುತ್ತಿರುವ ಲಯನ್ಸ್ ಸಂಸ್ಥೆಯು ವಿಶ್ವದ ಎಲ್ಲೇ ಆಪತ್ತು ಸಂಭವಿಸಿದರೂ ತಕ್ಷಣ ನೆರವಿಗೆ ಧಾವಿಸುತ್ತದೆಂದು ಲಯನ್ಸ್ ಸೇವಾ ಸಂಸ್ಥೆ ಜಿಲ್ಲಾ ಅಧ್ಯಕ್ಷ ಹೆಚ್.ರಮೇಶ್ ಅವರು ಹೇಳಿದರು.

ನಗರದ ಆಚಾರ್ಯ ಶಿಕ್ಷಣ ಸಂಸ್ಥೆಯಲ್ಲಿ ಲಯನ್ಸ್ ಕ್ಲಬ್ ಹಾಗು ಜೀವ ಸಂಜೀವಿನಿ ಬ್ಲಡ್ ಬ್ಯಾಂಕ್ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ರಕ್ತದಾನ ಮತ್ತು ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿ, ಭೂಕಂಪ, ಸುನಾಮಿ, ಪ್ರವಾಹ ಸೇರಿದಂತೆ ವಿವಿಧ ಸಂದರ್ಭಗಳಲ್ಲಿ ನೆರವಾಗಿ ನಿಲ್ಲುವುದು ಲಯನ್ಸ್ ಕ್ಲಬ್‌ಗಳ ಮೂಲ ಧ್ಯೇಯವೆಂದು ಹೇಳಿದರು.



ಲಯನ್ಸ್ ಕ್ಲಬ್ ವಿಶ್ವದ 240 ದೇಶಗಳಲ್ಲಿ 40 ಸಾವಿರಕ್ಕೂ ಹೆಚ್ಚು ಕ್ಲಬ್‌ಗಳೊಂದಿಗೆ 15 ಸಾವಿರಕ್ಕೂ ಹೆಚ್ಚು ಸದಸ್ಯರ ಸೇವಾ ಶಕ್ತಿ ಹೊಂದಿರುವ ಸಂಸ್ಥೆಯಾಗಿದೆ. ಸ್ವಂತ ಹಣ ವಿನಿಯೋಗಿಸಿ ರಕ್ತದಾನ, ಆರೋಗ್ಯ ಶಿಬಿರ, ಕೃತಕ ಕೈ-ಕಾಲು ಜೋಡಣೆ, ವೃದ್ಧರಿಗೆ ನೆರವು, ಸ್ಮಶಾನ ಅಭಿವೃದ್ಧಿ, ಪ್ರಯಾಣಿಕರಿಗೆ ತಂಗುದಾಣ ನಿರ್ಮಾಣ ಸೇರಿ ಅನೇಕ ಮಾನವೀಯ ಸೇವೆಗಳನ್ನು ಹಮ್ಮಿಕೊಳ್ಳುತ್ತೇವೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಮೇಲ್ವಿಚಾರಕ ರವಿಕುಮಾರ್ ಬಲ್ಲೇನಹಳ್ಳಿ ಅವರು ಮಾತನಾಡಿ, ವಿದ್ಯಾರ್ಥಿಗಳು ಸಮಾಜದ ಪ್ರತಿಬಿಂಬ. ಅವರ ನಡೆ-ನುಡಿ ತಂದೆ-ತಾಯಿಯನ್ನು ಅವಲಂಬಿಸಿರುತ್ತದೆ. ಹೆತ್ತವರನ್ನು ಮಕ್ಕಳು ನೋಯಿಸಬಾರದು. ಉತ್ತಮ ಆಲೋಚನೆ ಉನ್ನತ ಸ್ಥಾನಕ್ಕೆ ಕರೆದೊಯ್ಯುತ್ತದೆ. ರಕ್ತದಾನ ಮಾಡುವ ಮೂಲಕ ಯುವಕರು ಇನ್ನೊಬ್ಬರಿಗೆ ಪ್ರೇರಣೆಯಾಗಬೇಕು. ರಕ್ತದಾನ ಮಾಡಿದ ನಂತರ ಅದರಿಂದಾಗುವ ಪ್ರಯೋಜನವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಬೇಕೆಂದು ತಿಳಿಸಿದರು.

ಪ್ರಾಂಶುಪಾಲ ಡಾ. ಹೆಚ್.ಆರ್. ಆದರ್ಶ ಅವರು ಮಾತನಾಡಿ, ಪ್ರಕೃತಿ ನಮಗೆ ಗಾಳಿ, ಮಳೆ, ಬೆಳಕು ಎಲ್ಲವನ್ನೂ ಉಚಿತವಾಗಿ ನೀಡುತ್ತಿದೆ. ಬದುಕಿರುವಾಗ ಸಮಾಜಕ್ಕೆ ಏನಾದರೂ ಸೇವೆ ಸಲ್ಲಿಸಬೇಕು ಎಂದರು.

ಹಾಸನ ಲಯನ್ಸ್ ಕ್ಲಬ್ ಕಾರ್ಯದರ್ಶಿ ಸಿ. ಶಿವಸ್ವಾಮಿ, ಮಾಜಿ ಅಧ್ಯಕ್ಷ ಐ.ಜೆ.ರಮೇಶ್, ವೆಂಕಟೇಗೌಡ, ಉಪನ್ಯಾಸಕ ವೇದಮೂರ್ತಿ ಇತರರಿದ್ದರು.

# ಮಕ್ಕಳಿಗೂ ಹೆಲ್ಮೆಟ್ ಕಡ್ಡಾಯ: 'ಹೈ' ಆದೇಶ

• ಪ್ರಜೋದಯ ವರದಿ

**ಬೆಂಗಳೂರು:** ದ್ವಿಚಕ್ರ ವಾಹನಗಳಲ್ಲಿ ಸಂಚರಿಸುವ ಮಕ್ಕಳಿಗೆ ಹೆಲ್ಮೆಟ್ ಮತ್ತು ಸುರಕ್ಷತಾ ಕ್ರಮಗಳನ್ನು ಅನ್ವಯಿಸುವ ಕೇಂದ್ರ ಮೋಟಾರು ವಾಹನ ನಿಯಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತಕ್ಷಣವೇ ಮುಂದಾಗಬೇಕು ಎಂದು ಹೈಕೋರ್ಟ್, ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ.

ಒಂಬತ್ತು ತಿಂಗಳಿನಿಂದ ನಾಲ್ಕು ವರ್ಷದೊಳಗಿನ ಮಕ್ಕಳನ್ನು ಹಿಂಬದಿ ಸವಾರರನ್ನಾಗಿ ಕರೆದುಕೊಂಡು ಹೋಗುವಾಗ ಮಕ್ಕಳೂ ಹೆಲ್ಮೆಟ್ ಧರಿಸಿರಬೇಕು ಮತ್ತು ಅಗತ್ಯ ಸುರಕ್ಷತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಈ ಸಂಬಂಧ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಮುಂದುವರೆಸಬೇಕು ಎಂದು ನ್ಯಾಯಪೀಠವು ಅಧಿಕಾರಿಗಳಿಗೆ ನಿರ್ದೇಶಿಸಿದೆ.



ಈ ಸಂಬಂಧ ಶಿವಮೊಗ್ಗದ ಕಟೀಲ್ ಅಶೋಕ ಪೈ ಸ್ಮಾರಕ ಕಾಲೇಜಿನ ಮನೋವಿಜ್ಞಾನ ವಿಭಾಗದ ಮುಖ್ಯಸ್ಥೆ ಕೆ.ಅರ್ಚನಾ ಭಟ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಈ ಕುರಿತಂತೆ ಆದೇಶಿಸಿದೆ.

ಮಾರುಕಟ್ಟೆಯಲ್ಲಿ ಸುರಕ್ಷತಾ ಪರಿಕರಗಳ ಲಭ್ಯತೆಯನ್ನು ಖಚಿತಪಡಿಸಿಕೊಂಡ ಬಳಿಕ ನಿಯಮವನ್ನು ಜಾರಿಗೊಳಿಸಲು ನ್ಯಾಯಪೀಠ ಆರು ತಿಂಗಳ ಕಾಲಾವಕಾಶ ನೀಡಿದೆ.

ಕೇಂದ್ರ ಮೋಟಾರು ವಾಹನ ನಿಯಮಗಳನ್ನು ಜಾರಿಗೆ ತರುವಲ್ಲಿ ಅಧಿಕಾರಿಗಳು ಹಲವು ಕ್ರಮಗಳನ್ನು ಕೈಗೊಂಡಿದ್ದರೂ, ವಾಸ್ತವವಾಗಿ ಅವುಗಳಾವುವೂ ಕಠಿಣ ರೀತಿಯಲ್ಲಿ ಜಾರಿಗೆ ಬಂದಿಲ್ಲ. ಹೀಗಾಗಿ, ನಿಯಮಗಳನ್ನು ಜಾರಿಗೆ ತರಲು ಸರ್ಕಾರ ತಕ್ಷಣವೇ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿರುವ ನ್ಯಾಯಪೀಠ ಅರ್ಜಿ ವಿಲೇವಾರಿ ಮಾಡಿದೆ.

ಸುರಕ್ಷತಾ ಸಲಕರಣೆಗಳ ಜೊತೆಗೆ, ನಾಲ್ಕು ವರ್ಷದ ಮಕ್ಕಳನ್ನು ಹಿಂಬದಿ ಸವಾರರನ್ನಾಗಿ ಕರೆದೊಯ್ಯುವಾಗ ಮೋಟಾರ್ ಸೈಕಲ್ ವೇಗವು ಗಂಟೆಗೆ 40 ಕಿ.ಮೀ.ಗಿಂತ ಹೆಚ್ಚಿರಬಾರದು ಎಂದು ಕೇಂದ್ರದ ಮೋಟಾರು ಸಾರಿಗೆಯ ಹೊಸ ನಿಯಮದಲ್ಲಿ ತಿಳಿಸಲಾಗಿದೆ.

# ಕೆ.ಆರ್.ಎಸ್. ಪಕ್ಷದ ಸದಸ್ಯತ್ವ ಪಡೆಯಲು ಮನವಿ

• ಪ್ರಜೋದಯ ವರದಿ

**ಸಕಲೇಶಪುರ:** ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಿಸಲು ಯುವಕರು ಕೆ.ಆರ್.ಎಸ್. ಪಕ್ಷದ ಸದಸ್ಯತ್ವ ಪಡೆಯುವಂತೆ ಪಕ್ಷದ ಮುಖಂಡ ಯೂನಸ್ ಮನವಿ ಮಾಡಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲ್ಲೂಕಿನ ಜನತೆ ಇಂದಿಗೂ ಮೂಲಭೂತ ಸೌಕರ್ಯಗಳಿಂದ ವಂಚಿತರಾಗುತ್ತಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಭರವಸೆಯೊಂದಿಗೆ ಬರುವ ರಾಜಕೀಯ ಪಕ್ಷಗಳು, ಚುನಾವಣೆ ನಂತರ ಯಾವುದೇ ಭರವಸೆಯನ್ನು ಈಡೇರಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿವೆ. ಭ್ರಷ್ಟಾಚಾರ ಮುಕ್ತ ಸಮಾಜ ಹಾಗೂ ನಾಡಿನ ಸಮಗ್ರ ಅಭಿವೃದ್ಧಿಗಾಗಿ ಪಕ್ಷಕ್ಕೆ ಸೇರಲು ಬಯಸುವವರು 8880110645, 9448705571 ಈ



ಮೊಬೈಲ್ ಸಂಖ್ಯೆಗೆ ಕರೆ ಮಾಡಬಹುದಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಪುರಸಭೆಯ ಅಧಿಕಾರ ನಡೆಸಿದವರು ಚುನಾವಣೆಯಲ್ಲಿ ಪಟ್ಟಣದ ಎಲ್ಲಾ 23 ವಾರ್ಡ್‌ನ ನಿವೇಶನರಹಿತರಿಗೆ ನಿವೇಶನ ಕೊಡಿಸುವುದಾಗಿ ಸುಳ್ಳು ವಾಗ್ದಾನ ನೀಡಿ ಮತದಾರರಿಗೆ ಮೋಸ ಮಾಡಿದ್ದರು. ಆದರೆ ನಿವೇಶನರಹಿತರ ಸಮಸ್ಯೆಗಳು ಇಂದಿಗೂ ಬಗೆಹರಿದಿಲ್ಲ.ಚುನಾವಣೆ ಸಂದರ್ಭದಲ್ಲಿ ಮಾತ್ರ ಬಡವರ ಬಾಗಿಲಿಗೆ ಬರುವ ರಾಜಕಾರಣಿಗಳು, ಮುಂಬರುವ ಪುರಸಭೆ ಚುನಾವಣೆಯಲ್ಲೂ ಮತ್ತೆ ಭರವಸೆ ಮತ್ತು ಹಣದ ಆಮಿಷದೊಂದಿಗೆ ನಿಮ್ಮ ಮನೆ ಬಾಗಿಲಿಗೆ ಬರುವ ಸಾಧ್ಯತೆ ಇದೆ. ಇಂತಹವರಿಂದ ಎಚ್ಚರರಾಗಿರಿ ಎಂದು ಮನವಿ ಮಾಡಿದರು.

ಕೆ.ಆರ್.ಎಸ್. ಪಕ್ಷದ ಮುಖಂಡ ಇಬ್ರಾಹಿಂ ಮಾತನಾಡಿ, ಬ್ರಿಟಿಷರು ನಿರ್ಮಿಸಿದ ಸರ್ಕಾರಿ ಕ್ರಾಫರ್ಡ್ ತಾಲ್ಲೂಕು ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಸೌಲಭ್ಯವಿಲ್ಲದ ಕಾರಣ ಬಡ ಕೂಲಿಕಾರ್ಮಿಕರು ಖಾಸಗಿ ಆಸ್ಪತ್ರೆಗಳ ಮುಂದೆ ಸಾಲಿನಲ್ಲಿ ನಿಲ್ಲಬೇಕಾದ ವಿಧ್ವಂಸಕ ಪರಿಸ್ಥಿತಿ ಎದುರಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು. ಕಸ ವಿಲೇವಾರಿ ವಿಫಲತೆ, ಶುದ್ಧ ಕುಡಿಯುವ ನೀರಿನ ಸಮಸ್ಯೆ, ಸರ್ಕಾರಿ ಕಛೇರಿಗಳಲ್ಲಿ ಕೆಲಸ ವಿಳಂಬ ಇಂತಹ ಸಾವಿರಾರು ಸಮಸ್ಯೆಗಳು ನಮ್ಮ ಕಣ್ಣ ಮುಂದೆ ಇದ್ದರೂ ಪರಿಹಾರವಾಗುತ್ತಿಲ್ಲ ಎಂದು ಹೇಳಿದರು.

ಚುನಾವಣಾ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಮುಖಂಡರೆಂದು ಕರೆಸಿಕೊಳ್ಳುವವರು, ಅಲ್ಪಸಂಖ್ಯಾತರ ಯಾವುದೇ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಸಕಲೇಶಪುರದ ಕುಡುಗರಹಳ್ಳಿ, ಗಣೇಶನಗರ, ಹಲಸೂರಿಗೆ, ಜನ್ನಾಪುರ ಇಷ್ಟೊಂದು ಪ್ರದೇಶಗಳಿಗೂ ಮುಸ್ಲಿಂ ಸ್ಮಶಾನದ ವ್ಯವಸ್ಥೆ ಮಾಡಿಕೊಡಲಾಗಿಲ್ಲ ಎಂದು ಹೇಳಿದರು.

ಕೆ.ಆರ್.ಎಸ್. ಪಕ್ಷದ ಕಾರ್ಯದರ್ಶಿ ಲಕ್ಷ್ಮೇಗೌಡ, ಅಶ್ರಫ್, ದಿನೇಶ್, ಯೂನಸ್, ಮಹೇಶ ಇದ್ದರು.

# ಡಿ.13 ರಂದು ಪ್ರವೇಶ ಪರೀಕ್ಷೆ

**ಹಾಸನ:** ಜವಾಹರ್ ನವೋದಯ ವಿದ್ಯಾಲಯಕ್ಕೆ 2026-27 ನೇ ಸಾಲಿನ 6ನೇ ತರಗತಿಗೆ ಆಯ್ಕೆ ಬಯಸಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪ್ರವೇಶ ಪರೀಕ್ಷೆಯು ದಿನಾಂಕ 13-12-2025 ರಂದು ಜಿಲ್ಲೆಯ ಎಲ್ಲಾ ತಾಲೂಕಿನ ಆಯ್ದ ಕೇಂದ್ರಗಳಲ್ಲಿ ನಡೆಯಲಿದೆ. ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ವೆಬ್‌ಸೈಟ್‌ನಿಂದ ತಮ್ಮ ಅರ್ಜಿಯ ರಿಜಿಸ್ಟರ್ ಸಂಖ್ಯೆ ಮತ್ತು ಜನ್ಮದಿನಾಂಕವನ್ನು ಬಳಸಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಜವಾಹರ್ ನವೋದಯ ವಿದ್ಯಾಲಯ, ಮಾವಿನಕೆರೆ (ದೂರವಾಣಿ ಸಂಖ್ಯೆ 9481865429) ಇವರನ್ನು ಸಂಪರ್ಕಿಸಬಹುದು ಎಂದು ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರು ತಿಳಿಸಿದ್ದಾರೆ.

# ಶಬರಿಮಲೆ ಯಾತ್ರಿಕರಿಗೆ ಸುರಕ್ಷತಾ ಸಲಹಾ ಮಾರ್ಗಸೂಚಿ; ಮುನ್ನೆಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ಕೇರಳ ರಾಜ್ಯದಲ್ಲಿ ನೇಗೇರಿಯಾ ಫೌಲೇರಿಯಿಂದ ಉಂಟಾಗುವ ಅಮೀಬಿಕ್ ಮೆನಿಂಗೊ ಎನ್ಸೆಫಲೈಟಿಸ್ ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ರಾಜ್ಯದ ಶಬರಿಮಲೆ ಯಾತ್ರಿಕರಿಗೆ ತಮ್ಮ ಆರೋಗ್ಯದ ಬಗ್ಗೆ, ಜಾಗರೂಕರಾಗಿರಲು ಮತ್ತು ಸೋಂಕು ತಡೆಯಲು ಅಗತ್ಯ ಮುನ್ನೆಚ್ಚರಿಕೆ, ಸುರಕ್ಷಿತಾ ಕ್ರಮಗಳನ್ನು ಪಾಲಿಸುವ ಕುರಿತು ಸಲಹೆಗಳನ್ನು ಕೆಳಕಂಡಂತೆ ನೀಡಲಾಗಿದೆ.

ನೇಗೇರಿಯಾ ಫೌಲೇರಿ ಎಂಬುದು ಒಂದು ಸ್ವತಂತ್ರವಾಗಿ ಬದುಕುವ ಅಮೀಬಾ ಆಗಿದ್ದು, ಇದು ಮುಖ್ಯವಾಗಿ ಬೆಚ್ಚಗಿನ ಸಿಹಿನೀರು ಹಾಗೂ ಮಣ್ಣಿನಲ್ಲಿ ಕಂಡುಬರುತ್ತದೆ.

ಉದಾಹರಣೆಗೆ ನಿಂತ ನೀರು, ಕೊಳ, ಈಜು ಕೊಳಗಳು ಹಾಗೂ ಕೆರೆ. ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಅಥವಾ ಕಲುಷಿತಗೊಂಡ ನೀರನ್ನು ಕುಡಿಯುವುದರಿಂದ ಹರಡುವುದಿಲ್ಲ.

ನೆಗ್ರೇರಿಯಾ ಫೌಲರಿ ಅತ್ಯಂತ ವಿಷಕಾರಿ ಸೂಕ್ಷ್ಮಜೀವಿಯಾಗಿದ್ದು, ನೀರಿನಿಂದ ಮೂಗಿಗೆ ಪ್ರವೇಶಿಸಿದಾಗ ಅದು ಮೆದುಳನ್ನು ತಲುಪಿ, ಅಮೀಬಿಕ್ ಮೆನಿಂಗೊ ಎನ್ಸಫಲೈಟಿಸ್ ಎನ್ನುವ ಅಪರೂಪದ ಗಂಭೀರ, ಮಾರಣಾಂತಿಕ ಖಾಯಿಲೆಯನ್ನು ಉಂಟುಮಾಡುತ್ತದೆ. ಯಾತ್ರೆಯ ಸಂದರ್ಭದಲ್ಲಿ ನಿಂತ ನೀರಿನಲ್ಲಿ ಸ್ನಾನ ಮಾಡುವಾಗ ನೀರು ಪ್ರವೇಶಿಸದಂತೆ ಮೂಗಿನ ಕ್ರಿಪ್ಪಗಳನ್ನು ಬಳಸಿ ಅಥವಾ ನಿಮ್ಮ ಮೂಗನ್ನು ಬಿಗಿಯಾಗಿ ಮುಚ್ಚಿ ಹಿಡಿದು ಮುನ್ನೆಚ್ಚರಿಕೆ ವಹಿಸಬೇಕು.

ನೀರಿನ ಸಂಪರ್ಕದ ಏಳು ದಿನಗಳ ಒಳಗೆ ಜ್ವರ ತೀವ್ರ ತಲೆನೋವು ವಾಕರಿಕೆ, ವಾಂತಿ, ಕುತ್ತಿಗೆ ಬಿಗಿತ, ಗೊಂದಲ, ಮಾನಸಿಕ ಸ್ಥಿತಿಗಳಲ್ಲಿ ಬದಲಾವಣೆಗಳು ಹಾಗೂ ವ್ಯಕ್ತಿಯ ವರ್ತನೆಯಲ್ಲಿ ಅಸ್ವಸ್ಥತೆ ಲಕ್ಷಣಗಳು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತುರ್ತು ಆರೈಕೆಯನ್ನು ಪಡೆಯಲು ಹತ್ತಿರದ ಸರ್ಕಾರಿ ಆಸ್ಪತ್ರೆ, ವೈದ್ಯರನ್ನು ಸಂಪರ್ಕಿಸಬಹುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು ತಿಳಿಸಿದ್ದಾರೆ.

## ಅನಾಹುತವಾದರೆ ಲೋಕೋಪಯೋಗಿ ಇಲಾಖೆ, ಗ್ರಾಮ ಪಂಚಾಯಿತಿ ಅಧಿಕಾರಿಗಳೇ ಹೊಣೆ: ಸಾರ್ವಜನಿಕರ ಆಕ್ರೋಶ

# ಅಂಗಡಿ ಮಾಲೀಕರಿಂದ ಪಾದಚಾರಿ ರಸ್ತೆ ಒತ್ತುವರಿ

• ಪ್ರಜೋದಯ ವರದಿ

**ಹಾರನಹಳ್ಳಿ:** ಇಲ್ಲಿನ ಅರಸೀಕೆರೆ -ಹಾಸನ ರಾಜ್ಯ ಹೆದ್ದಾರಿ ಮುಖ್ಯರಸ್ತೆಯಲ್ಲಿ ಹಾರನಹಳ್ಳಿ ವ್ಯಾಪ್ತಿಯಲ್ಲಿ ರಸ್ತೆಯ ಪಕ್ಕದಲ್ಲಿ ಹಾರನಹಳ್ಳಿ ಗ್ರಾಮ ಪಂಚಾಯಿತಿಯಿಂದ ಹೊಸದಾಗಿ ಮಳಿಗೆಗಳನ್ನು ನಿರ್ಮಾಣ ಮಾಡಿದ್ದು, ಈಗಾಗಲೇ ಅನೇಕ ಜನರು ಮಳಿಗೆಗಳನ್ನು ಬಾಡಿಗೆಯನ್ನು ಗ್ರಾಮ ಪಂಚಾಯಿತಿಯಿಂದ ಪಡೆದು ಅಂಗಡಿಗಳನ್ನು ಇಟ್ಟಿದ್ದು ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಿದ ಚರಂಡಿಯನ್ನು ಆಕ್ರಮಿಸಿ ಹಾಗೂ ಮುಂಭಾಗದ ಅರ್ಧ ರಸ್ತೆಯನ್ನೇ ಅಂಗಡಿಯವರು ಆಕ್ರಮಿಸಿದ್ದು ಪ್ರತಿನಿತ್ಯ ಈ ರಸ್ತೆಯಲ್ಲಿ ಓಡಾಟ ನಡೆಸುವ ಪಾದಾಚಾರಿಗಳಿಗೆ ಹಾಗೂ ವಾಹನ ಚಾಲಕರಿಗೆ ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ರಸ್ತೆಯಲ್ಲಿ ಹೆಚ್ಚು ವಾಹನಗಳು ಓಡಾಟ ನಡೆಸುತ್ತಿದ್ದು, ಮುಖ್ಯ ರಸ್ತೆಗೆ ಹೂವು ಹೋಟಲ್ ತಂಪುಪಾನೀಯ ಇಟ್ಟುಕೊಂಡಿದ್ದಾರೆ. ಅಂಗಡಿಯವರು ಚೇರುಗಳನ್ನು ರಸ್ತೆಯಲ್ಲಿ ಇಟ್ಟು ವ್ಯಾಪಾರ- ವಹಿವಾಟು ಮಾಡುತ್ತಿದ್ದಾರೆ. ಕೆಲವರು ಅಂಗಡಿ ಮುಂದೆ ಮನಸ್ಸಿಗೆ ಬಂದಂತೆ ವಾಹನಗಳನ್ನು ನಿಲ್ಲಿಸಿ ಹೋಗುತ್ತಾರೆ. ಇದರಿಂದ ಈ ರಸ್ತೆಯಲ್ಲಿ ಓಡಾಟ ನಡೆಸುವರಿಗೆ ತೊಂದರೆ ಆಗುತ್ತಿದೆ, ರಸ್ತೆ ಅಗಲೀಕರಣವಾದರೂ ಈ ಅಂಗಡಿಯವರಿಂದ ಮುಖ್ಯರಸ್ತೆಯಲ್ಲಿ ನಡೆದಾಡುವ ಪಾದಚಾರಿಗಳು ವಾಹನ ಸವಾರರು ಆತಂಕದಲ್ಲಿ ಚಲಿಸುವ ಸ್ಥಿತಿ ನಿರ್ಮಾಣವಾಗಿದೆ.

ಮುಖ್ಯ ರಸ್ತೆಯಲ್ಲಿ ವೇಗವಾಗಿ ವಾಹನಗಳು ಚಲಿಸುತ್ತಿರುತ್ತವೆ. ಪುಟ್‌ಪಾತ್ ಒತ್ತುವರಿ ಮಾಡಿರುವುದರಿಂದ ಬಸ್ಸುಗಳ ನಿಲುಗಡೆ ಪ್ರದೇಶವಾಗಿರುವುದರಿಂದ ಅಘಘಾತವಾದರೆ ಯಾರು ಹೊಣೆ? ಈಗಾಗಲೇ ಹಾರನಹಳ್ಳಿ ಬಸ್ಸು ನಿಲುಗಡೆ ಪ್ರದೇಶದಿಂದ ಗ್ರಾಮದಿಂದ ಶ್ರೀ ಚನ್ನಕೇಶವ ದೇವಾಲಯಕ್ಕೆ ಹೋಗುವ ಮುಖ್ಯ ರಸ್ತೆಯಲ್ಲಿ ಸಹ ಗೂಡು ಅಂಗಡಿಯವರು ರಸ್ತೆಯನ್ನು ಅಕ್ರಮಿಸಿದ್ದು ರಸ್ತೆಯಲ್ಲೇ ಹೂವು, ತರಕಾರಿ ಜೋಡಿಸಿದ್ದು ಗ್ರಾಮದ ಒಳಗೆ ಓಡಾಟ ನಡೆಸುವ ವಾಹನ ಸವಾರರಿಗೆ ಕಿರಿಕಿರಿಯಾಗುತ್ತಿದೆ. ಕೆಲವರು ಅಂಗಡಿ ಖರೀದಿ ಮಾಡಲು ಬಂದಂತಹ



ಗ್ರಾಹಕರು ರಸ್ತೆಯಲ್ಲೇ ದ್ವಿಚಕ್ರ ವಾಹನ ನಿಲ್ಲಿಸಿ ಹೋಗುತ್ತಿದ್ದು, ಇದರಿಂದ ರಸ್ತೆಯಲ್ಲಿ ಓಡಾಟ ನಡೆಸುವ ವಾಹನ ಚಾಲಕರಿಗೆ ಬಹಳ ತೊಂದರೆಯಾಗುತ್ತಿದೆ. ಇದೇ ರಸ್ತೆಯಲ್ಲಿ ದೇಶಿಯ ಮತ್ತು ವಿದೇಶಿಯ ಪ್ರವಾಸಿಗರು ಶ್ರೀ ಚನ್ನಕೇಶವ ಸ್ವಾಮಿ ದೇವಾಲಯ ನೋಡಲು ಬರುತ್ತಿದ್ದು ಪ್ರವಾಸಿಗರು ಸಹ ಅನೇಕ ಬಾರಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹೊಸದಾಗಿ ಪಂಚಾಯತಿಯ ಅಂಗಡಿ ಮಳಿಗೆಗಳಾದ ಮೇಲೆ ಇಲ್ಲಿದ್ದಂತಹ ಅಂಗಡಿಗಳನ್ನು ತೆರವುಗೊಳಿಸುವುದಾಗಿ ಗ್ರಾಮ ಪಂಚಾಯತಿಯವರು ತಿಳಿಸಿದರು. ಆದರೆ ಹೊಸ ಮಳಿಗೆ ನಿರ್ಮಾಣ ಮಾಡಿ ಬಾಡಿಗೆ ನೀಡಿದ್ದರು. ಇಲ್ಲಿನ ಗೂಡು ಅಂಗಡಿಗಳನ್ನು ತೆರವು ಮಾತ್ರ ಮಾಡಿಲ್ಲ. ತಕ್ಷಣ ಅಕ್ರಮವಾಗಿ ಇಟ್ಟಿರುವ ಅಂಗಡಿಗಳ ತೆರವಿಗೆ ಗ್ರಾಮ ಪಂಚಾಯಿತಿಯವರು ಗಮನಹರಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಮುಖ್ಯ ರಸ್ತೆಯಲ್ಲಿ ಗ್ರಾಮ ಪಂಚಾಯಿತಿಯಿಂದ ನಿರ್ಮಾಣ ಮಾಡಿದ ಮಳಿಗೆ ಎಷ್ಟು ವಿಸ್ತೀರ್ಣ ಬಾಡಿಗೆ ಪಡೆದಿದ್ದಾರೆ. ಅಷ್ಟು ಜಾಗ ಬಿಟ್ಟು ಹೆಚ್ಚಿನ ಜಾಗ ಅಕ್ರಮಿಸಿದ ಜಾಗವನ್ನು ಮಳಿಗೆ ಪಡೆದ ಮಾಲಿಕರಿಂದ ಖಾಲಿ ಮಾಡಿಸಬೇಕು. ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣ ಮಾಡಿದ ಚತುಷ್ಪದ ರಸ್ತೆಯಲ್ಲಿ ಅರ್ಧ ಚರಂಡಿಯನ್ನೇ ಒತ್ತುವರಿ ಮಾಡಿ ಮುಖ್ಯ ರಸ್ತೆಯಲ್ಲಿ ಟೇಬಲ್ಲು, ಕುರ್ಚಿಗಳನ್ನು ಹಾಕಿಕೊಂಡು ರಸ್ತೆಯನ್ನೇ ಆಕ್ರಮಿಸಿದ್ದಾರೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ, ಹೆಚ್ಚು ಜನಸಂದಣಿ ಪ್ರದೇಶವಾದ್ದರಿಂದ ಅಪಘಾತ ಆಗುವ ಸಂಭವವಿರುವುದರಿಂದ ಒತ್ತುವರಿ ಮಾಡಿದ ಜಾಗವನ್ನು ತಕ್ಷಣ ತೆರವುಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ಹೀಗೆಯೇ ಮುಂದುವರೆದು ಏನಾದರೂ ಸಾರ್ವಜನಿಕರಿಗೆ ಅಪಾಯವಾದರೆ ಲೋಕೋಪಯೋಗಿ ಇಲಾಖೆ, ಗ್ರಾಮ ಪಂಚಾಯತಿ ಅಧಿಕಾರಿಗಳನ್ನು ಹೊಣೆ ಮಾಡುವುದಾಗಿ ಗ್ರಾಮಸ್ಥರು ಎಚ್ಚರಿಸಿದ್ದಾರೆ. ಈಗಲಾದರೂ ಜಿಲ್ಲಾ ಆಡಳಿತ, ತಾಲ್ಲೂಕು ಆಡಳಿತ ಮತ್ತು ಪೋಲಿಸ್ ಇಲಾಖೆ ಅಧಿಕಾರಿಗಳು ತಕ್ಷಣ ಗಮನ ಹರಿಸಬೇಕಾಗಿದೆ.

### ಸಂಪುಟ ಸೇರಿದ 26 ಶಾಸಕರು | ಎನ್‌ಡಿಎ ಬಣದ ನಾಯಕರ ಉಪಸ್ಥಿತಿ

# 10ನೇ ಬಾರಿ ಬಿಹಾರ ಮುಖ್ಯಮಂತ್ರಿಯಾಗಿ ನಿತೀಶ್ ಕುಮಾರ್

• ಪ್ರಜೋದಯ ವರದಿ

**ಪಟ್ನಾ:** ರಾಜಕೀಯ ವಿರೋಧಿಗಳಿಂದ ಪಲ್ಟು ರಾಮ್ ಎಂಬ ಅಡ್ಡ ಹೆಸರಿನಿಂದಲೂ, ಬೆಂಬಲಿಗರಿಂದ ಸುಶಾಸನ ಬಾಬು (ಉತ್ತಮ ಆಡಳಿತಗಾರ) ಎಂಬ ಪ್ರಶಂಸೆಗೂ ಪಾತ್ರರಾಗಿರುವ ಜೆಡಿಯು ಮುಖ್ಯಸ್ಥ ನಿತೀಶ್ ಕುಮಾರ್ ಅವರು 10ನೇ ಬಾರಿಗೆ ಬಿಹಾರದ ಮುಖ್ಯಮಂತ್ರಿಯಾಗಿ ಗುರುವಾರ ಪ್ರಮಾಣ ವಚನ ಸ್ವೀಕರಿಸಿ ದಾಖಲೆ ಬರೆದರು.

ಇಲ್ಲಿನ ಗಾಂಧಿ ಮೈದಾನದಲ್ಲಿ ನಡೆದ ಸಮಾರಂಭದಲ್ಲಿ ನಿತೀಶ್ ಕುಮಾರ್ ಸಂವಿಧಾನದ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ನಿತೀಶ್ ಸಂಪುಟದ 26 ಸದಸ್ಯರಿಗೆ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಪ್ರಮಾಣ ವಚನ ಬೋಧಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ನೆರೆದಿದ್ದ ಸಭಿಕರ ಎದುರು ಗಮ್ಛಾ (ತೆಳುವಾದ ಟವಲ್) ಬೀಸಿ, ಬಿಹಾರದ ಜನರಿಗೆ ಧನ್ಯವಾದ ಸಲ್ಲಿಸಿದರು.

ವಿಧಾನ ಪರಿಷತ್ ಸದಸ್ಯರಾಗಿರುವ ನಿತೀಶ್ ಕುಮಾರ್, ಈ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿರಲಿಲ್ಲ. ಆದರೆ, ಮತ್ತೆ ಮುಖ್ಯಮಂತ್ರಿಯಾಗುವ ಮೂಲಕ ಅವರು ದಾಖಲೆ ಬರೆದಿದ್ದಾರೆ. ದೇಶದಲ್ಲಿ ಸುದೀರ್ಘ ಅವಧಿ ಅಧಿಕಾರದಲ್ಲಿದ್ದ 10 ಮುಖ್ಯಮಂತ್ರಿಗಳ ಪಟ್ಟಿಗೆ ಅವರ ಹೆಸರೂ ಸೇರ್ಪಡೆಗೊಂಡಿದೆ. ಇಂದಿರಾ ಗಾಂಧಿ ಹತ್ಯೆ ನಂತರ 1985ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು, ನಿತೀಶ್ ಕುಮಾರ್ ಮೊದಲ ಬಾರಿಗೆ ಬಿಹಾರ ವಿಧಾನ ಸಭೆ ಪ್ರವೇಶಿಸಿದ್ದರು. ಕಳೆದ 19 ವರ್ಷಗಳಿಂದ ಅವರು ಮುಖ್ಯಮಂತ್ರಿ ಗದ್ದುಗೆ ಉಳಿಸಿಕೊಂಡಿದ್ದಾರೆ.



ಪ್ರಮಾಣ ವಚನ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಬಿಹಾರ ವಿಧಾನಸಭಾ ಚುನಾವಣೆಯ ಉಸ್ತುವಾರಿಯಾಗಿದ್ದ ಧರ್ಮೇಂದ್ರ ಪ್ರಧಾನ್ ಸೇರಿ ಎನ್‌ಡಿಎ ಮೈತ್ರಿಕೂಟದ ಪ್ರಮುಖ ನಾಯಕರು ಮತ್ತು ಎನ್‌ಡಿಎ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು.

> **ಸಾರ್ವಜನಿಕ ಸೇವೆಗೆ ಮುಡಿಪಾಗಿರುವ ಅತ್ಯುತ್ಕೃಷ್ಟ ನಾಯಕರನ್ನು ಹೊಂದಿರುವ ನಿತೀಶ್ ನೇತೃತ್ವದ ತಂಡವು ಬಿಹಾರವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ.**
> **-ನರೇಂದ್ರ ಮೋದಿ, ಪ್ರಧಾನ ಮಂತ್ರಿ**

**ಪ್ರಮಾಣ ವಚನ ಸ್ವೀಕರಿಸಿದ ಪ್ರಮುಖರು**

ಬಿಜೆಪಿಯ ಶಾಸಕಾಂಗ ಪಕ್ಷದ ನಾಯಕ ಸಾಮ್ರಾಟ್ ಚೌಧರಿ ಹಾಗು ಉಪ ನಾಯಕ ವಿಜಯ್ ಸಿನ್ಹಾ ಕೂಡ ನಿತೀಶ್ ಅವರೊಂದಿಗೆ ಪ್ರಮಾಣ ವಚನ ಸ್ವೀಕರಿಸಿದರು. ಈ ಇಬ್ಬರೂ ನಾಯಕರು ಹಿಂದಿನ ಎನ್‌ಡಿಎ ಸರ್ಕಾರದಲ್ಲಿ ಉಪ ಮುಖ್ಯ ಮಂತ್ರಿ ಗಳಾಗಿದ್ದರು. ಜೆಡಿ(ಯು) ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಶೋಕ್ ಚೌಧರಿ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ದಿಲೀಪ್ ಜೈಸ್ವಾಲ್, ಎಚ್‌ಎಎಂನ ಸಂತೋಷ್ ಕುಮಾರ್ ಸುಮನ್ ಕೂಡ ಸಂಪುಟಕ್ಕೆ ಸೇರ್ಪಡೆಯಾಗಿದ್ದಾರೆ.

ಇತ್ತೀಚೆಗೆ ನಡೆದ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ 243 ಸ್ಥಾನಗಳಲ್ಲಿ, 202 ಸ್ಥಾನಗಳನ್ನು ಗೆಲ್ಲುವ ಮೂಲಕ ಎನ್‌ಡಿಎ ಅಧಿಕಾರಕ್ಕೆ ಮರಳಿತ್ತು. ಬಿಜೆಪಿ 89, ಜೆಡಿ(ಯು) 85, ಎಲ್‌ಜೆಪಿ (ಆರ್‌ವಿ) 19, ಎಚ್‌ಎಎಂ 5 ಮತ್ತು ಆರ್‌ಎಲ್‌ಎಂ 4 ಸ್ಥಾನಗಳಲ್ಲಿ ಗೆಲುವು ಗಳಿಸಿವೆ.

**ಎಂಎಲ್‌ಎ-ಎಂಎಲ್‌ಸಿ ಅಲ್ಲದ ಪ್ರಕಾಶ್ ಸಂಪುಟಕ್ಕೆ**

ಶಾಸಕ ಅಥವಾ ವಿಧಾನ ಪರಿಷತ್‌ನ ಸದಸ್ಯರೂ ಅಲ್ಲದ ದೀಪಕ್ ಪ್ರಕಾಶ್ ಅವರು ನಿತೀಶ್ ಸಂಪುಟದಲ್ಲಿ ಸ್ಥಾನ ಪಡೆದಿರುವುದು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ದೀಪಕ್ ರಾಷ್ಟ್ರೀಯ ಲೋಕ ಮೋರ್ಚಾದ (ಆರ್‌ಎಲ್‌ಎಂ) ಮುಖ್ಯಸ್ಥ ಉಪೇಂದ್ರ ಕುಶ್ವಾಹ ಅವರ ಪುತ್ರ. ರಾಜ್ಯ ರಾಜಕಾರಣದಲ್ಲಿ ಅಪರಿಚಿತರಾಗಿದ್ದ ದೀಪಕ್ ಹೆಸರು ಇದೇ ಮೊದಲ ಬಾರಿಗೆ ಮುನ್ನೆಲೆಗೆ ಬಂದಿದೆ. ವಿದೇಶದಲ್ಲಿ ಶಿಕ್ಷಣ ಪಡೆಯುತ್ತಿದ್ದ ಅವರು ಇತ್ತೀಚೆಗೆ ಭಾರತಕ್ಕೆ ಮರಳಿದ್ದಾರೆ. ಸಂಪುಟಕ್ಕೆ ಸೇರ್ಪಡೆಯಾದ 6 ತಿಂಗಳ ಒಳಗಾಗಿ ಅವರು ರಾಜ್ಯ ವಿಧಾನ ಮಂಡಲದ ಎರಡೂ ಸದನಗಳ ಪೈಕಿ ಒಂದರ ಸದಸ್ಯರಾಗ ಬೇಕಾಗುತ್ತದೆ.

ಸಸಾರಾಂ ಕ್ಷೇತ್ರದಿಂದ ಗೆದ್ದಿರುವ ಆರ್‌ಎಲ್‌ಎಂ ಪಕ್ಷದ ಸ್ನೇಹಲತಾ ಕುಶ್ವಾಹ ಅವರಿಗೂ ಸಂಪುಟದಲ್ಲಿ ಸ್ಥಾನ ಸಿಗುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ.

## ಸಿದ್ದರಾಮಯ್ಯ ಕೆಳಗಿಳಿಸಲು ಕಾಂಗ್ರೆಸ್ ಶಾಸಕರಿಂದಲೇ ಪ್ರಯತ್ನ

• ಪ್ರಜೋದಯ ವರದಿ

**ಹಳೇಬೀಡು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕುರ್ಚಿಯಿಂದ ಕೆಳಗಿಳಿಸಲು ಕಾಂಗ್ರೆಸ್ ಶಾಸಕರೇ ಪ್ರಯತ್ನಿಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಹೇಳಿದರು.

ಪುಷ್ಪಗಿರಿಯಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರದ ಒಳಗಿನ ಅಧಿಕಾರ ಪೈಪೋಟಿ ಮತ್ತು ಸಿಎಂ ಕುರ್ಚಿಗಾಗಿ ನಡೆಯುತ್ತಿರುವ ರಾಜಕೀಯ ಬಿಕ್ಕಟ್ಟಿನಿಂದ ಅಭಿವೃದ್ಧಿ ನೇಪಥ್ಯಕ್ಕೆ ಸರಿದಿದೆ. ಕಳೆದ ಎರಡೂವರೆ ವರ್ಷಗಳಿಂದ ಅಭಿವೃದ್ಧಿಗೆ ಯಾವುದೇ ರೀತಿಯ ಅನುದಾನ ನೀಡಿಲ್ಲ. ಸರ್ಕಾರ ಯಾವ ದಿಕ್ಕಿಗೆ ಸಾಗುತ್ತಿದೆ ಎನ್ನುವುದು ಸ್ಪಷ್ಟವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರದ ಒಳಗೆ ಅಸಮಾಧಾನ ಕುದಿಯುತ್ತಿದೆ. ಕೆಲವರು ಬಹಿರಂಗವಾಗಿಯೇ ಸಿದ್ದ ರಾಮಯ್ಯ ಅವರನ್ನು ಕೆಳಗಿಳಿಸಲು ಪ್ರಯತ್ನಿಸುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲು ನಡೆಯುತ್ತಿರುವ ಹೋರಾಟ ಎಲ್ಲರಿಗೂ ಗೋಚರವಾಗಿದೆ ಎಂದು ಕಿಡಿಕಾರಿದರು.

**ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ**

ರಾಜ್ಯದ ರೈತರ ಪರಿಸ್ಥಿತಿ ದಿನೇದಿನೇ ಹದಗೆಡುತ್ತಿದೆ. ಕಬ್ಬು ಬೆಳೆಗಾರರು ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ. ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಸರ್ಕಾರ ತೆರೆಯುತ್ತಿಲ್ಲ. ಈ ಸರ್ಕಾರಕ್ಕೆ ರೈತರ ಪ್ರಶ್ನೆಗಳ ಬಗ್ಗೆ ಅಲರ್ಜಿ ಇದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ಯಾವ ಕೊಲೆಗಡುಕರಿಗೂ, ದೇಶದ್ರೋಹಿ ಭಯೋತ್ಪಾದಕರಿಗೂ ಭಯವಿಲ್ಲದ ಸ್ಥಿತಿ ಬಂದಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಡೆದ ಘಟನೆಗಳು ಗೃಹಸಚಿವರ ನಿಷ್ಕ್ರಿಯತೆಯ ಪ್ರತೀಕ ಎಂದು ಟೀಕಿಸಿದರು.

ಕಬ್ಬು ಬೆಳೆಗಾರರ ವಿಚಾರದಲ್ಲಿ ನಾವು ಹೋರಾಟ ಆರಂಭಿಸಿದಾಗಲೇ ಮುಖ್ಯಮಂತ್ರಿ ಕುಂಭಕರ್ಣ ನಿದ್ದೆಯಿಂದ ಎದ್ದರು. ವಾಲ್ಮೀಕಿ ಹಾಗೂ ಮುಡಾ ಹಗರಣಗಳ ವಿರುದ್ಧವೂ ಬಿಜೆಪಿ ಹೋರಾಟ ನಡೆಸಿದೆ. ಮುಂದಿನ ದಿನಗಳಲ್ಲಿ ರೈತರ ಪರವಾಗಿ ಎಲ್ಲಾ ಕ್ಷೇತ್ರಗಳಲ್ಲಿ ಹೋರಾಟ ತೀವ್ರಗೊಳಿಸುತ್ತೇವೆ ಎಂದು ಹೇಳಿದರು.



> **ಪಕ್ಷದ ಹಿರಿಯರಿಗೂ, ಕಾರ್ಯಕರ್ತರಿಗೂ ನನ್ನ ಕೆಲಸದ ಬಗ್ಗೆ ತೃಪ್ತಿ ಇದೆ. ಎಲ್ಲರಿಂದಲೂ ನನ್ನ ಬಗ್ಗೆ ಒಳ್ಳೆಯ ಅಭಿಪ್ರಾಯವಿದೆ. ರಾಜ್ಯಾಧ್ಯಕ್ಷನಾಗಿ ನನ್ನನ್ನೇ ಮುಂದುವರಿಸುತ್ತಾರೆಂಬ ವಿಶ್ವಾಸವಿದೆ. ಬಿಹಾರ ಚುನಾವಣಾ ಫಲಿತಾಂಶದಿಂದ ನಮ್ಮ ರಾಜ್ಯದ ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಸೃಷ್ಟಿಯಾಗಿದೆ. ರಾಜ್ಯದಲ್ಲಿ ಯಾವಾಗ ಚುನಾವಣೆ ನಡೆದರೂ ಬಿಜೆಪಿಗೆ ಪೂರಕ ವಾತಾವರಣವಿದೆ.**
> **-ಬಿ.ವೈ.ವಿಜಯೇಂದ್ರ,** ಬಿಜೆಪಿ ರಾಜ್ಯಾಧ್ಯಕ್ಷ

## ಅರೆನಗ್ನ ಸ್ಥಿತಿಯಲ್ಲಿ ಮಹಿಳೆ ಉಸಿರುಗಟ್ಟಿಸಿ ಕೊಲೆ

» ಮೊದಲನೇ ಪುಟದಿಂದ

ನಿಮ್ಮ ಮನೆಯ ಮುಂಬಾಗಿಲು ಬೆಳಿಗ್ಗೆಯಿಂದಲೂ ಅರ್ಧ ತೆರೆದಿದೆ ಎಂದು ತಿಳಿಸಿದರು.

ಕೂಡಲೇ ಮಲ್ಲಿಕಾರ್ಜುನ ಮನೆಯ ಹತ್ತಿರ ಬಂದು ಅಕ್ಕಪಕ್ಕದ ಮನೆಯವರನ್ನು ಕರೆಸಿ ಬಾಗಿಲು ತಳ್ಳಿ ನೋಡಿದಾಗ ಮುಂಭಾಗದ ಹಾಲ್‌ನಲ್ಲಿ ಸ್ಪಂದನಾ ಅರೆನಗ್ನ ಸ್ಥಿತಿಯಲ್ಲಿ ಅರ್ಧ ಬೆಡ್ ಶೀಟ್ ಮುಚ್ಚಿದಂತೆ ಮಲಗಿದ್ದರು. ಕಣ್ಣು ಹಾಗು ಬಾಯಿ ಮೇಲೆ ಇರುವೆ ಮುತ್ತಿಕೊಂಡಿದ್ದರಿಂದ ಮೃತಪಟ್ಟಿರುವುದು ಖಾತ್ರಿಯಾಗಿತ್ತು. ಈ ನಡುವೆ ದೇಹದ ಕೆಲವು ಭಾಗಗಳಲ್ಲಿ ಕೆಂಪಾಗಿ ಕಂದಿದಂತೆ ಕಂಡು ಬಂದಿದ್ದು, ಪಕ್ಕದಲ್ಲಿಯೇ ದಿಂಬು ಬಿದ್ದಿತ್ತು. ಯಾರೋ ಆಕೆಗೆ ಪರಿಚಿತರು ಮನೆಗೆ ಬಂದು ಮುಖಕ್ಕೆ ದಿಂಬು ಹಾಕಿ ಉಸಿರುಗಟ್ಟಿಸಿ ಕೊಲೆ ಮಾಡಿ ಪರಾರಿಯಾಗಿದ್ದಾರೆ.

ಮಾಹಿತಿ ತಿಳಿದ ಕೂಡಲೇ ಸಿಪಿಐ ರೇವಣ್ಣ ಹಾಗು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಶ್ವಾನ ದಳವನ್ನು ಕರೆಸಲಾಗಿತ್ತು. ವಿಧಿವಿಜ್ಞಾನ ಪ್ರಯೋಗಾಲಯದ ತಾಂತ್ರಿಕ ವರ್ಗದವರು ಆಗಮಿಸಿ ಸಾಕ್ಷಿ ಕಲೆ ಹಾಕಿದರು. ಮೇಲ್ನೋಟಕ್ಕೆ ಅತ್ಯಾಚಾರದ ನಂತರ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ತನಿಖೆ ಕೈಗೆತ್ತಿಕೊಂಡಿದ್ದಾರೆ.

**ಆಸ್ಪತ್ರೆ ಸಿಬ್ಬಂದಿ ಎಂದು ಸುಳ್ಳು ಹೇಳಿಕೆ**

ಮನೆ ಬಾಡಿಗೆ ಕೇಳಲು ಬಂದಿದ್ದ ಸ್ಪಂದನಾ ತಾನು ಸರ್ಕಾರಿ ಆಸ್ಪತ್ರೆ ಉದ್ಯೋಗಿಯಾಗಿದ್ದು, ಹೊಸ ನಗರದಿಂದ ಆಸ್ಪತ್ರೆಗೆ ಬರಲು ತಡವಾಗುತ್ತಿದೆ. ಹತ್ತಿರವಾಗಲಿ ಎಂಬ ಕಾರಣಕ್ಕೆ ಇಲ್ಲಿ ಮನೆ ಹುಡುಕುತ್ತಿದ್ದೆ ಎಂದು ಸುಳ್ಳು ಹೇಳಿದ್ದರು. ಎರಡ್ಮೂರು ದಿನಗಳಲ್ಲಿ ಬಾವ ಹಾಗು ಅಕ್ಕ ಬಂದು ಉಳಿದ ಮುಂಗಡ ಹಣ ಕೊಡುತ್ತಾರೆಂದು ನಂಬಿಸಿದ್ದರು. ಅದನ್ನು ನಂಬಿದ್ದ ಮಲ್ಲಿಕಾರ್ಜುನ ಅವರು ಮೂರು ಸಾವಿರ ರೂ. ಪಡೆದು ಮನೆ ಕೊಟ್ಟಿದ್ದರು.

ಸ್ಪಂದನಾ ನಿಧನ ಸುದ್ದಿ ತಿಳಿದು ಸಂಬಂಧಿಕರನ್ನು ಪೊಲೀಸರು ಸಂಪರ್ಕಿಸಿದರು. ಸ್ಪಂದನಾಗೆ ಈ ಮೊದಲೇ ಮದುವೆಯಾಗಿದ್ದು, ಅನಾರೋಗ್ಯದಿಂದ ಗಂಡ ನಿಧನರಾದ ಬಳಿಕ ಎಲ್ಲರ ಸಂಪರ್ಕ ಕಡಿತಗೊಳಿಸಿ ಬೇಲೂರಿನಲ್ಲಿ ನೆಲೆಸಿದ್ದಳು. ಹೊಸ ನಗರದಲ್ಲೂ ಅಪರಿಚಿತ ವ್ಯಕ್ತಿ ಯಾವಾಗಲೂ ಬರುತ್ತಿದ್ದ. ಸ್ಪಂದನಾ ತವರು ಕಡೆಯವರು ಯಾರೂ ಬಾರದ ಹಿನ್ನಲೆ ಹಾಗು ಗಂಡನ ಮನೆಯವರು ಶವ ಪಡೆಯಲು ನಿರಾಕರಿಸಿದ್ದರಿಂದ ಪೊಲೀಸರೇ ಅಂತ್ಯಕ್ರಿಯೆ ನೆರವೇರಿಸಿದ್ದಾರೆಂದು ಮಲ್ಲಿಕಾರ್ಜುನ ಅವರು ಹೇಳಿದ್ದಾರೆ. ಸ್ಪಂದನಾಗೆ ಪರಿಚಯವಿದ್ದ ವ್ಯಕ್ತಿಯೇ ಕೃತ್ಯ ಎಸಗಿದ್ದಾನೆ ಎನ್ನಲಾಗಿದೆ.

## ಹಾಲು ಶೇಖರಣೆಗೆ ಮೇಘಾ ಡೈರಿ ಸ್ಥಾಪನೆ

• ಪ್ರಜೋದಯ ವರದಿ

**ಅರಕಲಗೂಡು:** ಹಾಸನ ಹಾಲು ಒಕ್ಕೂಟಕ್ಕೆ ಬರುತ್ತಿರುವ ಹೆಚ್ಚಿನ ಹಾಲನ್ನು ಬಳಸಿಕೊಳ್ಳಲು ಮೇಘಾ ಡೈರಿ ಸ್ಥಾಪನೆ ಮಾಡಲಾಗುತ್ತಿದೆ ಎಂದು ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ನಿರ್ದೇಶಕ ಕೆ.ಸತೀಶ್ ಅವರು ತಿಳಿಸಿದರು.



ಪಟ್ಟಣದ ಶಿಕ್ಷಕರ ಭವನದಲ್ಲಿ ಗುರುವಾರ ನಡೆದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒಕ್ಕೂಟಕ್ಕೆ ಪ್ರತಿ ದಿನ 14.60 ಲಕ್ಷ ಲೀ ಹಾಲು ಬರುತ್ತಿದ್ದು, ಮೂರರಿಂದ ನಾಲ್ಕು ಲಕ್ಷ ಲೀ ಮಾತ್ರ ಮಾರಾಟವಾಗುತ್ತಿದೆ. ಉಳಿದ ಹಾಲಿನಿಂದ ಹಾಲಿನ ಪುಡಿ ಮತ್ತು ಸಿಹಿ ಖಾದ್ಯಗಳ ತಯಾರಿಕೆ ನಡೆದಿದೆ. ಹೆಚ್ಚಿನ ಹಾಲನ್ನು ಮಹಾ ನಗರಗಳಲ್ಲಿ ಮತ್ತು ಹೊರದೇಶಗಳಿಗೆ ರಫ್ತು ಮಾಡುವ ಉದ್ದೇಶದಿಂದ ಹಾಸನದ ಸಮೀಪ ಕೌಶಿಕದ ಕೈಗಾರಿಕಾ ಪ್ರದೇಶದಲ್ಲಿ 810 ಕೋಟಿ ರೂ. ವೆಚ್ಚದಲ್ಲಿ ಮೇಘಾ ಡೈರಿ ನಿರ್ಮಾಣ ಕಾರ್ಯ ನಡೆದಿದ್ದು ಇದು ಜನವರಿ ಇಲ್ಲವೆ ಫೆಬ್ರವರಿ ತಿಂಗಳಲ್ಲಿ ಕಾರ್ಯಾರಂಭ ಮಾಡಲಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಉದ್ಘಾಟಿಸಲು ಸಿದ್ದತೆಗಳು ನಡೆದಿದೆ ಎಂದರು.

ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಸ್.ಎನ್.ಪ್ರಕಾಶ್ ಅವರು ಮಾತನಾಡಿ, 1905ರಲ್ಲಿ ರಾಜ್ಯದ ಗದಗ ಜಿಲ್ಲೆಯಲ್ಲಿ ಜನ್ಮ ತಾಳಿದ ಸಹಕಾರ ಕ್ಷೇತ್ರ ವಿಶ್ವದಾದ್ಯಂತ ಪಸರಿಸಿದ್ದು, 130 ರಾಷ್ಟ್ರಗಳು ಅದನ್ನು ಅಳವಡಿಸಿಕೊಂಡಿವೆ. ಜಿಲ್ಲೆಯಲ್ಲಿ ಹಾಲು ಒಕ್ಕೂಟ, ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆ ಹಾಗೂ ಜಿಲ್ಲಾ ಸಹಕಾರ ಬ್ಯಾಂಕ್ ಸಹಕಾರ ಕ್ಷೇತ್ರದ ಭದ್ರ ಬುನಾದಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದರು.

ನಬಾರ್ಡ್ ಜಿಲ್ಲಾ ವ್ಯವಸ್ಥಾಪಕಿ ರೇಣುಕಾ ಶಿವಕುಮಾರ್ ಕೇಂದ್ರ ಸರ್ಕಾರದ ಹಲವು ಯೋಜನೆಗಳ ಕುರಿತು ಮಾಹಿತಿ ನೀಡಿದರು. ಸಿದ್ದಾಪುರ ಗೇಟ್ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಟಿ.ಪದ್ಮ ಸಹಕಾರ ಸಪ್ತಾಹದ ಮಹತ್ವ ಕುರಿತು ಉಪನ್ಯಾಸ ನೀಡಿದರು. ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆ ನಿರ್ದೇಶಕ ಮುತ್ತಿಗೆ ರಾಜೇಗೌಡ, ಕಾವೇರಿ ನೀರಾವರಿ ಮಹಾಮಂಡಳದ ಅಧ್ಯಕ್ಷ ಎಸ್.ಸಿ. ಚೌಡೇಗೌಡ ಮಾತನಾಡಿದರು. ತಾಲ್ಲೂಕಿನಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ಸಹಕಾರ ಸಂಘಗಳ ಅಧ್ಯಕ್ಷರು,ಕಾರ್ಯದರ್ಶಿಗಳು ಹಾಗೂ ಹಿರಿಯ ಸಹಕಾರಿಗಳನ್ನು ಗೌರವಿಸಲಾಯಿತು. ಜಿಲ್ಲಾ ಸಹಕಾರ ಒಕ್ಕೂಟದ ಉಪಾಧ್ಯಕ್ಷ ಡಿ.ಪಿ.ಸೋಮೇಗೌಡ, ನಿರ್ದೇಶಕರಾದ ಎ.ಎನ್.ರಾಜಣ್ಣ, ಪುಟ್ಟಸ್ವಾಮಿಗೌಡ, ನಾಗರಾಜ್, ಕೆ. ಆರ್.ಪ್ರವೀಣ್, ಸೋಮಣ್ಣ, ಜಿ. ಎಚ್.ಸಿದ್ದೇಶ್, ಎಚ್.ಸಿ.ಗಿರೀಶ್, ಕೆ.ಎನ್.ಪದ್ಮರಾಜ್, ಹೆಚ್.ಜೆ. ಗಣೇಶ್ ಉಪಸ್ಥಿತರಿದ್ದರು.

### ಬಸವೇಶ್ವರ ದೇವಾಲಯದಲ್ಲಿ ಕಾರ್ತಿಕ ಪೂಜೆ

• ಪ್ರಜೋದಯ ವರದಿ

**ಹಾಸನ:** ನಗರದ ಬಸವೇಶ್ವರ ದೇವಾ ಲಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ ನೆರವೇರಿತು.

ಜಿಲ್ಲಾ ವೀರಶೈವ ಲಿಂಗಾಯತ ಸಂಘದ ಅಧ್ಯಕ್ಷ ಬಿ.ಪಿ. ಐಸಾಮಿಗೌಡ ಅವರು ಮಾತನಾಡಿ, ವೀರಶೈವ ಲಿಂಗಾಯತ ಸಂಘದ ವತಿಯಿಂದ ಕಾರ್ತಿಕ ಮಾಸದ ವಿಶೇಷ ಪೂಜೆ ನೆರವೇರಿಸ ಲಾಗಿದೆ. ಅಪಾರ ಸಂಖ್ಯೆ ಯಲ್ಲಿ ಭಕ್ತರು ಆಗಮಿಸಿ ದೇವರ ಕೃಪೆಗೆ ಪಾತ್ರರಾಗಿದ್ದಾರೆಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಈ.ಎಂ. ರುದ್ರಕುಮಾರ್, ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾ ಯತ ಮಹಾಸಭಾದ ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಸಂಘದ ಉಪಾಧ್ಯಕ್ಷ ಕಿರಣ್ ಕುಮಾರ್ ಹೊಸಮನಿ, ಸಹ ಕಾರ್ಯದರ್ಶಿ ಎಚ್.ಮಲ್ಲಿಕಾರ್ಜುನ್, ಜಂಟಿ ಕಾರ್ಯ ದರ್ಶಿ ಬಿ.ವಿ.ಲತೇಶ್, ನಿರ್ದೇಶಕ ರಾದ ಶೋಭನ್ ಬಾಬು ಮತ್ತು ಬಾಳ್ಳು ನಾಗೇಶ್, ಆಲೂರು ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಚಿಕ್ಕಕಣಗಾಲು ಅಜಿತ್, ಮಯೂರಿ ಲೋಕೇಶ್, ಸಾವಿತ್ರಿ ವಿಜಯಕುಮಾರ್, ಶೋಭಾ ಮಹೇಶ್ ಇತರರಿದ್ದರು.

ದೇವಾಲಯವನ್ನು ಹೂವು ಹಾಗು ವಿದ್ಯುತ್ ದೀಪಗಳಿಂದ ಅಲಂಕರಿಸಲಾ ಗಿತ್ತು. ಶ್ರೀ ಬಸವಣ್ಣ ದೇವರಿಗೆ ವಿಶೇಷ ಪೂಜೆ, ಮಂಗಳಾರತಿ ನೆರ ವೇರಿಸಲಾಯಿತು. ನಂತರ ಭಕ್ತರಿಗಾಗಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.



## ದೃಢ ನಿರ್ಧಾರದಿಂದ ಮಹತ್ತರ ಸಾಧನೆ ಸಾಧ್ಯ: ಎಂ.ಸಿ.ರಂಗಸ್ವಾಮಿ

» ಮೊದಲನೇ ಪುಟದಿಂದ

ರೈತರು ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕೆಂದು ಕರೆ ನೀಡಿದರು. ಯುವ ಪೀಳಿಗೆ ಕೃಷಿಯನ್ನು ನಂಬಿ ವ್ಯವಸಾಯ ಮಾಡಿ ಯಾವ ಕಾರಣಕ್ಕೂ ಭೂಮಿ ಬಿಟ್ಟು ಹೋಗಬೇಡಿ. ಭೂಮಿಗೆ ಚಿನ್ನದಂತಹ ಬೆಲೆ ಇದೆ. ಮುಂದೆ ರೈತರಿಗೆ ಬೇಡಿಕೆ ಹೆಚ್ಚಾಗಲಿದೆಯೆಂದರು.

ಪ್ರಾಧ್ಯಾಪಕ ಹೆಚ್.ಕೆ.ವೆಂಕಟೇಶ್ ಅವರು ಮಾತನಾಡಿ, ಕನ್ನಡ ರಾಜ್ಯೋತ್ಸವ ಕೇವಲ ನವೆಂಬರ್ ತಿಂಗಳಿಗೆ ಸೀಮಿತವಾಗದೆ ವರ್ಷದ ಎಲ್ಲಾ ದಿನಗಳು ಜಾರಿಯಲ್ಲಿರಬೇಕು. ನಿತ್ಯ ಜೀವನದಲ್ಲಿ ಕನ್ನಡ ಬಳಕೆ ಹೆಚ್ಚಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಕೆ.ಜಿ.ಕವಿತ ಅವರು ಮಾತನಾಡಿ, ರಾಜಧಾನಿಯಲ್ಲಿ ಕನ್ನಡಿಗರಿಗಿಂತ ಕನ್ನಡೇತರರ ಸಂಖ್ಯೆ ಹೆಚ್ಚಾಗುತ್ತಿರುವುದು ಬೇಸರದ ಸಂಗತಿಯಾಗಿದೆ. ನಾವು ಬೇರೆಯವರಿಗೆ ಕನ್ನಡವನ್ನು ಕಲಿಸಬೇಕು ಮತ್ತು ಕನ್ನಡವನ್ನು ಬಳಸಬೇಕೆಂದು ಹೇಳಿದರು.

ಕರ್ನಾಟಕದಲ್ಲಿ ಇರುವವರೆಲ್ಲರೂ ಕನ್ನಡವನ್ನು ಪ್ರತಿನಿತ್ಯ ಬಳಸಿದರೆ ಭಾಷೆ ಬೆಳೆಯಲಿದೆ. ಬೇರೆ ಭಾಷಿಕರನ್ನು ಅವರ ಭಾಷೆಯಲ್ಲಿ ಮಾತನಾಡಿಸದೆ ಕನ್ನಡದಲ್ಲೇ ಮಾತನಾಡಿಸುವ ಮೂಲಕ ನಮ್ಮ ಮಾತೃ ಭಾಷೆಯನ್ನು ಉಳಿಸಬೇಕು. ಅಲ್ಪ ಪ್ರಾಣ, ಮಹಾಪ್ರಾಣ, ವ್ಯಾಕರಣದೊಂದಿಗೆ ಕನ್ನಡವನ್ನು ಎಲ್ಲರೂ ಕಲಿಯಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಐಕ್ಯೂಎಸಿ ಸಂಚಾಲಕ ಯೋಗೇಶ್, ಕಾಲೇಜಿನ ವ್ಯವಸ್ಥಾಪಕ ಹರ್ಷ ಹಾಗು ಅಧ್ಯಾಪಕರು ಭಾಗವಹಿಸಿದ್ದರು. ಸಂಸ್ಕೃತಿಕ ವೇದಿಕೆ ಸಂಚಾಲಕ ಪುರುಷೋತ್ತಮ್ ಸ್ವಾಗತಿಸಿದರು. ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ರತ್ನ ನಿರೂಪಿಸಿದರು.

## ತಾಲ್ಲೂಕು ಗ್ರಂಥಾಲಯಕ್ಕೆ ಹೆಚ್ಚಿನ ಅನುದಾನ: ಬಾಲಕೃಷ್ಣ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕು ಗ್ರಂಥಾಲಯಕ್ಕೆ ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನ ನೀಡಲಾಗುವುದೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.



ಪಟ್ಟಣದ ಸಾರ್ವಜನಿಕ ಗ್ರಂಥಾಲಯದಲ್ಲಿ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಪುಸ್ತಕ ಓದು ಹವ್ಯಾಸ ಉಳ್ಳವರು ಎಲ್ಲೇ ಹೋದರೂ ಸಂತೋಷವಾಗಿರುತ್ತಾನೆ, ಓದಿನಿಂದ ನಿಮ್ಮ ಗುರಿಯನ್ನು ಸಾಧಿಸಬಹುದು ಎಂದರು.

ಮಾನಸಿಕ ಸಮತೋಲನೆಯನ್ನು ಇಟ್ಟುಕೊಳ್ಳಲು ಓದಿನಿಂದ ಮಾತ್ರ ಸಾಧ್ಯ. ಪಟ್ಟಣದಲ್ಲಿರುವ ಗ್ರಂಥಾಲಯವು ಸುಸಜ್ಜಿತವಾಗಿದ್ದು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಸಹಕಾರಿಯಾಗಿದೆ. ಇಲ್ಲಿ ಓದಿದ ಎಷ್ಟೋ ಜನ ಸರ್ಕಾರಿ ಕೆಲಸಗಳನ್ನು ಪಡೆದುಕೊಂಡಿದ್ದು ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಉತ್ತಮ ಮಾರ್ಗವಾಗಿದೆ ಎಂದು ತಿಳಿಸಿದರು.

ಪುಸ್ತಕವನ್ನು ಸ್ನೇಹಿತರನ್ನಾಗಿ ನೋಡಿ ದೇವಸ್ಥಾನ ಎಷ್ಟು ಮುಖ್ಯವೋ ಗ್ರಂಥಾಲಯ ಕೂಡ ಅಷ್ಟೇ ಮುಖ್ಯವಾಗಿದೆ. ತಾಲ್ಲೂಕಿನ ಹಲವು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡಿಜಿಟಲ್ ಗ್ರಂಥಾಲಯದ ಅನುಕೂಲತೆ ಇದ್ದು, ಗ್ರಾಮೀಣ ಪ್ರದೇಶದಲ್ಲೂ ಓದುವ ಹವ್ಯಾಸ ವನ್ನು ಬಲಪಡಿಸಿದಂತಾಗಿದೆ ಎಂದರು.

ಡಿವೈಎಸ್‌ಪಿ ಕುಮಾರ್ ಮಾತನಾಡಿ, ವಿದ್ಯಾರ್ಥಿ ಜೀವನ ಗೋಲ್ಡ್ ಲೈಫ್ ನಿಜ, ಆದರೆ ಇಂದಿನ ವಿದ್ಯಾರ್ಥಿಗಳು ಮೊಬೈಲ್ ಮತ್ತು ಟಿವಿ, ಸೀರಿಯಲ್‌ಗೆ ಮಾರು ಹೋಗಿ ಭವಿಷ್ಯವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಮೊಬೈಲ್ ಹೆಚ್ಚು ನೋಡಿದರೆ ಕಣ್ಣಿನಲ್ಲಿ ನೀರು ಬರುತ್ತದೆ, ಜ್ಞಾಪಕಾ ಶಕ್ತಿ ಕಡಿಮೆಯಾಗುತ್ತದೆ ಎಂದರು.

ಇಂದಿನ ಅಧ್ಯಯನ ತಜ್ಞರು ತಿಳಿಸುತ್ತಿದ್ದಾರೆ. ಸಮಾಜದ ಆಸ್ತಿ ಮತ್ತು ಶಕ್ತಿಯಂತವ ರಾಗಬೇಕಾದರೆ ಪುಸ್ತಕದ ಅಧ್ಯಯನ ಹೆಚ್ಚು ಬೇಕು. ತಾವು ಶ್ರೀರಂಗಪಟ್ಟಣದಲ್ಲಿ ಗ್ರಂಥಾಲಯದ ಬಳಕೆಯನ್ನು ಮಾಡಿಕೊಂಡಿದ್ದು ನನ್ನ ಜೀವನಕ್ಕೆ ತುಂಬಾ ಉಪಯೋಗವಾಯಿತು. ವಿಜ್ಞಾನ ಮತ್ತು ಗಣಿತ ನನ್ನ ನೆಚ್ಚಿನ ವಿಷಯವಾಗಿದ್ದು ಚಿನ್ನದ ಪದಕವನ್ನು ಸಹ ಪಡೆದಿದ್ದು ಇಂದು ಸಹ ಹಲವು ಪುಸ್ತಕಗಳನ್ನು ಸಂಗ್ರಹಿಸಿದ್ದೇನೆಂದು ತಿಳಿಸಿದರು.

ಸಾಹಿತಿ ಜಯಂತಿ ಚಂದ್ರಶೇಖರ್ ರವರ ಸಕ್ಕರೆ ಬಟ್ಟಲು ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ವಿವಿಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ವಸುಮತಿ ಜೈನ್, ಗ್ರಂಥ ಪಾಲಕ ದೇವರಾಜ್, ಕನ್ನಡವಾಸು, ಮಹೇಶ್, ರೇವಣ್ಣ, ವಿಜಯ ಕುಮಾರ್ ಮತ್ತಿತರಿದ್ದರು.

## ನ.23 ರಂದು ಅಸ್ಮಿತಾ ಅಥ್ಲೆಟಿಕ್ಸ್ ಕ್ರೀಡಾಕೂಟ

• ಪ್ರಜೋದಯ ವರದಿ

**ಹಾಸನ:** ಕ್ರೀಡಾ ಕ್ಷೇತ್ರಕ್ಕೆ ಹೊಸ ಪ್ರತಿಭೆಗಳ ಅನ್ವೇಷಣೆಗೆ ಬಾಲಕಿಯರಿಗಾಗಿ ನ.23 ರಂದು ಜಿಲ್ಲಾ ಸಿಂಥಟಿಕ್ ಕ್ರೀಡಾಂಗಣದಲ್ಲಿ ಅಸ್ಮಿತಾ ಅಥ್ಲೆಟಿಕ್ಸ್ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆ ಜಂಟಿ ಕಾರ್ಯದರ್ಶಿ ಎಸ್.ಎಲ್.ಪ್ರಸನ್ನ ಕುಮಾರ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 12 ರಿಂದ 14 ವರ್ಷ ಹಾಗು 14 ರಿಂದ 16 ವರ್ಷದ ಹೆಣ್ಣು ಮಕ್ಕಳಿಗೆ ಮಾತ್ರ ಸ್ಪರ್ಧೆ ನಡೆಯಲಿದೆ. ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಕಾರ್ಯಕ್ರಮದಡಿ, ಸ್ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾ(ಸಾಯಿ), ಯುವ ಜನ ಮತ್ತು ಕ್ರೀಡಾ ಸಚಿವಾಲಯ ಹಾಗೂ ಇಂಡಿಯನ್ ಅಥ್ಲೆಟಿಕ್ ಫೆಡರೇಶನ್ ಸಂಯುಕ್ತವಾಗಿ ದೇಶಾದ್ಯಂತ ಸ್ಪರ್ಧೆ ಆಯೋಜನೆ ಮಾಡಲಾಗುತ್ತಿದೆ ಎಂದರು.

ಗ್ರಾಮೀಣ ಹೆಣ್ಣು ಮಕ್ಕಳಿಗೆ ಉತ್ತೇಜನ, ಅವರ ಭಾಗಹಿಸುವಿಕೆ ಹೆಚ್ಚು ಮಾಡುವ ಉದ್ದೇಶ ದಿಂದ ಈ ಸ್ಪರ್ಧೆ ಆಯೋಜನೆ ಮಾಡಲಾಗುತ್ತಿದೆ. 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕಿ ಯರಿಗಾಗಿ ಟ್ರಯಾಥ್ಲನ್, ಮೂರು ವಿಭಾಗಗಳಿದ್ದು, ಎ-ವಿಭಾಗದಲ್ಲಿ 60 ಮೀ. ಓಟ, ಲಾಂಗ್ ಜಂಪ್, ಹೈಜಂಪ್, ಬಿ-ವಿಭಾಗದಲ್ಲಿ 60 ಮೀ. ಓಟ, ಲಾಂಗ್‌ಜಂಪ್, ಶಾಟ್‌ಪುಟ್, ಸಿ-ವಿಭಾಗದಲ್ಲಿ 60 ಮೀ. ಓಟ, 600 ಮೀ. ಓಟ, ಲಾಂಗ್‌ಜಂಪ್, ಕಿಡ್ಸ್ ಜಾವೆಲಿನ್ 16 ವರ್ಷದೊಳಗಿನ ಬಾಲಕಿಯರಿಗಾಗಿ ವಿವಿಧ ಓಟ, ಜಂಪ್ ಹಾಗು ಡಿಸ್ಕಸ್ ಥ್ರೋ ಸ್ಪರ್ಧೆಗಳು ನಡೆಯಲಿವೆ ಎಂದು ವಿವರಿಸಿದರು.

14 ವರ್ಷದೊಳಗಿನ ಬಾಲಕಿಯರು 2011 ಡಿ.21 ರಿಂದ 2013 ಡಿ.20 ನಡುವೆ ಜನಿಸಿರ ಬೇಕು. 16 ವರ್ಷದೊಳಗಿನ ಬಾಲಕಿಯರು 2009 ಡಿ.21 ರಿಂದ 2011 ಡಿ.20ರ ನಡುವೆ ಜನಿಸಿರಬೇಕು. ವಿಜೇತರ ಆಯ್ಕೆ ಮತ್ತು ಅಂತರರಾಷ್ಟ್ರೀಯ ಕ್ರೀಡಾಪಟುಗಳ ಸಮ್ಮುಖದಲ್ಲಿ ಸ್ಪರ್ಧೆಗಳ ಮೌಲ್ಯ ಮಾಪನಕ್ಕಾಗಿ ಅಂತರರಾಷ್ಟ್ರೀಯ ಕ್ರೀಡಾಪಟು ಎಂ.ಕೆ. ಆಶಾ ಹಾಗು ಎಎಫ್‌ಐ ನೇಮಿಸಿರುವ ತರಬೇತಿದಾರರು ಹಾಜರಾಗಲಿದ್ದಾರೆಂದು ಹೇಳಿದರು.




ಕೇಂದ್ರ ಸರ್ಕಾರದ ಉದ್ಯೋಗಗಳಲ್ಲಿ ಶೇ.3 ರಷ್ಟು ಮೀಸಲು, ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆಯಲ್ಲಿ ಕೂಡ ಕ್ರೀಡಾಪಟುಗಳಿಗೆ ವಿಶೇಷ ಅವಕಾಶವಿದ್ದು, ಜಿಲ್ಲೆಯ ಬಾಲಕಿಯರು ಈ ಅವಕಾಶ ಸದುಪಯೋಗ ಪಡಿಸಿಕೊಳ್ಳಬೇಕು. ಕಾಂಗ್ರೆಸ್ ಮುಖಂಡ ಡಿ.ಸಿ. ಚಂದ್ರಶೇಖರ್ ಕ್ರೀಡಾಕೂಟ ಉದ್ಘಾಟಿಸಲಿದ್ದು, ಯುವ ಸಬಲೀಕರಣ ಕ್ರೀಡಾ ಇಲಾಖೆ ಅಧಿಕಾರಿ ಡಾ.ಆನಂದಮೂರ್ತಿ, ಅಂತರರಾಷ್ಟ್ರೀಯ ಅಥ್ಲೆಟಿಕ್ ಕ್ರೀಡಾಪಟು ಎಂ.ಕೆ.ಆಶಾ, ಟೈಮ್ಸ್ ಗ್ರೂಪ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಬಿ.ಕೆ. ಗಂಗಾಧರ್, ಸರ್ಕಾರಿ ಕಲಾ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಟಿ.ಆರ್.ಮಹೇಂದ್ರ ಕುಮಾರ್ ಮೊದಲಾದವರು ಹಾಜರಿರುವರು ಎಂದರು.

ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆಯ ನವೀನ್ ಕುಮಾರ್, ಅಜಯ್ ಇದ್ದರು.

## ಪಾದಚಾರಿ ರಸ್ತೆ ಆಕ್ರಮಿಸಿಕೊಂಡಿದ್ದ ಹಣ್ಣಿನ ಅಂಗಡಿಗಳ ತೆರವು

» ಮೊದಲನೇ ಪುಟದಿಂದ

ಮಹಾನಗರ ಪಾಲಿಕೆ ಪೌರಾಯುಕ್ತ ಕೃಷ್ಣಮೂರ್ತಿ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿ, ಮಾತನಾಡಿದ ಅವರು, ಕಸ್ತೂರಬಾ ರಸ್ತೆಯ ಫುಟ್‌ಪಾತ್ ಮತ್ತು ಸಾರ್ವಜನಿಕ ಜಾಗವನ್ನು ಅನಧಿಕೃತವಾಗಿ ಹಣ್ಣಿನ ವ್ಯಾಪಾರಿಗಳು ಆಕ್ರಮಿಸಿಕೊಂಡಿದ್ದರು. ಇದು ಕೇವಲ ಸಂಚಾರಕ್ಕೆ ತೊಂದರೆಯಲ್ಲ, ಅಸ್ವಚ್ಛತೆಗೂ ಕಾರಣವಾಗುತ್ತಿತ್ತು. ಜಿಲ್ಲಾಧಿಕಾರಿ ಮತ್ತು ಸರ್ಕಾರದ ಆದೇಶದಂತೆ ಸಾರ್ವಜನಿಕ ಜಾಗದಲ್ಲಿ ವ್ಯಾಪಾರ ಮಾಡುವುದು ನಿಷೇಧ. ನಿಗದಿ ಪಡಿಸಿದ ಸ್ಥಳಗಳಲ್ಲಿ ಮಾತ್ರ ವ್ಯಾಪಾರ ಮಾಡಬೇಕೆಂದು ತಿಳಿಸಿದರು.

ತೆರವು ನಂತರವೂ ಮತ್ತೆ ಅನಧಿಕೃತ ವ್ಯಾಪಾರಕ್ಕೆ ಮುಂದಾದರೆ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಸ್ಪಷ್ಟ ಎಚ್ಚರಿಕೆ ನೀಡಿದರು. ಈ ಕ್ರಮದಿಂದ ರಸ್ತೆಯ ಎರಡೂ ಬದಿಗಳ ಸಂಚಾರ ಸುಗಮವಾಗುವ ನಿರೀಕ್ಷೆ ವ್ಯಕ್ತವಾಗಿದೆ.

## ಡಿ.ಕೆ.ಶಿ. ಬೆಂಬಲಿಗರು ದೆಹಲಿಗೆ ದೌಡು

» ಮೊದಲನೇ ಪುಟದಿಂದ

ಸಿದ್ದರಾಮಯ್ಯ ಮತ್ತು ಶಿವಕುಮಾರ್ ನಡುವೆ ತೀವ್ರ ಪೈಪೋಟಿ ನಡೆದಿತ್ತು. ಆಗ ಹೈಕಮಾಂಡ್ ಡಿ.ಕೆ. ಶಿವಕುಮಾರ್ ಅವರ ಮನವೊಲಿಸಿ ಉಪ ಮುಖ್ಯಮಂತ್ರಿಯನ್ನಾಗಿ ಮಾಡಿತ್ತು. ಅಲ್ಲದೇ ಅಧಿಕಾರ ಹಂಚಿಕೆ ಸೂತ್ರದ ಆಧಾರದ ಮೇಲೆ ರಾಜಿ ಮಾಡಿಕೊಳ್ಳಲಾಗಿತ್ತು ಎನ್ನಲಾಗಿದೆ.

ಈ ಎಲ್ಲಾ ಬೆಳವಣಿಗೆಯ ಬೆನ್ನಲ್ಲೇ, ಹೈಕಮಾಂಡ್ ಮುಂದೆ ತಾವು ಮುಖ್ಯಮಂತ್ರಿಯಾಗುವ ಇಂಗಿತವನ್ನು ಹಲವಾರು ಬಾರಿ ವ್ಯಕ್ತಪಡಿಸಿದ್ದರೂ ಹೈಕಮಾಂಡ್ ಅದಕ್ಕೆ ಸ್ವಲ್ಪ ಕಾಯಬೇಕೆಂದು ಪದೇ ಪದೇ ಹೇಳಿರುವುದು ಅವ ರಿಗೂ ಸರಿ ಹೋಗುತ್ತಿಲ್ಲ. ಹಾಗಾಗಿ, ಈ ಬಾರಿ ಹೈಕಮಾಂಡ್ ಮುಂದೆ ಒಕ್ಕಲಿಗ ಟ್ರಂಪ್ ಕಾರ್ಡ್ ಪ್ಲೇ ಮಾಡಲು ಡಿ.ಕೆ.ಶಿವಕುಮಾರ್ ಅವರು ಮುಂದಾಗಿದ್ದಾರೆಂದು ಹೇಳಲಾಗಿದೆ. ಅದಕ್ಕಾಗಿಯೇ ರಾಜ್ಯ ಸಂಪುಟದಲ್ಲಿರುವ ತಮ್ಮ ಆಪ್ತ ಒಕ್ಕಲಿಗ ಸಚಿವರು ಹಾಗು ತಮ್ಮ ಆಪ್ತ ನಾಯಕರನ್ನು ದೆಹಲಿಗೆ ಕಳುಹಿಸಿ ನಾಯಕತ್ವ ಬದಲಾವಣೆಗೆ ಒತ್ತಡ ಹೇರಲು ಮುಂದಾಗಿದ್ದಾರೆ ಎನ್ನಲಾಗಿದೆ.

## ಅಮಾವಾಸ್ಯೆ ಪ್ರಯುಕ್ತ ವಿಶೇಷ ದೀಪೋತ್ಸವ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಹೊನ್ನಮಾರನಹಳ್ಳಿ ಗ್ರಾಮದ ಶ್ರೀ ಶನೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಛಟ್ಟಿ ಅಮಾವಾಸ್ಯೆ ಪ್ರಯುಕ್ತ ಹೋಮ, ಪೂಜೆ ಮತ್ತು ದೀಪೋತ್ಸವ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

ಈ ಹಿನ್ನೆಲೆಯಲ್ಲಿ ಮುಂಜಾನೆಯೇ ದೇಗುಲಕ್ಕೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ವಿದ್ಯುತ್ ದೀಪಲಂಕಾರ ಜಗಮಗಿಸುತ್ತಿದ್ದವು.

ದೇವಾಲಯದ ಟ್ರಸ್ಟ್‌ನ ಅಧ್ಯಕ್ಷ ಕುಮಾರಸ್ವಾಮಿ ನೇತೃತ್ವದಲ್ಲಿ ಬೆಳಿಗ್ಗೆ 6 ಗಂಟೆಗೆ ಶನೇಶ್ವರ ಸ್ವಾಮಿ ಮೂಲ ಮೂರ್ತಿಗೆ ತೈಲಾಭಿಷೇಕ ಮತ್ತು ಪಂಚಾಮೃತ ಅಭಿಷೇಕ ನಡೆಯಿತು. ನಂತರ ಗಣ ಹೋಮ, ನವಗ್ರಹ ಹೋಮ, ಶನಿ ಶಾಂತಿ ಹೋಮ ಕೈಗೊಂಡಿದ್ದು ದೇವರಿಗೆ ಪೂಜೆ ಸಲ್ಲಿಸಿ ಮಹಾಮಂಗಳಾರತಿ ನಡೆಯಿತು.

12 ಗಂಟೆಗೆ ರಾಜ ಸತ್ಯವ್ರತ ಕಥೆಯನ್ನು ಓದಲಾಯಿತು. ಚಿಟ್ಟಿ ಮೇಳದೊಂದಿಗೆ ಸಂಜೆ 4 ಗಂಟೆಗೆ ಶನೇಶ್ವರ ಸ್ವಾಮಿ ಉತ್ಸವ ಮೂರ್ತಿಯ ಮೆರವಣಿಗೆ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿತು.



ಸಂಜೆ 6 ಗಂಟೆಗೆ ಭಕ್ತರು ದೇವಸ್ಥಾನದ ಸುತ್ತ ದೀಪಗಳನ್ನು ಇಟ್ಟು ಬೆಳಗಿದರು. ಕೆಲವು ಭಕ್ತರು ವಿಶೇಷವಾಗಿ ಬೂದು ಕುಂಬಳ ಕಾಯಿ ಮೇಲೆ ದೀಪವನ್ನು ಹಚ್ಚಿಕೊಂಡು, ನವಗ್ರಹ ಮತ್ತು ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಿದರು.

ಧಾರ್ಮಿಕ ಕಾರ್ಯಕ್ರಮದಲ್ಲಿ ನುಗ್ಗೇಹಳ್ಳಿಯ ಪುರವರ್ಗದ ಹಿರೇಮಠದ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ, ತುಮಕೂರು ಜಿಲ್ಲೆಯ ಪಾಲಕೇರಿ ಮಠದ ನಾಗರಾಜು ಸ್ವಾಮೀಜಿ, ಆದಿಚುಂಚನಗಿರಿ ಕಬ್ಬಳಿ ಮಠದ ಶಿವಪುತ್ರನಾಥ ಸ್ವಾಮೀಜಿ ಸೇರಿ ಹಲವು ಜನಪ್ರತಿನಿಧಿಗಳು ಭಾಗವಹಿಸಿದ್ದರು. ಹಾಸನ, ಮಂಡ್ಯ, ತುಮಕೂರು, ಬೆಂಗಳೂರು ಜಿಲ್ಲೆಗಳಿಂದ ಭಕ್ತರು ಆಗಮಿಸಿದ್ದರು.

### ದಲಿತ ಸಂಘಟನೆಗಳ ಸಮನ್ವಯ ಸಮಿತಿ ರಾಜ್ಯ ಸಂಚಾಲಕ ಸೋಮಶೇಖರ್

# ನ.28ರಂದು ಆರ್‌ಎಸ್‌ಎಸ್ ವಿರುದ್ಧ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಸಂವಿಧಾನದ ಸಮರ್ಪಣಾ ದಿನದ ಅಂಗವಾಗಿ ಸಂವಿಧಾನ ವಿರೋಧಿ ಮತ್ತು ದಲಿತ ವಿರೋಧಿ ಆರ್‌ಎಸ್‌ಎಸ್ ವಿರುದ್ಧ ದಲಿತ ಸಂಘಟ ನೆಗಳ ಸಮನ್ವಯ ಸಮಿತಿಯಿಂದ ನ.28ರಂದು ನಗರದಲ್ಲಿ ಬೃಹತ್ ಪ್ರತಿಭಟನೆ ಹಾಗು ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ರಾಜ್ಯ ಸಂಚಾಲಕ ಎಂ.ಸೋಮಶೇಖರ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ರಾಜ್ಯದಲ್ಲಿ ನಿಷೇಧಿಸಿ, ಸಾಂವಿಧಾನದ ಮೌಲ್ಯಗಳನ್ನು ಎತ್ತಿ ಹಿಡಿಯ ಬೇಕೆಂದು ಸರ್ಕಾರವನ್ನು ಒತ್ತಾಯಿಸಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನ.28ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಬಳಿ ಇರುವ ಅಂಬೇಡ್ಕರ್ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿ, ನಂತರ ಅಂಬೇಡ್ಕರ್ ಭವನದಲ್ಲಿ ಸಮಾವೇಶ ನಡೆಸಲಾಗುವುದೆಂದು ಹೇಳಿದರು.



ಸಂವಿಧಾನ ರಚನೆಯಾಗಿ 75 ವರ್ಷ ಕಳೆದಿದ್ದರೂ ಪ್ರಬುದ್ಧ ಸಮಾಜ ನಿರ್ಮಾಣ ದೂರವೇ ಇದೆ. ಧರ್ಮ, ಜಾತಿ ಆಧಾರಿತ ರಾಜಕೀಯ, ಸುಳ್ಳು ಪ್ರಚಾರ ಹಾಗು ಅಸಹನೆಯನ್ನು ಉದ್ದೇಶ ಪೂರ್ವ ಕವಾಗಿ ಹರಡುತ್ತಿರುವ ಆರೋಪಕ್ಕೆ ಒಳಗಾದ ಸಂಸ್ಥೆ ಗಳ ವಿರುದ್ಧ ಕ್ರಮ ಆಗಬೇಕು. ನಾಗಪುರದ ಆರ್‌ಎಸ್‌ಎಸ್ ಕೇಂದ್ರ ಕಚೇರಿಯಲ್ಲಿ ರಾಷ್ಟ್ರಧ್ವಜ ಹಾರಿಸುವುದಿಲ್ಲ, ಸಂವಿಧಾನ ಮೌಲ್ಯಗಳನ್ನು ಕುಂದಿಸುವ ನಿಲುವು ಅವರದು. ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳಿಗೆ ಮೌನ ಬೆಂಬಲ, ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರನ್ನು ಅವಮಾನಿಸಿದ ಘಟನೆ, ರಾಜ್ಯದ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಕೊಲೆ ಬೆದರಿಕೆ ಹಾಕಿದ್ದು, ದೇಶವ್ಯಾಪಿ ದಲಿತರಿಗೆ ಅವಮಾನ, ಹಿಂಸೆ ಹಾಗು ದೌರ್ಜನ್ಯ ಇವು ಸಂವಿಧಾನ ವಿರೋಧಿ ನಿಲುವು ಎಂದು ದೂರಿದರು.

ಆರ್‌ಎಸ್‌ಎಸ್, ವಿಹೆಚ್‌ಪಿ, ಭಜರಂಗದಳ ಮೊದಲಾದ ಸಂಘಟನೆಗಳು ನೋಂದಣಿ ಆಗದ ಸಂಘಟನೆಗಳು. ಸಮಾಜ ಒಡೆಯುವುದೇ ಇವುಗಳ ಉದ್ದೇಶ. ಶಾಂತಿ ಕದಡುವುದು, ಕೋಮು ಗಲಭೆ, ಸಂವಿಧಾನ ವಿರೋಧಿ ಚಟುವಟಿಕೆ ನಡೆಸುವುದು. ಹೀಗಾಗಿ ಆರ್‌ಎಸ್‌ಎಸ್ ವಿರುದ್ಧ ಹೋರಾಡುವ ಶಕ್ತಿ ಇರುವುದು ದಲಿತ ಸಂಘಟನೆಗಳಿಗೆ ಮಾತ್ರ. ಆರ್‌ಎಸ್‌ಎಸ್‌ಗೆ ನೂರು ವರ್ಷ ತುಂಬಿರಬಹುದು, ದಲಿತ ಸಂಘಟನೆಗಳಿಗೆ 50 ವರ್ಷ ಆಗಿರಬಹುದು, ಆದರೂ ಅವರ ವಿರುದ್ಧ ಹೋರಾಡುವ ಶಕ್ತಿ ಇದೆ ಎಂದರು.

ದೇಶದಲ್ಲಿ ಹಿಂದೂ ರಾಷ್ಟ್ರೀಯತೆಯ ಹೆಸರಲ್ಲಿ ಮನುಸ್ಮೃತಿಯನ್ನು ಪ್ರತಿಷ್ಠಾಪಿಸುವ ಹುನ್ನಾರ ನಡೆಯುತ್ತಿದೆ. ಇದು ಭಾರತೀಯ ಬಹುತ್ವ, ಸಂವಿಧಾನ ಮೌಲ್ಯಗಳು ಹಾಗು ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ಅಪಾಯಕಾರಿಯಾಗಿದೆ. ಸಂವಿಧಾನ ಒಪ್ಪದ ಈ ಸಂಘಟನೆಯನ್ನು ನಿಷೇಧ ಮಾಡಬೇಕು. ಇದು ದೇಶದ್ರೋಹ ಸಂಘಟನೆ ಕೂಡಲೇ ಸಂಘಟನೆಯ ಚಟುವಟಿಕೆ ಗಳನ್ನು ನಿಷೇಧ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರನ್ನು ಒತ್ತಾಯಿಸುವುದಾಗಿ ಹೇಳಿದರು.

ಹಿರಿಯ ದಲಿತ ಮುಖಂಡರಾದ ಕೃಷ್ಣದಾಸ್, ಹೆಚ್.ಕೆ.ಸಂದೇಶ್, ಅಂಬುಗ ಮಲ್ಲೇಶ್, ಈರೇಶ್ ಹಿರೇಹಳ್ಳಿ, ನಾರಾಯಣದಾಸ್, ಎಂ.ವಿ.ಗೋವಿಂದ ರಾಜು, ಆರ್.ಪಿ.ಐ. ಸತೀಶ್, ರಾಜೇಶ್, ಚನ್ನ ಕೇಶವ, ತೋಟೇಶ್ ನಿಟ್ಟೂರ್, ಶಿವಪ್ಪನಾಯಕ ಇದ್ದರು.

### 973 ಹುದ್ದೆಗಳ ನೇಮಕಾತಿ: ಡಿ.20ರಿಂದ ಲಿಖಿತ ಪರೀಕ್ಷೆ

**ಬೆಂಗಳೂರು:** ತಾಂತ್ರಿಕ ಶಿಕ್ಷಣ, ಕೃಷಿ ಮಾರಾಟ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸೇರಿ ವಿವಿಧ ಇಲಾಖೆ, ನಿಗಮಗಳಲ್ಲಿನ 973 ಖಾಲಿ ಹುದ್ದೆಗಳ ನೇಮಕಾತಿಗೆ ಡಿ.20, 21, ಜ.24 ಮತ್ತು ಫೆ.22ರಂದು ಲಿಖಿತ ಪರೀಕ್ಷೆಗಳು ನಡೆಯಲಿವೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಹೇಳಿದೆ. ತಾಂತ್ರಿಕ ಶಿಕ್ಷಣ, ಕೃಷಿ ಮಾರಾಟ, ಬಿಡಿಎ, ಬೆಂಗಳೂರು ಜಲಮಂಡಳಿ, ಕೆಎಸ್‌ಡಿಎಲ್, ಕೆಕೆಆರ್‌ಟಿಸಿ, ಆರ್‌ಜಿಯುಎಚ್‌ಎಸ್, ಕೆಎಸ್‌ಐಡಿಸಿ, ಶಾಲಾ ಶಿಕ್ಷಣ ಇಲಾಖೆಗಳ ಒಟ್ಟು ಖಾಲಿ ಹುದ್ದೆಗಳಲ್ಲಿ ಹೈದರಾಬಾದ್ ಕರ್ನಾಟಕ (ಎಚ್‌ಕೆ) ಕೋಟಾಕ್ಕೆ 391, ಹೈದರಾಬಾದ್ ಕರ್ನಾಟಕ ಕೋಟಾ ಹೊರತಾದ ಹುದ್ದೆಗಳು 582 ಇವೆ.



**ಅರೇಹಳ್ಳಿ: ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ದೇಶಭಕ್ತಿ ಗೀತೆ ಗಾಯನ ಸ್ಪರ್ಧೆಯಲ್ಲಿ ಬೇಲೂರು ತಾಲ್ಲೂಕು ಅರೇಹಳ್ಳಿಯ ರೋಟರಿ ಶಾಲಾ ಸ್ಕೌಟ್ಸ್ ಅಂಡ್ ಗೈಡ್ಸ್, ಕಬ್ಸ್ ಅಂಡ್ ಬುಲ್ ಬುಲ್ಸ್ ಅತ್ಯುತ್ತಮ ಪ್ರದರ್ಶನ ತೋರಿ ಪ್ರಥಮ ಹಾಗು ಬುಲ್ ಬುಲ್ಸ್ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿ, ಶಾಲಾ ಶಿಕ್ಷಕರು ಅಭಿನಂದಿಸಿದ್ದಾರೆ.**

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019